24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 102 | ನವದೆಹಲಿ | ಬೆಲೆ ₹10 | ಅಕ್ಟೋಬರ್ 7 2026 ಬುಧವಾರ



## ನಿತ್ಯ ಪಂಚಾಂಗ 7.10.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ–ಆಶ್ವಯುಜ ಮಾಸ

ಯತಿ ಮಹಾಲಯ, ಕೂಡ್ಲಿ ಶಂಕರಭಾರತೀ ಆರಾಧನೆ, ಅಪ್ಪಯಂಸ್ವಾಮಿ ತಿರುನಕ್ಷತ್ರ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ನಂದಿನಿ ಹಾಲಿನ ದರ 8 ರೂ. ಏರಿಕೆ: ಸಂಪುಟ ಅಸ್ತು

## ಚುನಾವಣಾ ನೀತಿಸಂಹಿತೆ ಹಿನ್ನೆಲೆಯಲ್ಲಿ ನ.1 ರಿಂದ ಜಾರಿ ಸಾಧ್ಯತೆ

**ಬೆಂಗಳೂರು, ಅ.6:** ರಾಜ್ಯದ ಜನಸಾಮಾನ್ಯರಿಗೆ ಮತ್ತೊಂದು ಬೆಲೆ ಏರಿಕೆಯ ಶಾಕ್ ಎದುರಾಗುವ ಸಾಧ್ಯತೆಯಿದೆ. ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 8 ರೂ. ಹೆಚ್ಚಿಸಲು ಸರ್ಕಾರ ಮಟ್ಟದಲ್ಲಿ ಗಂಭೀರ ಸಿದ್ಧತೆ ನಡೆದಿದ್ದು, ಮುಖ್ಯಮಂತ್ರಿ ಡಿ.ಕಡ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಮಹತ್ವದ ಸಚಿವ ಸಂಪುಟ ಸಭೆಯಲ್ಲಿ ಈ ಪ್ರಸ್ತಾವನೆಗೆ ಬಹುತೇಕ ಸಚಿವರು ಸಹಮತ ವ್ಯಕ್ತಪಡಿಸಿದ್ದಾರೆ. ಆದರೆ, ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ/ಉಪಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ, ಈ ನಿರ್ಧಾರವನ್ನು ತಕ್ಷಣವೇ ಪ್ರಕಟಿಸದೆ ಚುನಾವಣಾ ಆಯೋಗದ ಅನುಮತಿ ಪಡೆದ ಬಳಿಕ ಅಥವಾ ನೀತಿ ಸಂಹಿತೆ ಮುಕ್ತಾಯವಾಗುವ ಅ.27ರ ನಂತರ ನ.1ರಿಂದ ಜಾರಿಗೊಳಿಸಲು ಸಚಿವ ಸಂಪುಟವು ಸಿಎಂ ವಿವೇಚನೆಗೆ ಬಿಟ್ಟಿದೆ.




ಹಾಲು ಉತ್ಪಾದಕರ ವೆಚ್ಚ ಹೆಚ್ಚಾಗಿರುವುದರಿಂದ ಮತ್ತು ಪಶು ಆಹಾರ, ಸಾಗಣೆ ವೆಚ್ಚ ಗಣನೀಯವಾಗಿ ಏರಿಕೆಯಾಗಿರುವುದರಿಂದ ಹಾಲಿನ ಖರೀದಿ ದರವನ್ನು ಹೆಚ್ಚಿಸಬೇಕೆಂದು ರೈತರು ಹಾಗೂ ಜಿಲ್ಲಾ ಹಾಲು ಒಕ್ಕೂಟಗಳು ನಿರಂತರವಾಗಿ ಕೆಎಂಎಫ್ ಮೇಲೆ ಒತ್ತಡ ಹೇರುತ್ತಿದ್ದವು. ನೆರೆಯ ಆಂಧ್ರಪ್ರದೇಶ, ಮಹಾರಾಷ್ಟ್ರ, ತಮಿಳುನಾಡು ಸೇರಿದಂತೆ ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ನಂದಿನಿ ಹಾಲಿನ ಮಾರಾಟ ದರ ಅತ್ಯಂತ ಕಡಿಮೆಯಿದೆ ಎಂಬ ವಾದವನ್ನು ಕೆಎಂಎಫ್ ಮಂಡಿಸಿತ್ತು. ಈ ಹಿನ್ನೆಲೆಯಲ್ಲಿ ಲೀಟರ್‌ಗೆ 8 ರೂ. ಹೆಚ್ಚಳ ಮಾಡಲು ಕೆಎಂಎಫ್ ಪ್ರಸ್ತಾವನೆ ಸಲ್ಲಿಸಿತ್ತು. ಹೆಚ್ಚಳವಾಗುವ ಈ ಮೊತ್ತದ ಬಹುಪಾಲು ನೇರವಾಗಿ ಹೈನುಗಾರರ (ರೈತರ) ಕೈಸೇರಲಿದೆ ಎಂಬ ಲೆಕ್ಕಾಚಾರದೊಂದಿಗೆ ಸಂಪುಟ ಸಭೆಯಲ್ಲಿ ಈ ನಿರ್ಧಾರಕ್ಕೆ ಸಮ್ಮತಿ ಸೂಚಿಸಲಾಗಿದೆ.

ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಚುನಾವಣಾ ಆಯೋಗಕ್ಕೆ ಪತ್ರ ಬರೆದು ವಿಶೇಷ ಅನುಮತಿ ಕೋರಲು ಉದ್ದೇಶಿಸಿದೆ. ಒಂದು ವೇಳೆ ಆಯೋಗ ಸಮ್ಮತಿಸದಿದ್ದರೆ, ನೀತಿಸಂಹಿತೆ ಅವಧಿ ಪೂರ್ಣಗೊಳ್ಳುವ ಅಕ್ಟೋಬರ್ 27ರ ನಂತರವೇ ಅಧಿಕೃತ ಅಧಿಸೂಚನೆ ಹೊರಬೀಳಲಿದೆ. ಒಂದು ವೇಳೆ ಲೀಟರ್‌ಗೆ 8 ರೂ. ಏರಿಕೆಯಾದರೆ, ದಿನನಿತ್ಯದ ಬಜೆಟ್ ಮೇಲೆ ನೇರ ಪರಿಣಾಮ ಬೀರಲಿದ್ದು, ಹೋಟೆಲ್ ತಿಂಡಿ–ತಿನಿಸುಗಳು, ಕಾಫಿ, ಚಹಾ ಹಾಗೂ ಹೈನು ಉತ್ಪನ್ನಗಳ (ಮೊಸರು, ಬೆಣ್ಣೆ, ತುಪ್ಪ) ದರಗಳೂ ದುಬಾರಿಯಾಗುವ ಸಾಧ್ಯತೆಯಿದೆ.

# ಮಠಗಳು, ಸ್ವಾಮೀಜಿಗಳ ಬಗ್ಗೆ ಅಪಾರ ಗೌರವ ಇದೆ: ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಅ.6:** ರಾಜ್ಯದ ಮಠಗಳು, ಸ್ವಾಮೀಜಿಗಳ ಬಗ್ಗೆ ನನಗೆ ಅಪಾರವಾದ ಗೌರವವಿದ್ದು, ಪ್ರತಿ ಸಂದರ್ಭದಲ್ಲಿಯೂ ಪಂಚಪೀಠಗಳ ಸ್ವಾಮೀಜಿಗಳ ಪಾದಗಳಿಗೆ ನಮಸ್ಕರಿಸಿ ಗೌರವ ತೋರಿದ್ದೇನೆ. ಸ್ವಾಮೀಜಿಗಳ ಬಗ್ಗೆ ಅಗೌರವವಾಗಿ ನಾನು ಮಾತನಾಡಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಇತ್ತೀಚೆಗೆ ವೀರಶೈವ ಸ್ವಾಮೀಜಿಗಳ ಕಾರ್ಯಕ್ರಮದಲ್ಲಿ ನಾನು ಯಾವ ಸ್ವಾಮೀಜಿಗಳಿಗೂ ಅಗೌರವದಿಂದ ಮಾತನಾಡಿಲ್ಲ. ಅಲ್ಲಿ ನೆರೆದಿದ್ದ ಜನರಿಗೆ ನೀವು ನಮ್ಮ ರಕ್ಷಣೆ, ಸೇವೆ ಮಾಡಬೇಕು, ನಾವೂ ನಿಮಗೆ ಸಹಾಯ ಮಾಡುತ್ತೇವೆ ಎಂದಿದ್ದೆ. ರಾಜ್ಯದ ಮಠಗಳು, ಸ್ವಾಮೀಜಿಗಳ ಬಗ್ಗೆ ಯಾರಿಗೆ ಗೌರವ ಇದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ನನಗೆ ಮಾತ್ರ ಅಪಾರವಾದ ಗೌರವವಿದೆ. ನಾನೂ ಕೂಡ ದೈವಭಕ್ತ. ನನ್ನ ಧರ್ಮದ ಮೇಲೆ ನನಗೆ ನಂಬಿಕೆಯಿದೆ. ಮಾನವ ಧರ್ಮಕ್ಕೆ ಜಯವಾಗಲಿ. ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ನಂಬಿರುವವನು ನಾನು? ಎಂದರು.

**ಮದವಿದ್ದರೆ ಇಳಿಸಲಿ, ಬೇಜಾರಿಲ್ಲ**

ಕ್ರೈಸ್ತರು, ಬೌದ್ಧರು, ಪರಿಶಿಷ್ಟರು, ಒಕ್ಕಲಿಗರು, ಲಿಂಗಾಯತರು, ಹಿಂದುಳಿದವರು, ಅಲ್ಪಸಂಖ್ಯಾತರೆಲ್ಲರೂ ಒಂದೇ ಎನ್ನುವ ಭಾವನೆಯಿಂದ ರಾಜಕೀಯ ಬದುಕನ್ನು ಪ್ರಾರಂಭಿಸಿದವನು ನಾನು. ಇದನ್ನು ಕೆಲವರು ತಿರುಚಿ, ಬಾಯಿಗೆ ಬಂದಂತೆ ಮಾತನಾಡುತ್ತಾರೆ. ಡಿ.ಕೆ. ಶಿವಕುಮಾರ್‌ಗೆ ಅಧಿಕಾರದ ಮದ ಬಂದಿದೆ ಎಂದು ಹೇಳುತ್ತಾರೆ. ನನಗೆ ಮದವಿದ್ದರೆ ಇಳಿಸಲಿ. ನಾನೇನು ಬೇಜಾರು ಮಾಡಿಕೊಳ್ಳುವುದಿಲ್ಲ ಎಂದರು.

# ರಾಜ್ಯದಲ್ಲಿ ವಿದ್ಯುತ್ ಪೂರೈಕೆ ಸಮಸ್ಯೆ ಇಲ್ಲ: ಸಚಿವ ಜಾರ್ಜ್ ಸ್ಪಷ್ಟನೆ



**ಚಿಕ್ಕಮಗಳೂರು, ಅ.6:** ರಾಜ್ಯದಲ್ಲಿ ವಿದ್ಯುತ್ ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ಗಂಭೀರ ಸಮಸ್ಯೆ ಇಲ್ಲ. ಇತ್ತೀಚೆಗೆ ಉಂಟಾದ ತಾತ್ಕಾಲಿಕ ವ್ಯತ್ಯಯವನ್ನು ದೊಡ್ಡ ಸಮಸ್ಯೆಯಾಗಿ ಬಿಂಬಿಸುವ ಅಗತ್ಯವಿಲ್ಲ. ಮುಂದಿನ ಬೇಸಿಗೆಯಲ್ಲಿ ವಿದ್ಯುತ್ ಕೊರತೆಯಾಗದಂತೆ ಈಗಿನಿಂದಲೇ ಸಿದ್ಧತೆ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.

ವಿದ್ಯುತ್ ಪೂರೈಕೆಯಲ್ಲಿನ ವ್ಯತ್ಯಯದ ಕುರಿತು ಮಾತನಾಡಿದ ಅವರು, ಕಳೆದ ಕೆಲವು ದಿನಗಳಲ್ಲಿ ಮಾತ್ರ ಒಂದು ಗಂಟೆಯಿಂದ ಒಂದೂವರೆ ಗಂಟೆಯವರೆಗೆ ಸಮಸ್ಯೆ ಉಂಟಾಗಿತ್ತು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಸಂದರ್ಭದಲ್ಲಿ ಸುಮಾರು 20 ಸಾವಿರ ಮೆಗಾವಾಟ್ ವಿದ್ಯುತ್ ಬೇಡಿಕೆಯಿದ್ದಾಗ, ಹೆಚ್ಚುವರಿ ವಿದ್ಯುತ್ ಲಭ್ಯವಿಲ್ಲದಿರುವುದು ಹಾಗೂ ಆರ್‌ಟಿಪಿಸಿಯ ಒಂದು ಘಟಕ ಸ್ಥಗಿತಗೊಂಡಿದ್ದರಿಂದ ತಾತ್ಕಾಲಿಕ ವ್ಯತ್ಯಯ ಎದುರಾಗಿತ್ತು ಎಂದರು.

**ಲೋಡ್‌ಶೆಡ್ಡಿಂಗ್ ಇಲ್ಲ:** ರಾಜ್ಯದಲ್ಲಿ ಲೋಡ್ ಶೆಡ್ಡಿಂಗ್ ಜಾರಿಗೊಳಿಸಿಲ್ಲ. ಮಳೆ ಕೊರತೆಯಿಂದ ರೈತರು ಬೆಳೆ ಉಳಿಸಿಕೊಳ್ಳಲು ಹೆಚ್ಚಿನ ಪ್ರಮಾಣದಲ್ಲಿ ಪಂಪ್‌ಸೆಟ್‌ಗಳಳನ್ನು ಬಳಸುತ್ತಿರುವುದರಿಂದ ವಿದ್ಯುತ್ ಬೇಡಿಕೆ ಹೆಚ್ಚಾಗಿದೆ. ಸ್ಥಳೀಯ ಮಟ್ಟದಲ್ಲಿ ಉಂಟಾಗುವ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಪಂಪಿಂಗ್ ಸ್ಟೇಷನ್ ನಿರ್ಮಾಣಕ್ಕೆ 125 ಎಕರೆ ಭೂಮಿ ಅಗತ್ಯವಿದ್ದು, ಪೈಪ್‌ಲೈನ್ ಅಳವಡಿಕೆ ಬಳಿಕ ಬಹುತೇಕ ಭೂಮಿಯನ್ನು ಮಣ್ಣಿನಿಂದ ಮುಚ್ಚಲಾಗುತ್ತದೆ. ಶಾಶ್ವತ ನಿರ್ಮಾಣಕ್ಕೆ ಸುಮಾರು 25 ಎಕರೆ ಮಾತ್ರ ಬೇಕಾಗುತ್ತದೆ. ಯೋಜನೆಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅನುಮತಿ ದೊರೆತ ಬಳಿಕ ಕಾಮಗಾರಿ ಆರಂಭಿಸಲಾಗುವುದು ಎಂದು ಕೆ.ಜೆ. ಜಾರ್ಜ್ ಸ್ಪಷ್ಟಪಡಿಸಿದರು.

# ಬರದಲ್ಲಿ ರೈತರು ಉಳುಮೆ ಮಾಡುವ ಸ್ಥಿತಿಯಲ್ಲಿಲ್ಲ, ನೇಗಿಲಯೋಗಿ ಯೋಜನೆ ಏಕೆ: ಅಶೋಕ್

**ಬೆಂಗಳೂರು, ಅ.6:** ನೇಗಿಲ ಯೋಗಿ ಯೋಜನೆ, ಬಸ್ ದರ ಏರಿಕೆ, ಸರ್ಕಾರಿ ವಸತಿ ನಿಲಯಗಳಲ್ಲಿ ನೀರಿನ ಸಮಸ್ಯೆ ಹಾಗೂ ಕಂದಾಯ ಸೇವೆಗಳ ಶುಲ್ಕ ಹೆಚ್ಚಳದ ವಿಚಾರಗಳನ್ನು ಪ್ರಸ್ತಾಪಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ವಿವಿಧ ನಿರ್ಧಾರಗಳು ಹಾಗೂ ಯೋಜನೆಗಳನ್ನು ವಿರೋಧಿಸಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ನವೆಂಬರ್ 1ರಿಂದ ನೇಗಿಲ ಯೋಗಿ ಯೋಜನೆ ಜಾರಿಗೆ ಮುಂದಾಗಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೆಲಿಕಾಪ್ಟರ್ ಬಿಟ್ಟು ಹಳ್ಳಿಗಳಿಗೆ ತೆರಳಿ ವಾಸ್ತವ ಪರಿಸ್ಥಿತಿ ನೋಡಬೇಕು. ಬರಗಾಲದಿಂದಾಗಿ ಹಲವು ರೈತರು ಉಳುಮೆ ಮಾಡುವ ಪರಿಸ್ಥಿತಿಯಲ್ಲೇ ಇಲ್ಲ. ಉಳುಮೆ ಮಾಡುತ್ತಿರುವ ರೈತರು ಕೂಡ ಯೋಜನೆ ಜಾರಿಯಾಗುವ ಮುನ್ನವೇ ತಮ್ಮ ಕೆಲಸ ಮುಗಿಸಿಕೊಂಡಿರುತ್ತಾರೆ ಎಂದು ಅಶೋಕ್ ಹೇಳಿದ್ದಾರೆ.

**ಕೈಗಳ ನೆರವಿನಿಂದಲೇ ಉಳುಮೆ:** ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದ ಸಮೀಪದ ಹಳೆಯೂರು ಗ್ರಾಮದ ರೈತ ಸುರೇಶ್ ಹಾಗೂ ಅವರ ಕುಟುಂಬ ಬರಗಾಲದಲ್ಲೂ ಕೈಯಿಂದ ಉಳುಮೆ ಮಾಡುತ್ತಿದ್ದಾರೆ. ಅವರ ಎತ್ತುಗಳು ವಿದ್ಯುತ್ ತಂತಿ ತಗುಲಿ ಮೃತಪಟ್ಟಿದ್ದು, ಟ್ರ್ಯಾಕ್ಟರ್ ಬಾಡಿಗೆ ಪಡೆಯಲು ಹಣವಿಲ್ಲದ ಪರಿಸ್ಥಿತಿಯಲ್ಲಿದ್ದಾರೆ. ಇಂತಹ ರೈತರಿಗೆ



ಯೋಜನೆಯ ಲಾಭ ಪಡೆಯಲು ಇನ್ನೂ ಒಂದು ತಿಂಗಳು ಕಾಯಬೇಕೇ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

ಇಂತಹ ಸಂದರ್ಭಗಳಲ್ಲಿ ಕಡಿಮೆ ಮೊತ್ತದ ನೆರವಿನ ಬದಲು ಉತ್ತಮ ಪರಿಹಾರ ನೀಡಿದ್ದರೆ ಅನೇಕ ರೈತರಿಗೆ ಅನುಕೂಲವಾಗುತ್ತಿತ್ತು. ಕೇವಲ ಯೋಜನೆಗಳನ್ನು ಘೋಷಿಸುವುದಷ್ಟೇ ಅಲ್ಲ, ಫಲಾನುಭವಿಗಳಿಗೆ ಸೂಕ್ತ ಸಮಯದಲ್ಲಿ ನೆರವು ತಲುಪಬೇಕು ಎಂದು ಅಶೋಕ್ ಹೇಳಿದ್ದಾರೆ.

**ಬಸ್ ದರ ಏರಿಕೆ, ಜನರ ಜೇಬಿಗೆ ಕತ್ತರಿ:** ಶಕ್ತಿ ಯೋಜನೆಯಡಿ ಉಚಿತ ಪ್ರಯಾಣ ನೀಡುತ್ತಿರುವುದರ ಹೊರೆ ಸರಿದೂಗಿಸಲು ಬಸ್ ಟಿಕೆಟ್ ದರ ಹೆಚ್ಚಿಸಲು ಸರ್ಕಾರ ಮುಂದಾಗಿರುವುದು ಯಾವ ರೀತಿಯ ಜನಪರ ಆಡಳಿತ ಎಂದು ಪ್ರಶ್ನಿಸಿದ್ದಾರೆ. ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳು ನಿರಂತರ ನಷ್ಟದಲ್ಲಿವೆ ಎಂದು ಹೇಳಿರುವ ಅವರು, ಸಂಸ್ಥೆಗಳನ್ನು ಸಮರ್ಥವಾಗಿ ನಿರ್ವಹಿಸುವುದು, ಸೋರಿಕೆ ಮತ್ತು ಅವ್ಯವಸ್ಥೆ ತಡೆಯುವ ಬದಲು ನಷ್ಟದ ಹೊರೆಯನ್ನು ಪ್ರಯಾಣಿಕರ ಮೇಲೆ ಹಾಕುವುದು ಸುಲಭದ ಮಾರ್ಗವಾಗಿದೆ ಎಂದು ಅಶೋಕ್ ಟೀಕಿಸಿದ್ದಾರೆ. ಸರ್ಕಾರ ಈ ನಿರ್ಧಾರದಿಂದ ಹಿಂದೆ ಸರಿಯಬೇಕು ಎಂದು ಆಗ್ರಹಿಸಿದ್ದಾರೆ.

ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಉದ್ದೇಶಿಸಿ ಮಾತನಾಡಿರುವ ಅಶೋಕ್, ಮೊದಲು ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯ ಮತ್ತು ನೀರಿನ ಸೌಲಭ್ಯ ಕಲ್ಪಿಸುವ ಜವಾಬ್ದಾರಿಯನ್ನು ಸರ್ಕಾರ ನಿರ್ವಹಿಸಬೇಕು ಎಂದು ಆಗ್ರಹಿಸಿದ್ದಾರೆ.

# ಅಂಬರೀಷ್‌ಗೆ ಮರಣೋತ್ತರ ಕರ್ನಾಟಕ ರತ್ನ ನೀಡುವಂತೆ ಪ್ರಸ್ತಾವನೆ ಸಲ್ಲಿಕೆ



**ಬೆಂಗಳೂರು, ಅ.6:** ಚಿತ್ರರಂಗದ ಜನಪ್ರಿಯ ನಟ, ರೆಬೆಲ್‌ಸ್ಟಾರ್ ದಿವಂಗತ ಡಾ. ಅಂಬರೀಶ್ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುವುದಾಗಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಡಾ.ಎಂ.ಎಚ್.ಅಂಬರೀಶ್ ಅವರು ಕನ್ನಡನಾಡು, ನುಡಿ, ಕಲೆ ಹಾಗೂ ರಾಜಕೀಯ ಕ್ಷೇತ್ರಕ್ಕೆ ನೀಡಿರುವ ಕೊಡುಗೆ ಅಪಾರವಾಗಿದೆ. ಅವರ ಜನಪ್ರಿಯತೆ ಹಾಗೂ ಅಭಿಮಾನಿಗಳ ಆಶಯವನ್ನು ಪರಿಗಣಿಸಿ, ಮುಂಬರುವ ರಾಜ್ಯೋತ್ಸವದ ಸಂದರ್ಭದಲ್ಲಿ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಗೌರವಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ರಾಮಲಿಂಗಾರೆಡ್ಡಿ ಹೇಳಿದ್ದಾರೆ. ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದ ಅಂಬರೀಶ್ ಅವರು ಜನರೊಂದಿಗೆ ನಿಕಟವಾಗಿ ಬೆರೆತು, ಅವರ ಕಷ್ಟಗಳಿಗೆ ಸ್ಪಂದಿಸುತ್ತಿದ್ದ ಅಚ್ಚುಮೆಚ್ಚಿನ ವ್ಯಕ್ತಿಯಾಗಿದ್ದರು. ಚಿತ್ರರಂಗದ ಜೊತೆಗೆ ರಾಜಕೀಯ ಕ್ಷೇತ್ರದಲ್ಲಿಯೂ ಸೇವೆ ಸಲ್ಲಿಸಿರುವ ಅವರು ನಾಡಿನ ಜನರ ಮನಸ್ಸಿನಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ಅಂಬರೀಶ್ ಅವರಿಗೆ ಸಲ್ಲಬೇಕಾದ ಈ ಗೌರವವು ಅವರೊಬ್ಬರ ಗೌರವ ಮಾತ್ರವಲ್ಲ, ನಾಡಿನ ಪ್ರತಿಯೊಬ್ಬ ಕನ್ನಡಿಗನ ಗೌರವವಾಗಿದೆ ಎಂದು ರಾಮಲಿಂಗಾರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತು ಸಚಿವ ರಾಮಲಿಂಗಾರೆಡ್ಡಿ ಅವರು ಮಂಗಳವಾರ ಸರ್ಕಾರಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಿದ್ದು, ಮುಂಬರುವ ರಾಜ್ಯೋತ್ಸವದ ವೇಳೆಗೆ ಅಂಬರೀಶ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಮನವಿ ಮಾಡಿದ್ದಾರೆ.

## ರಾಜ್ಯವ್ಯಾಪಿ ಕೊಳವೆಬಾವಿ ಸುರಕ್ಷತಾ ಅಭಿಯಾನ: ಸಚಿವ ಅಜಯ್ ಸಿಂಗ್

# ತೆರೆದ ಕೊಳವೆಬಾವಿಮುಕ್ತ ಕರ್ನಾಟಕ ನಿರ್ಮಾಣದ ಗುರಿ

**ಬೆಂಗಳೂರು, ಅ.6:** ವಿಫಲ ಹಾಗೂ ನಿರುಪಯುಕ್ತ ತೆರೆದ ಕೊಳವೆಬಾವಿಗಳಿಂದ ಮಕ್ಕಳು ಅಪಘಾತಕ್ಕೀಡಾಗುವ ಹಾಗೂ ಜಾನುವಾರುಗಳಿಗೆ ಅಪಾಯ ಉಂಟಾಗುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ರಾಜ್ಯಾದ್ಯಂತ ಕೊಳವೆಬಾವಿ ಸುರಕ್ಷತಾ ಅಭಿಯಾನ ಆರಂಭಿಸಲು ಮುಂದಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಸಿಂಗ್ ತಿಳಿಸಿದ್ದಾರೆ.




ಅಭಿಯಾನದ ರೂಪುರೇಷೆ, ಅನುಷ್ಠಾನ ವಿಧಾನ, ಇಲಾಖಾವಾರು ಮಾಹಿತಿ ಸಂಗ್ರಹ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದಂತೆ ಸಮಗ್ರ ಕಾರ್ಯಯೋಜನೆ ಸಿದ್ಧಪಡಿಸುವಂತೆ ಅಂತರ್ಜಲ ಅಭಿವೃದ್ಧಿ ನಿರ್ದೇಶನಾಲಯಕ್ಕೆ ಸಚಿವರು ಸೂಚನೆ ನೀಡಿದ್ದಾರೆ.

ಕೊಳವೆಬಾವಿ ಕೊರೆಯುವ ಸಂದರ್ಭದಲ್ಲಿ ನೀರು ಸಿಗದೆ ವಿಫಲವಾದ ಅಥವಾ ಬಳಕೆಗೆ ಯೋಗ್ಯವಾಗದ ಕೊಳವೆಬಾವಿಗಳನ್ನು ಸುರಕ್ಷಿತವಾಗಿ ಮುಚ್ಚುವುದು ಕಡ್ಡಾಯವಾಗಿದೆ. ಸುಪ್ರೀಂ ಕೋರ್ಟ್ ನಿರ್ದೇಶನಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಈ ಕುರಿತು ಅಗತ್ಯ ಸುರಕ್ಷತಾ ಕ್ರಮಗಳು ಹಾಗೂ ಮೇಲ್ವಿಚಾರಣಾ ವ್ಯವಸ್ಥೆಗೆ ಕಾನೂನುಬದ್ಧ ಅವಕಾಶ ಕಲ್ಪಿಸಲಾಗಿದೆ. ಆದರೂ ದಾಖಲೆಗಳಿಗೆ ಬಾರದ ಅಥವಾ ಸಮರ್ಪಕವಾಗಿ ಮುಚ್ಚದೇ ಬಿಟ್ಟಿರುವ ಕೊಳವೆಬಾವಿಗಳು ಇರುವ ಸಾಧ್ಯತೆಯನ್ನು ಸಂಪೂರ್ಣವಾಗಿ ತಳ್ಳಿಹಾಕಲಾಗುವುದಿಲ್ಲ ಎಂದು ಸಚಿವರು ಹೇಳಿದ್ದಾರೆ.

ಮೊದಲ ಹಂತದಲ್ಲಿ ಸಣ್ಣ ನೀರಾವರಿ ಇಲಾಖೆಯೇ ಕೊರೆಸಿರುವ ಎಲ್ಲ ವಿಫಲ ಮತ್ತು ನಿರುಪಯುಕ್ತ ಕೊಳವೆಬಾವಿಗಳನ್ನು ಗುರುತಿಸಿ, ಅವು ಸುರಕ್ಷಿತವಾಗಿ ಮುಚ್ಚಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗುವುದು. ಅಗತ್ಯವಿರುವ ಕಡೆ ತಕ್ಷಣ ಮುಚ್ಚುವ ಕ್ರಮ ಕೈಗೊಳ್ಳಲಾಗುವುದು. ಮುಂದಿನ ಹಂತದಲ್ಲಿ ಇತರೆ ಸರ್ಕಾರಿ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಪ್ರದೇಶಗಳಲ್ಲಿರುವ ವಿಫಲ ಅಥವಾ ತೆರೆದ ಕೊಳವೆಬಾವಿಗಳ ಮಾಹಿತಿಯನ್ನು ಸಂಗ್ರಹಿಸಿ, ಸಂಬಂಧಿಸಿದ ಇಲಾಖೆಗಳ ಸಮನ್ವಯದಲ್ಲಿ ಸುರಕ್ಷಿತ ಮುಚ್ಚುವಿಕೆಗೆ ಕ್ರಮ ಕೈಗೊಳ್ಳಲಾಗುವುದು. ಇದರ ಜೊತೆಗೆ ಸಾರ್ವಜನಿಕರಿಂದ ಅಪಾಯಕಾರಿ ತೆರೆದ ಕೊಳವೆಬಾವಿಗಳ ಮಾಹಿತಿ ಪಡೆಯಲು ವಾಟ್ಸಾಪ್ ಸಂಖ್ಯೆ, ವೆಬ್ ಆಧಾರಿತ ವರದಿ ವ್ಯವಸ್ಥೆ, ಸ್ಥಳದ ಜಿಯೋ–ಟ್ಯಾಗ್ಡ್ ಚಿತ್ರಗಳು ಹಾಗೂ ದೂರುದಿಂದ ಮುಚ್ಚುವಿಕೆಯವರೆಗೆ ಟ್ರ್ಯಾಕಿಂಗ್ ವ್ಯವಸ್ಥೆ ರೂಪಿಸುವ ಸಾಧ್ಯತೆಯನ್ನು ಪರಿಶೀಲಿಸಿ ಕಾರ್ಯಯೋಜನೆಯಲ್ಲಿ ಸೇರಿಸುವಂತೆ ಸಚಿವರು ಸೂಚಿಸಿದ್ದಾರೆ. ಸರ್ಕಾರದ ಗಮನಕ್ಕೆ ಬಾರದ ಅಪಾಯಕಾರಿ ತೆರೆದ ಕೊಳವೆಬಾವಿಗಳನ್ನೂ ಗುರುತಿಸಿ ಸುರಕ್ಷಿತಗೊಳಿಸಬೇಕು. ರಾಜ್ಯವನ್ನು ತೆರೆದ ಕೊಳವೆಬಾವಿ ಮುಕ್ತ ಕರ್ನಾಟಕವನ್ನಾಗಿಸುವುದು ನಮ್ಮ ಸರ್ಕಾರದ ಧೃಢ ಸಂಕಲ್ಪವಾಗಿದೆ. ಈ ಅಭಿಯಾನಕ್ಕೆ ಸಂಬಂಧಿಸಿದ ಸಮಗ್ರ ಕಾರ್ಯಯೋಜನೆಯನ್ನು ಸಿದ್ಧಪಡಿಸುವಂತೆ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ರಾಜೇಶ್ ಅಮ್ಮಿನಬಾವಿ ಹಾಗೂ ಅಂತರ್ಜಲ ಅಭಿವೃದ್ಧಿ ನಿರ್ದೇಶನಾಲಯದ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದ್ದಾರೆ.

# ಮಲ್ಲೇಶ್ವರದಲ್ಲಿ ಅಲ್ಪಸಂಖ್ಯಾತ ಮತದಾರರ ಹೆಸರು ತೆಗೆದುಹಾಕಲಾಗುತ್ತಿದೆ: ರಮೇಶ್‌ಬಾಬು ದೂರು

**ಬೆಂಗಳೂರು, ಅ.6:** ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಿಂದ ಅಲ್ಪಸಂಖ್ಯಾತ ಸಮುದಾಯದ ಮತದಾರರ ಹೆಸರುಗಳನ್ನು ತೆಗೆದುಹಾಕಲು, ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು 'ಮತದಾರರ ನೋಂದಣಿ ನಿಯಮಗಳು, 1960'ರ ಅಡಿಯಲ್ಲಿ ಸುಳ್ಳು 'ನಮೂನೆ–7' ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆ ಎಂದು ಆರೋಪಿಸಿ ಕೆಪಿಸಿಸಿಯ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ಹಾಗೂ ವಕೀಲ ರಮೇಶ್ ಬಾಬು ದೂರು ಸಲ್ಲಿಸಿದ್ದಾರೆ. ಈ ಉದ್ದೇಶಕ್ಕಾಗಿ ಪಕ್ಷದ ಕಚೇರಿಯನ್ನು ಬಳಸಲಾಗಿದೆ ಎಂದೂ ದೂರಿನಲ್ಲಿ ಆರೋಪಿಸಲಾಗಿದೆ. ಮತದಾರರ ನೋಂದಣಿ ಅಧಿಕಾರಿಯ ಮುಂದೆ ಸುಳ್ಳು ಘೋಷಣೆಗಳು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಮೂಲಕ, ಕೋಮು ಆಧಾರದ ಮೇಲೆ ಕಾನೂನುಬದ್ಧ ಮತದಾರರನ್ನು ಮತದಾನದ ಹಕ್ಕಿನಿಂದ ವಂಚಿತರನ್ನಾಗಿಸುವ ಸಂಘಟಿತ ಪ್ರಯತ್ನವನ್ನು ಈ ಆರೋಪಗಳು ಬಹಿರಂಗಪಡಿಸುತ್ತವೆ. ಇದು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳಿಗೆ ಹಾಗೂ ಸಂವಿಧಾನದ 326ನೇ ವಿಧಿಯಡಿ ಖಾತರಿಪಡಿಸಲಾದ ಮತದಾನದ ಹಕ್ಕಿಗೆ ಧಕ್ಕೆ ತರುವಂತಿದೆ. ಈ ಆರೋಪಗಳು ಸಾಬೀತಾದರೆ, 'ಜನತಾ ಪ್ರಾತಿನಿಧ್ಯ ಕಾಯಿದೆ, 1950'ರ ಸೆಕ್ಷನ್ 31; 'ಭಾರತೀಯ ನ್ಯಾಯ ಸಂಹಿತೆ, 2023'ರ ಸೆಕ್ಷನ್ 61(2), 318, 336 ಮತ್ತು 340; ಹಾಗೂ ಮತದಾರರ ಆಯ್ಕೆಯು ಧರ್ಮದ ಆಧಾರದ ಮೇಲೆ ನಡೆದಿದ್ದರೆ ಸೆಕ್ಷನ್ 353 ಮತ್ತು 196ರ ಅಡಿಯಲ್ಲಿ ಅಪರಾಧಗಳು ಸಾಬೀತಾಗಬಹುದು ಎಂದು ರಮೇಶ್ ಬಾಬು ತಿಳಿಸಿದ್ದಾರೆ. ಅಲ್ಲದೆ, ಈ ಮಾಹಿತಿಯು ಗಂಭೀರ ಸ್ವರೂಪದ ಅಪರಾಧಗಳನ್ನು ಬಹಿರಂಗಪಡಿಸುತ್ತಿರುವುದರಿಂದ, 'ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023'ರ ಸೆಕ್ಷನ್ 173ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲು ನಿರ್ದೇಶನ ನೀಡುವಂತೆಯೂ ಅವರು ಕೋರಿದ್ದಾರೆ.

> ಈ ವಂಚನೆಯ ಅಥವಾ ಸಂಶಯಾಸ್ಪದ 'ಫಾರ್ಮ್ 7' ಅರ್ಜಿಗಳ ಸಂಪೂರ್ಣ ಪರಿಶೀಲನೆ ನಡೆಯುವವರೆಗೆ, ಅವುಗಳ ಆಧಾರದ ಮೇಲೆ ಯಾವುದೇ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡದಂತೆ ಖಚಿತಪಡಿಸಿಕೊಳ್ಳಲು ಚುನಾವಣಾ ನೋಂದಣಿ ಅಧಿಕಾರಿ ಮತ್ತು ಬ್ಲಾಕ್ ಮಟ್ಟದ ಅಧಿಕಾರಿಗಳಿಗೆ ತಕ್ಷಣದ ಸೂಚನೆಗಳನ್ನು ನೀಡಿ
>
> – **ರಮೇಶ್ ಬಾಬು**, ಕೆಪಿಸಿಸಿ

# ಕೆಪಿಟಿಸಿಎಲ್‌ನಿಂದ ಮತ್ತೊಂದು ಮೈಲಿಗಲ್ಲು: ವಿದ್ಯುತ್ ಪ್ರಸರಣಾ ಜಾಲಕ್ಕೆ ಬಲ

## ಬೆಂಗಳೂರಿನಲ್ಲಿ 12 ಕಿ.ಮೀ. 220 ಕೆವಿ ಮಲ್ಟಿ ಸರ್ಕ್ಯೂಟ್ ಪ್ರಸರಣ ಮಾರ್ಗ ಯಶಸ್ವಿ ಕಮಿಷನ್

**ಬೆಂಗಳೂರು, ಅ.6:** ಬೆಂಗಳೂರಿನ ವಿದ್ಯುತ್ ಪ್ರಸರಣ ಜಾಲವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್), 12 ಕಿ.ಮೀ. ಉದ್ದದ 220 ಕೆವಿ ಮಲ್ಟಿ ಸರ್ಕ್ಯೂಟ್ ಪ್ರಸರಣ ಮಾರ್ಗವನ್ನು ಯಶಸ್ವಿಯಾಗಿ ಕಮಿಷನ್ ಮಾಡುವ ಮೂಲಕ ಮತ್ತೊಂದು ಮಹತ್ವದ ಮೈಲಿಗಲ್ಲು ಸಾಧಿಸಿದೆ.

ಬಾಗಲೂರು ರಸ್ತೆ ಕ್ರಾಸಿಂಗ್ ಸಮೀಪದ ಕೇಬಲ್ ಟರ್ಮಿನೇಟಿಂಗ್ ಟವರ್‌ನಿಂದ ಹಾಲಿ 220 ಕೆವಿ ಹೂಡಿ–ಎಚ್‌ಬಿಆರ್ ಹಾಗೂ ಐಟಿಐ–ಮಾನ್ಯತಾ ಟೆಕ್ ಪಾರ್ಕ್ ಪ್ರಸರಣ ಮಾರ್ಗಗಳಿಗೆ ಡಬಲ್ ಎಲ್.ಐ.ಎಲ್.ಒಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

ಈ ನಿರ್ದಿಷ್ಟ ಯೋಜನೆಯು ಸ್ಥಳೀಯ ಪರಿಸ್ಥಿತಿ, ತಾಂತ್ರಿಕ ಕಾರ್ಯಸಾಧ್ಯತೆ ಮತ್ತು ಕಾರ್ಯಾಚರಣಾ ಅಗತ್ಯಗಳನ್ನು ಸಮಗ್ರವಾಗಿ ಪರಿಶೀಲಿಸಿ ಸೂಕ್ತ ಎಂಜಿನಿಯರಿಂಗ್ ವಿನ್ಯಾಸವನ್ನು ಅಳವಡಿಸಲಾಗಿದೆ. ಯೋಜನೆಯ ಭಾಗವಾಗಿ, ವಿದ್ಯಾನಗರ ಪ್ರದೇಶದಲ್ಲಿನ ಲಭ್ಯ ಪ್ರಸರಣ ಮಾರ್ಗದ ಜಾಗದ ಒಂದು ಭಾಗವನ್ನು ತಾಂತ್ರಿಕವಾಗಿ ಸೂಕ್ತ ರೀತಿಯಲ್ಲಿ ಬಳಸಿಕೊಂಡು 220 ಕೆವಿ ಮಲ್ಟಿ ಸರ್ಕ್ಯೂಟ್ ಮಾರ್ಗವನ್ನು ನಿರ್ಮಿಸಲಾಗಿದೆ. ಹಾಲಿ ವಿದ್ಯುತ್ ಮಾರ್ಗಗಳು, ರಸ್ತೆ ಸಂಚಾರ, ನಗರ ಮೂಲಸೌಕರ್ಯ ಹಾಗೂ ಸೀಮಿತ ಕಾರ್ಯಸ್ಥಳಗಳ ನಡುವೆ ಹೆಚ್ಚಿನ ಸಾಮರ್ಥ್ಯದ ಪ್ರಸರಣ ಮಾರ್ಗದ ಕಾಮಗಾರಿ ಕೈಗೊಳ್ಳುವುದು ತಾಂತ್ರಿಕ ಮತ್ತು ಕಾರ್ಯಾಚರಣೆಯ ದೃಷ್ಟಿಯಿಂದ ಸವಾಲಿನ ಕಾರ್ಯವಾಗಿತ್ತು.

ಕೆಪಿಟಿಸಿಎಲ್‌ನ ಇಂಜಿನಿಯರ್‌ಗಳು, ತಾಂತ್ರಿಕ ಸಿಬ್ಬಂದಿ ಮತ್ತು ಯೋಜನಾ ತಂಡಗಳು ಸೂಕ್ತ ಯೋಜನೆ, ಸುರಕ್ಷತಾ ಕ್ರಮಗಳು ಹಾಗೂ ವಿವಿಧ ವಿಭಾಗಗಳ ಸಮನ್ವಯದ ಮೂಲಕ ಈ ಸವಾಲುಗಳನ್ನು ನಿಭಾಯಿಸಿ ಯೋಜನೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿವೆ.

> ಬೆಂಗಳೂರು ನಗರದಲ್ಲಿ ವಿದ್ಯುತ್ ಬೇಡಿಕೆ ನಿರಂತರವಾಗಿ ಹೆಚ್ಚುತ್ತಿದ್ದು, ಅದಕ್ಕೆ ಅನುಗುಣವಾಗಿ ಪ್ರಸರಣ ಮೂಲಸೌಕರ್ಯವನ್ನೂ ಬಲಪಡಿಸಲಾಗುತ್ತಿದೆ. ನಗರ ಪ್ರದೇಶದಲ್ಲಿನ ಪ್ರತಿಯೊಂದು ಪ್ರಸರಣ ಯೋಜನೆಗೂ ಅದರ ಸ್ಥಳೀಯ ಪರಿಸ್ಥಿತಿ, ತಾಂತ್ರಿಕ ಕಾರ್ಯಸಾಧ್ಯತೆ ಮತ್ತು ಭವಿಷ್ಯದ ಅಗತ್ಯಗಳನ್ನು ಪರಿಗಣಿಸಿ ಸೂಕ್ತ ಪರಿಹಾರ ರೂಪಿಸಬೇಕಾಗುತ್ತದೆ. ಈ ಯೋಜನೆಯಲ್ಲಿ ಎದುರಾದ ಸವಾಲುಗಳಿಗೆ ಕೆಪಿಟಿಸಿಎಲ್ ತಾಂತ್ರಿಕವಾಗಿ ಸೂಕ್ತ ಪರಿಹಾರ ಕಂಡುಕೊಂಡು ಕಾಮಗಾರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವುದು ಶ್ಲಾಘನೀಯ.
>
> – **ಕೆ.ಜೆ.ಜಾರ್ಜ್** । ಇಂಧನ, ಪ್ರವಾಸೋದ್ಯಮ ಸಚಿವ



> ಈ ಯೋಜನೆಯ ಸ್ಥಳೀಯ ಪರಿಸ್ಥಿತಿ ಹಾಗೂ ತಾಂತ್ರಿಕ ಅಗತ್ಯಗಳು ವಿಶಿಷ್ಟವಾಗಿದ್ದವು. ಅವುಗಳನ್ನು ಸಮಗ್ರವಾಗಿ ಅಧ್ಯಯನ ಮಾಡಿ, ತಾಂತ್ರಿಕವಾಗಿ ಕಾರ್ಯಸಾಧ್ಯವಾದ ವಿನ್ಯಾಸ ಮತ್ತು ಅನುಷ್ಠಾನ ವಿಧಾನವನ್ನು ಆಯ್ಕೆ ಮಾಡಲಾಗಿದೆ. ಹಾಲಿ ವಿದ್ಯುತ್ ಜಾಲ ಮತ್ತು ನಗರ ಮೂಲಸೌಕರ್ಯದ ನಡುವೆ 12 ಕಿ.ಮೀ. ಉದ್ದದ 220 ಕೆವಿ ಮಲ್ಟಿ ಸರ್ಕ್ಯೂಟ್ ಮಾರ್ಗವನ್ನು ಯಶಸ್ವಿಯಾಗಿ ಕಮಿಷನ್ ಮಾಡಿರುವುದು ನಮ್ಮ ಇಂಜಿನಿಯರ್‌ಗಳು ಮತ್ತು ಸಿಬ್ಬಂದಿಯ ತಾಂತ್ರಿಕ ಸಾಮರ್ಥ್ಯ ಹಾಗೂ ಸಮನ್ವಯದ ಫಲವಾಗಿದೆ.
>
> – **ಡಾ.ವಿ.ರಾಮ್‌ಪ್ರಸಾತ್ ಮನೋಹರ್**, । **ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ**

# ಪ್ರಜಾಪ್ರಭುತ್ವದ ಆತ್ಮಹತ್ಯೆಯ ವಿಚಾರ: ಜ್ಞಾನೇಶ್‌ಕುಮಾರ್ ರಾಜೀನಾಮೆಗೆ

## ಓಟ್ ಬಚಾವ್, ದೇಶ ಬಚಾವ್ ಹೆಸರಿನಲ್ಲಿ ಹೋರಾಟ: ಬಿ.ಕೆ.ಹರಿಪ್ರಸಾದ್

**ನವದೆಹಲಿ, ಅ.6:** ಕೇಂದ್ರ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಆಗ್ರಹಿಸಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ಇಬ್ಬರು ಚುನಾವಣಾ ಆಯುಕ್ತರು ಜ್ಞಾನೇಶ್‌ಕುಮಾರ್ ಅವರ ಕಾರ್ಯವೈಖರಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಳೆದ ಹತ್ತು ತಿಂಗಳಲ್ಲಿ 14 ಬಾರಿ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಹೇಳಿದರು.

ಈ ವಿಚಾರದಲ್ಲಿ ಸುಪ್ರೀಂಕೋರ್ಟ್ ಕೂಡ ಸ್ಪಷ್ಟ ಅಭಿಪ್ರಾಯ ವ್ಯಕ್ತಪಡಿಸಿದೆ ಎಂದರು. ಇದು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ಆತ್ಮಹತ್ಯೆಯ ವಿಚಾರ. ಹೀಗಾಗಿ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಲೇಬೇಕು ಎಂದು ಹರಿಪ್ರಸಾದ್ ಒತ್ತಾಯಿಸಿದರು.

ದೇಶದಲ್ಲಿ ದಬ್ಬಾಳಿಕೆ ನಡೆಯುವುದಿಲ್ಲ ಎಂದು ಹೇಳಿದ ಅವರು, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಬಂಧಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಪ್ರಜಾಪ್ರಭುತ್ವ ವ್ಯವಸ್ಥೆ ಬದಲಿಗೆ ಸರ್ವಾಧಿಕಾರಿ ಧೋರಣೆ ಪ್ರದರ್ಶಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಭಯಗೊಂಡಿದೆ. ಮತಗಳ್ಳತನದ ಭಯ



ಅವರನ್ನು ಕಾಡುತ್ತಿದೆ ಎಂದು ಹರಿಪ್ರಸಾದ್ ಆರೋಪಿಸಿದರು.

ಸೋಮವಾರ ದೆಹಲಿಯಲ್ಲಿ ಕಾಂಗ್ರೆಸ್ ರಾಜ್ಯ ಘಟಕಗಳ ಅಧ್ಯಕ್ಷರ ಸಭೆ ನಡೆದಿದ್ದು, ಮುಂದಿನ ಎರಡು ತಿಂಗಳ ಹೋರಾಟಕ್ಕೆ ರೂಪುರೇಷೆ ಸಿದ್ಧಪಡಿಸುವಂತೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದರು. ಅಕ್ಟೋಬರ್ 8ರಂದು ಕೆಪಿಸಿಸಿಯಲ್ಲಿ ಸಭೆ ನಡೆಸಿ, ಮುಂದಿನ ಎರಡು ತಿಂಗಳ ಕಾಲ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುವುದು. ಓಟ್ ಬಚಾವ್, ದೇಶ ಬಚಾವ್ ಹೆಸರಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

**ಆರ್. ಅಶೋಕ್ ಹೇಳಿಕೆಗೆ ತಿರುಗೇಟು**

ಹರಿಪ್ರಸಾದ್ ಒಂದು ಚುನಾವಣೆಯನ್ನೂ ಗೆದ್ದಿಲ್ಲ ಎಂಬ ಬಿಜೆಪಿ ನಾಯಕ ಆರ್. ಅಶೋಕ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಹರಿಪ್ರಸಾದ್, ನಾನು ಚುನಾವಣೆ ಗೆದ್ದಿದ್ದೇನೋ, ಸೋತಿದ್ದೇನೋ ಬೇರೆ ವಿಚಾರ. ವಿದ್ಯಾರ್ಥಿ ದೆಸೆಯಿಂದಲೇ ರಾಜಕೀಯದಲ್ಲಿದ್ದೇನೆ. ನಾನು ಮೂರು ಚುನಾವಣೆ ಸೋತಿದ್ದೇನೆ, ಆದರೆ ಸತ್ತಿಲ್ಲ. ರಾಜಕೀಯದಿಂದ ದೂರ ಓಡಿಹೋಗಿಲ್ಲ ಎಂದು ತಿರುಗೇಟು ನೀಡಿದರು. ತಮ್ಮ ವಿರುದ್ಧದ ಟೀಕೆಗೆ ಪ್ರತಿಯಾಗಿ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನೂ ಪ್ರಸ್ತಾಪಿಸಿದ ಹರಿಪ್ರಸಾದ್, ಅವರ ಪಿತೃಪಕ್ಷದ ನಾಯಕ ಮೋಹನ್ ಭಾಗವತ್ ಯಾವ ಚುನಾವಣೆಯಲ್ಲಿ ಗೆದ್ದಿದ್ದಾರೆ ಎಂದು ಪ್ರಶ್ನಿಸಿದರು.

ಭಾಗವತ್ ಯಾವ ಚುನಾವಣೆ ಗೆದ್ದಿದ್ದಾರೆ ದೇಶವನ್ನೇ ಅಲ್ಲೋಲ–ಕಲ್ಲೋಲ ಮಾಡುತ್ತಿದ್ದಾರೆ? ಎಂದು ಟೀಕಿಸಿದರು. ಪ್ರಧಾನಿ ನರೇಂದ್ರ ಮೋದಿ ಗ್ರಾಮ ಪಂಚಾಯಿತಿ ಚುನಾವಣೆಯಿಂದ ರಾಜಕೀಯ ಆರಂಭಿಸಿ ನೇರವಾಗಿ ಮುಖ್ಯಮಂತ್ರಿಯಾಗಿದ್ದರು ಎಂದು ಹೇಳಿದ ಹರಿಪ್ರಸಾದ್, ಇವರಿಂದ ನಾನು ಪಾಠ ಕಲಿಯಬೇಕಿಲ್ಲ. ಸೋತರೆ ಇವರು ಎಲ್ಲೂ ಕಾಣುವುದಿಲ್ಲ. ರಾಜಕೀಯದ ಇತಿಮಿತಿ ಗೊತ್ತಿಲ್ಲದ ಇಂತಹವರ ಪ್ರಶ್ನೆಗೆ ನಾನು ಉತ್ತರಿಸುವುದಿಲ್ಲ ಎಂದು ಹೇಳಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಅಕ್ಟೋಬರ್ 7, 2026, ಬುಧವಾರ

## ಒಳಪುಟಗಳಲ್ಲಿ

ಸಾರಿಗೆ ಕ್ಷೇತ್ರಕ್ಕೆ ಹೊಸ ಪ್ರಾಧಿಕಾರ, ಸಣ್ಣ ಉದ್ಯಮಗಳಿಗೆ 10 ಸಾವಿರ ಕೋಟಿ ನಿಧಿ- ಪು4

ಸುಳ್ಳು ಆರೋಪ ಮಾಡಿದ ಮುಖ್ಯಮಂತ್ರಿ ವಿರುದ್ಧ ಮೊಕದ್ದಮೆ ದಾಖಲಿಸಿ: ಚುನಾವಣಾ ಆಯೋಗಕ್ಕೆ ಸಿ.ಟಿ.ರವಿ ಆಗ್ರಹ - ಪು.5

ಚಿಕ್ಕಬಳ್ಳಾಪುರ, ಕೋಲಾರಕ್ಕೆ ಎತ್ತಿನಹೊಳೆ ಹರಿಸಲು ಈ ಸರ್ಕಾರಕ್ಕೆ ಸಾಧ್ಯವಿಲ್ಲ- ಪು.6

ಅರಬ್ಬರ ನಾಡಲ್ಲಿ ಸಂಭ್ರಮದ ಕರ್ನಾಟಕ ರಾಜ್ಯೋತ್ಸವ, ದುಬೈ ಕರ್ನಾಟಕ ರಾಜ್ಯೋತ್ಸವ- ಪು.8

# ಸಿಇಸಿ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ: ದೆಹಲಿಯಲ್ಲಿ ರಾಹುಲ್ ಹೈಡ್ರಾಮಾ

ನವದೆಹಲಿ, ಅ. 6: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಹಾಗೂ ಚುನಾವಣಾ ಅಕ್ರಮಗಳ ಆರೋಪಗಳ ಮೇಲೆ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಇಂಡಿಯಾ ಮೈತ್ರಿ ಒಕ್ಕೂಟದ ಸಂಸದರು ಮಂಗಳವಾರ ಸಂಸತ್‌ನಿಂದ ಚುನಾವಣಾ ಆಯೋಗದ ಕಚೇರಿವರೆಗೆ ಮೆರವಣಿಗೆ ನಡೆಸಿದರು. ಮೆರವಣಿಗೆಯನ್ನು ಪೊಲೀಸರು ತಡೆದ ಬಳಿಕ ವಿರೋಧ ಪಕ್ಷಗಳ ಹಲವು ಸಂಸದರು ರಸ್ತೆ ಮೇಲೆಯೇ ಧರಣಿ ನಡೆಸಿದ್ದು, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ವಾದ್ರಾ ಸೇರಿದಂತೆ ಹಲವರನ್ನು ಪೊಲೀಸರು ವಶಕ್ಕೆ ಪಡೆದರು.

ಪ್ರತಿಭಟನೆ ವೇಳೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯ ಚುನಾವಣಾ ಆಯುಕ್ತರು ನಮ್ಮನ್ನು ಏಕೆ ಭೇಟಿಯಾಗುತ್ತಿಲ್ಲ, 300 ಸಂಸದರನ್ನು ಪೊಲೀಸರು ಏಕೆ ತಡೆಯುತ್ತಿದ್ದಾರೆ. ಸಂಸದರನ್ನು ಚುನಾವಣಾ ಆಯೋಗ ಭೇಟಿಯಾಗದಿದ್ದರೆ ಪ್ರಜಾಪ್ರಭುತ್ವದ ಅರ್ಥವೇನು ಎಂದು ಪ್ರಶ್ನಿಸಿದರು.

ಚುನಾವಣಾ ಪ್ರಕ್ರಿಯೆ ಕುರಿತು ತಮ್ಮ ಪಕ್ಷ ಹಾಗೂ ವಿಪಕ್ಷಗಳ ಆತಂಕಗಳನ್ನು ಆಯೋಗ ಆಲಿಸಬೇಕು ಎಂದು ಅವರು ಒತ್ತಾಯಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಮತ್ತು ಮತದಾರರ ಪಟ್ಟಿಗೆ ಸಂಬಂಧಿಸಿದ ಅಕ್ರಮಗಳ ಆರೋಪಗಳ ಕುರಿತು ಚುನಾವಣಾ ಆಯೋಗದೊಂದಿಗೆ ಚರ್ಚಿಸಲು ಸಂಸದರು ಬಯಸಿದ್ದರು. ಇದೇ ವೇಳೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ರಾಜೀನಾಮೆ ನೀಡಬೇಕು ಎಂಬುದು ಇಂಡಿಯಾ ಒಕ್ಕೂಟದ ಪ್ರಮುಖ ಬೇಡಿಕೆಯಾಗಿದೆ. ಪೊಲೀಸ್ ಬ್ಯಾರಿಕೇಡ್ ದಾಟಲು ಯತ್ನಿಸಿದ ವೇಳೆ ರಾಹುಲ್ ಗಾಂಧಿ ಹಾಗೂ ಟಿಎಂಸಿ




ನಾಯಕ ಅಭಿಷೇಕ್ ಬ್ಯಾನರ್ಜಿ ಬ್ಯಾರಿಕೇಡ್ ಮೇಲೆ ಹತ್ತಿದರು. ಬಳಿಕ ಪೊಲೀಸ್ ಅವರನ್ನು ವಶಕ್ಕೆ ಪಡೆದರು. ನಂತರ ರಾಹುಲ್ ಮತ್ತು ಪ್ರಿಯಾಂಕಾ ಅವರನ್ನು ಇತರ ವಿರೋಧ ಪಕ್ಷದ ಸಂಸದರೊಂದಿಗೆ ಬಸ್‌ನಲ್ಲಿ ಕರೆದೊಯ್ಯಲಾಯಿತು. ಆದರೆ ಇಬ್ಬರೂ ಬಸ್‌ನಿಂದ ಹೊರಬಂದು ಆಕಾಶವಾಣಿ ಭವನದ ಬಳಿ ಪ್ರತಿಭಟನೆಯಲ್ಲಿ ಮತ್ತೆ ಭಾಗವಹಿಸಿದರು. ಇದೇ ವೇಳೆ ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯಸಭಾ ಸಂಸದ ಮಲ್ಲಿಕಾರ್ಜುನ ಖರ್ಗೆ ಅಸ್ವಸ್ಥರಾಗಿದ್ದರಿಂದ ಪ್ರತಿಭಟನಾ ಸ್ಥಳದಿಂದ ಹೊರಟರು. ನವದೆಹಲಿ ಜಿಲ್ಲೆಯಲ್ಲಿ ನಿರ್ಬಂಧಾಜ್ಞೆಗಳು ಜಾರಿಯಲ್ಲಿದ್ದು, ಸಾರ್ವಜನಿಕ ಸಭೆ ಹಾಗೂ ಗುಂಪು ಸೇರುವುದಕ್ಕೆ ಅನುಮತಿ ಇರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮೆರವಣಿಗೆ ಬೆಳಗ್ಗೆ 10.30ರಿಂದ 11 ಗಂಟೆಯ ನಡುವೆ ಆರಂಭವಾಗುವ ನಿರೀಕ್ಷೆಯಿತ್ತು. ಆದರೆ ಸಂಸದರು ಚುನಾವಣಾ ಆಯೋಗದ ಕಚೇರಿ ಕಡೆಗೆ ಸಾಗುತ್ತಿದ್ದಂತೆ ಪೊಲೀಸರು ಅವರನ್ನು ತಡೆದರು.

ಈ ಸಭೆಯಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ, ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ, ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಆರ್‌ಜೆಡಿಯ ತೇಜಸ್ವಿ ಯಾದವ್, ಎನ್‌ಸಿಪಿ (ಎಸ್‌ಪಿ) ಸಂಸದೆ ಸುಪ್ರಿಯಾ ಸುಳೆ, ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ, ಸಿಪಿಐಎಂ ಮುಖ್ಯಸ್ಥ ಎಂ.ಎ. ಬೇಬಿ, ಸಿಪಿಐ(ಎಂಎಲ್) ನಾಯಕ ದೀಪಂಕರ್ ಭಟ್ಟಾಚಾರ್ಯ ಹಾಗೂ ಸಿಪಿಐನ ಪಿ. ಸಂತೋಷ್ ಕುಮಾರ್ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು.

### ವಿಪಕ್ಷಗಳ ಆತಂಕ ಆಲಿಸುವಂತೆ ಒತ್ತಾಯ



ಚುನಾವಣಾ ಆಯೋಗದ ಕಚೇರಿ ಸಮೀಪದಲ್ಲೇ ಇದ್ದರೂ ಮುಂದೆ ತೆರಳಲು ಅವಕಾಶ ನೀಡಿಲ್ಲ ಎಂದು ಕಾಂಗ್ರೆಸ್ ನಾಯಕರು ಆಕ್ಷೇಪಿಸಿದರು. ಬಳಿಕ ಆಕಾಶವಾಣಿ ಭವನದ ಬಳಿ ಹಲವು ನಾಯಕರು ಧರಣಿ ನಡೆಸಿದರು. ಪ್ರತಿಭಟನಾಕಾರರನ್ನು ತಡೆಯಲು ದೆಹಲಿ ಪೊಲೀಸರು ಹಲವು ಹಂತಗಳಲ್ಲಿ ಬ್ಯಾರಿಕೇಡ್ ಅಳವಡಿಸಿದ್ದರು. ಪ್ರತಿಭಟನೆ ವೇಳೆ ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಸೇರಿದಂತೆ ಕೆಲವು ಪ್ರತಿಪಕ್ಷ ನಾಯಕರನ್ನು ಪೊಲೀಸರು ವಶಕ್ಕೆ ಪಡೆದರು. ಚುನಾವಣಾ ಪ್ರಕ್ರಿಯೆ ಕುರಿತು ತಮ್ಮ ಪಕ್ಷ ಹಾಗೂ ವಿಪಕ್ಷಗಳ ಆತಂಕಗಳನ್ನು ಆಯೋಗ ಆಲಿಸಬೇಕು ಎಂದು ಅವರು ಒತ್ತಾಯಿಸಿದರು.

# ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ 8 ಕೋಟಿ ರೂ. ಬಹುಮಾನ

## ಸಿಎಂ ಡಿ.ಕೆ. ಶಿವಕುಮಾರ್ ಘೋಷಣೆ: ದೇಶದ ಕೀರ್ತಿ ಪತಾಕೆ ಹಾರಿಸಿದ ಕರ್ನಾಟಕದ ಕ್ರೀಡಾಪಟುಗಳಿಗೆ ಸನ್ಮಾನ



ಬೆಂಗಳೂರು, ಅ.6: ಪ್ರಸಕ್ತ ಏಷ್ಯನ್ ಕ್ರೀಡಾಕೂಟದಲ್ಲಿ ದೇಶ ಹಾಗೂ ಕರ್ನಾಟಕದ ಕೀರ್ತಿ ಪತಾಕೆ ಹಾರಿಸಿದ ರಾಜ್ಯದ ಕ್ರೀಡಾಪಟುಗಳನ್ನು ಸಿಎಂ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದಲ್ಲಿ ಮಂಗಳವಾರ ಸನ್ಮಾನಿಸಿದರು. ರಾಜ್ಯದ 8 ಪದಕ ವಿಜೇತರಿಗೆ 8 ಕೋಟಿ ರೂ. ನಗದು ಬಹುಮಾನ ಘೋಷಿಸಿದರು.

ಪದಕ ವಿಜೇತರು ಸೇರಿದಂತೆ ಏಷ್ಯನ್ ಗೇಮ್ಸ್‌ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ಹಲವು ಮಹತ್ವದ ಪ್ರೋತ್ಸಾಹಕ ಕ್ರಮಗಳನ್ನು ಇದೇ ವೇಳೆ ಸಿಎಂ ಘೋಷಿಸಿದರು.

ಏಷ್ಯನ್ ಗೇಮ್ಸ್‌ನಲ್ಲಿ ಭಾಗವಹಿಸಲು ಅರ್ಹತೆ ಪಡೆದು ಸ್ಪರ್ಧಿಸಿದ ಕರ್ನಾಟಕದ 20 ಕ್ರೀಡಾಪಟುಗಳಿಗೆ ಇದೇ ಮೊದಲ ಬಾರಿಗೆ ತಲಾ 5 ಲಕ್ಷ ರೂ. ನಗದು ಪ್ರೋತ್ಸಾಹಧನ ಮಂಜೂರು ಮಾಡಲಾಗಿದೆ. ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಕ್ರಿಕೆಟ್, ಸೈಕ್ಲಿಂಗ್, ಈಕ್ವೆಸ್ಟ್ರಿಯನ್, ಗಾಲ್ಫ್, ಹಾಕಿ, ಶೂಟಿಂಗ್, ಈಜು, ಟೇಬಲ್ ಟೆನಿಸ್ ಹಾಗೂ ಸ್ಪೋರ್ಟ್ಸ್ ಕ್ಲೈಂಬಿಂಗ್ ವಿಭಾಗಗಳ ಕ್ರೀಡಾಪಟುಗಳು ಇದರ ಫಲಾನುಭವಿಗಳಾಗಿದ್ದಾರೆ.

**ಪದಕ ವಿಜೇತರ ಬಹುಮಾನ ಮೊತ್ತ ಹೆಚ್ಚಳ:** ಏಷ್ಯನ್ ಗೇಮ್ಸ್‌ನಲ್ಲಿ ಪದಕ ಗೆದ್ದ ಕರ್ನಾಟಕದ ಕ್ರೀಡಾಪಟುಗಳಿಗೆ ನೀಡಲಾಗುತ್ತಿದ್ದ ನಗದು ಬಹುಮಾನವನ್ನೂ ಸಿಎಂ ಹೆಚ್ಚಳ ಮಾಡಿದ್ದಾರೆ. ಈ ಹಿಂದೆ ಚಿನ್ನದ ಪದಕ ವಿಜೇತರಿಗೆ 35 ಲಕ್ಷ ರೂ., ಬೆಳ್ಳಿ ಪದಕ ವಿಜೇತರಿಗೆ 25 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತರಿಗೆ 15 ಲಕ್ಷ ರೂ. ನೀಡಲಾಗುತ್ತಿತ್ತು. ಈಗ ಚಿನ್ನದ ಪದಕಕ್ಕೆ 1 ಕೋಟಿ ರೂ., ಬೆಳ್ಳಿ ಪದಕಕ್ಕೆ 75 ಲಕ್ಷ ಹಾಗೂ ಕಂಚಿನ ಪದಕಕ್ಕೆ 50 ಲಕ್ಷ ನಗದು ಬಹುಮಾನ ನೀಡಲು ಸಿಎಂ ನಿರ್ಧರಿಸಿದ್ದಾರೆ.

**ಕ್ರೀಡಾಪಟುಗಳಿಗೆ ನೇರ ನೇಮಕಾತಿ ಅವಕಾಶ:** ಏಷ್ಯನ್ ಗೇಮ್ಸ್ ಮತ್ತು ಕಾಮನ್‌ವೆಲ್ತ್ ಗೇಮ್ಸ್ ಪದಕ ವಿಜೇತರಿಗೆ ಗುಂಪು-ಬಿ ಹುದ್ದೆಗಳಿಗೆ ನೇರ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈ ನೇಮಕಾತಿಯನ್ನು ಮುಖ್ಯ ಕಾರ್ಯದರ್ಶಿ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಕೈಗೊಳ್ಳಲಾಗುವುದು.

### ಒಲಿಂಪಿಕ್ಸ್ ತಯಾರಿಗೆ ತಲಾ 10 ಲಕ್ಷ

ಮುಂದಿನ ಹಂತದಲ್ಲಿ ಒಲಿಂಪಿಕ್ಸ್‌ಗೆ ಸಜ್ಜಾಗುತ್ತಿರುವ ಕ್ರೀಡಾಪಟುಗಳಿಗೂ ಸರ್ಕಾರ ನೆರವು ನೀಡಿದೆ. ಏಷ್ಯನ್ ಗೇಮ್ಸ್ ಪದಕ ವಿಜೇತರಾದ ಎಂ.ಆರ್. ಪೂವಮ್ಮ, ಸ್ನೇಹಾ ಎಸ್.ಎಸ್., ಶ್ರೇಯಾಂಕಾ ಪಾಟೀಲ್ ಹಾಗೂ ಕಾಮನ್‌ವೆಲ್ತ್ ಗೇಮ್ಸ್ ಪದಕ ವಿಜೇತೆ ಶಿಲ್ಪಾ ಕೆ.ಎಸ್. ಅವರನ್ನು ಗುರಿ ಒಲಿಂಪಿಕ್ಸ್ ಯೋಜನೆಗೆ 2026-27ನೇ ಸಾಲಿಗೆ ಸೇರ್ಪಡೆ ಮಾಡಲಾಗಿದೆ. ಒಲಿಂಪಿಕ್ಸ್ ತಯಾರಿಗಾಗಿ ತಲಾ 10 ಲಕ್ಷ ರೂ. ನಗದು ಪ್ರೋತ್ಸಾಹಧನ ಇವರಿಗೆ ನೀಡಲಾಗುತ್ತದೆ.

### ಪದಕ ವಿಜೇತ ಕ್ರೀಡಾಪಟುಗಳು

1) ಶ್ರೇಯಾಂಕ ಆರ್. ಪಾಟೀಲ್ (ಕ್ರಿಕೆಟ್ ಮಹಿಳಾ ತಂಡ, ಚಿನ್ನ), ಎಂ.ಆರ್. ಪೂವಮ್ಮ (ಅಥ್ಲೆಟಿಕ್ಸ್ 4/400 ಮಿಶ್ರ ರಿಲೇ, 4/400 ಮಹಿಳಾ ರಿಲೇ ಬೆಳ್ಳಿ ಮತ್ತು ಚಿನ್ನ)
2) ತಿಲೋತ್ತಮ ಸೇನ್ (ಶೂಟಿಂಗ್, ಮಹಿಳೆಯರ 50 ಮೀ ರೈಫಲ್, ಬೆಳ್ಳಿ)
3) ಆಯುಷ್ ಆರ್ ಶೆಟ್ಟಿ (ಪುರುಷರ ತಂಡ ಬ್ಯಾಡ್ಮಿಂಟನ್, ಬೆಳ್ಳಿ)
4) ಸ್ನೇಹಾ ಎಸ್.ಎಸ್. (ಅಥ್ಲೆಟಿಕ್ಸ್ 4/100 ಮಿಶ್ರ ರಿಲೇ ಕಂಚು)
5) ಅದಿತಿ ಅಶೋಕ್ (ಗಾಲ್ಫ್ ಮಹಿಳಾ ತಂಡ, ಬೆಳ್ಳಿ)
6) ಪ್ರಣವಿ ಎಸ್. ಅರಸ್ (ಗಾಲ್ಫ್ ಮಹಿಳಾ ತಂಡ, ಬೆಳ್ಳಿ ಹಾಗೂ ವೈಯಕ್ತಿಕ ಚಿನ್ನ)
7) ಮೋಹಿತ್ ಎಚ್.ಎಸ್. (ಹಾಕಿ ಪುರುಷರ ತಂಡ, ಚಿನ್ನ)

### ಏಷ್ಯನ್ ಗೇಮ್ಸ್ 2026ರ ಪದಕ ವಿಜೇತರಿಗೂ ತಲಾ 5 ಲಕ್ಷ ರೂ.

ಯಶಸ್ ಫಾಲಾಕ್ಷ - ಅಥ್ಲೆಟಿಕ್ಸ್, ಸುಪ್ರಿಯಾ ಸಿಂಡಿಗೆರೆ ಬಸವರಾಜು - ಅಥ್ಲೆಟಿಕ್ಸ್, ಉನ್ನತಿ ಅಯ್ಯಪ್ಪ - ಅಥ್ಲೆಟಿಕ್ಸ್, ಎಂ.ಆರ್. ಪೂವಮ್ಮ - ಅಥ್ಲೆಟಿಕ್ಸ್, ಸ್ನೇಹಾ ಎಸ್.ಎಸ್. - ಅಥ್ಲೆಟಿಕ್ಸ್, ಆಯುಷ್ ಶೆಟ್ಟಿ - ಬ್ಯಾಡ್ಮಿಂಟನ್, ಶ್ರೇಯಾಂಕ ಆರ್. ಪಾಟೀಲ್ - ಕ್ರಿಕೆಟ್ ಟಿ20, ಕೀರ್ತಿ ರಂಗಸ್ವಾಮಿ - ಸೈಕ್ಲಿಂಗ್ ಟ್ರ್ಯಾಕ್, ಫವಾದ್ ಮಿರ್ಜಾ- ಈಕ್ವೆಸ್ಟ್ರಿಯನ್, ಅದಿತಿ ಅಶೋಕ್ - ಗಾಲ್ಫ್, ಪ್ರಣವಿ ಎಸ್. ಅರಸ್ - ಗಾಲ್ಫ್, ಮೋಹಿತ್ ಹೆಚ್.ಎಸ್. - ಹಾಕಿ, ತಿಲೋತ್ತಮಾ ಸೇನ್ - ಶೂಟಿಂಗ್, ಆಕಾಶ್ ಮಣಿ - ಈಜು, ಶ್ರೀ ಹರಿ ನಟರಾಜ್ - ಈಜು, ದಕ್ಷಿಣ್ ಎಸ್. - ಈಜು, ಅನೀಶ್ ಗೌಡ - ಈಜು, ಯಶಸ್ವಿನಿ ಘೋರ್ಪಡೆ - ಟೇಬಲ್ ಟೆನ್ನಿಸ್, ಸಿಂಧುಶ್ರೀ - ಅಥ್ಲೆಟಿಕ್ಸ್, ದೀಪು ಮಲ್ಲೇಶ್ - ಸ್ಪೋರ್ಟ್ಸ್ ಕ್ಲೈಂಬಿಂಗ್

# ಮತಗಳ್ಳರ ರಕ್ಷಣೆಗೆ ನಿಂತಿದ್ದಾರೆ ಬಿಜೆಪಿ ನಾಯಕರು: ಡಿ.ಕೆ.ಶಿವಕುಮಾರ್ ವಾಗ್ದಾಳಿ

ಬೆಂಗಳೂರು, ಅ.6: ಕರ್ನಾಟಕ ಬಿಜೆಪಿಯವರು ಕುತಂತ್ರದ ರಾಜಕಾರಣ ಮಾಡಬಾರದು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯನ್ನು ಗೆಲ್ಲಬೇಕು. ಈ ರೀತಿ ಚುನಾವಣಾ ಆಯೋಗ ಬಳಸಿಕೊಂಡು ಮತಪಟ್ಟಿ ತಿರುಚಬಾರದು ಎಂದು ಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದರು.

### ಹಿಂದುಳಿದವರು, ಪರಿಶಿಷ್ಟರು, ಬಡವರ ಮತಗಳನ್ನು ಕಿತ್ತು ಹಾಕಲಾಗುತ್ತಿರುವುದು ನಾಚಿಕೆಗೇಡಿನ ಸಂಗತಿ



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಹೆಸರನ್ನು ಒಂದು ಬೂತ್‌ನಿಂದ ಮತ್ತೊಂದು ಬೂತ್‌ಗಳಿಗೆ ಸ್ಥಳಾಂತರಿಸುವುದು, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದವರು, ಪರಿಶಿಷ್ಟರು, ಬಡವರ ಮತಗಳನ್ನು ಕಿತ್ತುಹಾಕಲಾಗುತ್ತಿದ್ದು, ಇದು ನಿಜಕ್ಕೂ ನಾಚಿಕೆಗೇಡಿನ ವಿಚಾರ. ಈಗ ಬಿಜೆಪಿಯವರು ಮತಕಳ್ಳರ ರಕ್ಷಣೆಗೆ ಹೊರಟಿದ್ದಾರೆ. ಬಿಜೆಪಿ ಕಾರ್ಯಕರ್ತರು ಅಮಾಯಕರು, ಏಕೆಂದರೆ ಒಂದೇ ಕುಟುಂಬದಿಂದ ಗಂಡ, ಹೆಂಡತಿ ಮಗಳು, ಮೂವರೂ ಫಾರಂ 7 ನೀಡಿದ್ದು, ಇದನ್ನು ಮಾಧ್ಯಮದವರೇ ದಾಖಲೆ ಸಮೇತ ಬಹಿರಂಗಪಡಿಸಿದ್ದಾರೆ. ಒಂದೇ ಕುಟುಂಬದ ಮೂವರು ಈ ಅರ್ಜಿಗೆ ಸಹಿ ಹಾಕಿ ಕೊಟ್ಟಿದ್ದು, ತಮ್ಮ ದೂರವಾಣಿ ಸಂಖ್ಯೆಯನ್ನು ಕೊಟ್ಟಿರುವುದರಿಂದ, ಇವರು ಪೊಲೀಸ್ ಠಾಣೆಗೆ ಅಲೆಯುವಂತಾಗಿದೆ. ಬೆಳಗಾವಿಯ ಬಿಜೆಪಿಯ ರಾಜಕಾರಣಿ ರವಿ ಪಾಟೀಲ್ ಹಾಗೂ ವಿಜಯಪುರದ ಬಬಲೇಶ್ವರ ಕ್ಷೇತ್ರದಲ್ಲಿಯೂ ಫಾರಂ 7 ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ತಪ್ಪೊಪ್ಪಿಕೊಂಡಿದ್ದಾರೆ. ಶೃಂಗೇರಿ ಕ್ಷೇತ್ರದಲ್ಲಿಯೂ 1500 ಫಾರಂಗಳನ್ನು ಮಧ್ಯರಾತ್ರಿ ಸುಟ್ಟಿದ್ದಾರೆ. ಬೆಂಗಳೂರಿನ ಜಯನಗರ, ಬಳ್ಳಾರಿ ಸೇರಿ ರಾಜ್ಯದ ಹಲವೆಡೆ ಫಾರಂ 7 ದುರುಪಯೋಗ ಮಾಡಿಕೊಳ್ಳಲಾಗಿದೆ ಎಂದರು.

ಈಗ ಬಿಜೆಪಿಯ ಆರ್ ಅಶೋಕ್ ಹಾಗೂ ವಿಜಯೇಂದ್ರ ಅವರೇ ಸುಮಾರು 25000 ಫಾರಂ 7 ನೀಡಿರಬಹುದು ಎಂದು ತಿಳಿಸಿದ್ದಾರೆ. ಆನೆ ಕದ್ದರೂ ಕಳ್ಳ, ಅಡಿಕೆ ಕದ್ದರೂ ಕಳ್ಳ ಎಂಬ ಗಾದೆ ಇದೆ. ಬಿಜೆಪಿಯವರು ಮತಗಳ್ಳತನಕ್ಕೆ ಮುಂದಾಗಿರುವುದು ಸರಿಯಲ್ಲ. ಈ ರಾಜ್ಯದ ಮುಖ್ಯಮಂತ್ರಿಯಾಗಿ, ಜನಪ್ರತಿನಿಧಿಯಾಗಿ ಹಾಗೂ ಪಕ್ಷದ ಮುಖ್ಯಸ್ಥನಾಗಿ ಈ ಬಗ್ಗೆ ನಮ್ಮ ಜನರಿಗೆ ಜಾಗೃತಿ ಮೂಡಿಸುತ್ತಿದ್ದೇನೆ. ರಾಜ್ಯದ ಜನರ ಮತಗಳಿಗೆ ರಕ್ಷಣೆ ನೀಡುವ ಜವಾಬ್ದಾರಿ ನನ್ನದು ಎಂದು ಸ್ಪಷ್ಟಪಡಿಸಿದರು.

ದೇಶದ ವಿರೋಧ ಪಕ್ಷಗಳ ನಾಯಕರಿಗೆ ಚುನಾವಣಾ ಆಯೋಗ ಹಾಗೂ ರಾಷ್ಟ್ರಪತಿಗಳ ಬಳಿ ಕೇಳುವ ಹಕ್ಕಿದೆ. ಆದರೆ ರಾಜ್ಯದ ಬಿಜೆಪಿ ನಾಯಕರು ಯಾಕೆ ರಾಜಭವನಕ್ಕೆ ತೆರಳಿದ್ದಾರೆ. ಅವರು ಷಡ್ಯಂತ್ರ ನಡೆಸಿ, ಫಾರಂ 7 ದುರುಪಯೋಗ ಪಡಿಸಿಕೊಂಡಿದ್ದು ಈಗ ಹೆದರಿದ್ದಾರೆ. ಯಡಿಯೂರಪ್ಪ, ಬೊಮ್ಮಾಯಿ, ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ವಿಜಯೇಂದ್ರ, ಅಶೋಕ್ ಅವರು ಫಾರಂ 7 ನಾವೇ ಕೊಟ್ಟಿದ್ದೇವೆ ಎಂದು ಒಪ್ಪಿಕೊಳ್ಳಲಿ. ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಸಣ್ಣ ಕಾರ್ಯಕರ್ತರಿಗೆ ಇವರು ಫಾರಂ 7 ಅರ್ಜಿ ನೀಡಿದ್ದಾರೆ. ಅವರು ಯಾವ ರೀತಿ ಈ ಕಾರ್ಯಚರಣೆ ಮಾಡಿದ್ದಾರೆ ಎಂದು ನನ್ನ ಸ್ನೇಹಿತರು ಮಾಹಿತಿ ನೀಡಿದ್ದಾರೆ. ಒಬ್ಬೊಬ್ಬರಿಗೆ 1000, 5000, 10,000 ಅರ್ಜಿಗಳನ್ನು ನೀಡಿದ್ದು, ನಾನು ಮುಖ್ಯಚುನಾವಣಾಧಿಕಾರಿ ಕಚೇರಿಗೆ ಹೋದ ಬಳಿಕ, ಬಿಎಲ್‌ಒಗಳಿಂದ ತಾವು ಸಲ್ಲಿಸಿದ್ದ ಫಾರಂ 7 ಅನ್ನು ಕೆಲವರು ಮನವಿ ಮಾಡಿ ವಾಪಸ್ ಪಡೆದರೆ ಮತ್ತೆ ಕೆಲವರು ಕಿತ್ತುಕೊಂಡಿದ್ದಾರೆ. ಅವುಗಳನ್ನು ಸುಟ್ಟು ಹಾಕಿದ್ದಾರೆ. ಬಿಎಲ್‌ಒಗಳಿಗೆ ಬೆದರಿಕೆ ಹಾಕಿ ಲಕ್ಷಾಂತರ ಅರ್ಜಿ ಪಡೆದಿದ್ದಾರೆ. ಬಿಎಲ್‌ಒಗಳು ಇದರ ಬಗ್ಗೆ ವರದಿ ನೀಡಿದ್ದಾರೆ. ಮತದಾನದ ಹಕ್ಕು ಕಳೆದುಕೊಂಡವರು ದೂರು ನೀಡುವುದು ಸಹಜ. ಬದುಕಿರುವವರನ್ನು ಸತ್ತಿದ್ದಾರೆ ಎಂದು ತೋರಿಸಲಾಗಿದೆ. ಈ ಫಾರಂ 7 ಅನ್ನು ದೆಹಲಿ ಅಥವಾ ಬೇರೆಡೆ ಮುದ್ರಿಸಿ ಕೊಟ್ಟಿದ್ದಾರೆ. ಹೀಗಾಗಿ ನಾವು ಚುನಾವಣಾಧಿಕಾರಿ ಕಚೇರಿಗೆ ಹೋಗಿ ದೂರು ನೀಡಿದ್ದೇವೆ. ಅವರು ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

### ನೈಸ್ ವಿಚಾರ: ಈಗಲೇ ಉತ್ತರಿಸಲ್ಲ

ನೈಸ್ ಹೋರಾಟವನ್ನು ಎಸ್ಐಆರ್ ಪ್ರಕರಣವನ್ನು ಮುನ್ನೆಲೆಗೆ ತರಲಾಗಿದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಕೇಳಿದಾಗ, ಅದಕ್ಕೆಲ್ಲಾ ಈಗಲೇ ಉತ್ತರ ಕೊಡಲು ಹೋಗುವುದಿಲ್ಲ. ಅದಕ್ಕೆಲ್ಲಾ ಕಾನೂನಿದೆ. ನೀವು ಏನೇನು ಬೇಕೋ ಅದನ್ನು ಹಾಕಿಕೊಂಡು ಮುಗಿಸಿ. ಆಮೇಲೆ ಮಾತನಾಡುತ್ತೇನೆ. ಮೊದಲು ಜನರ ಮತದಾನದ ಹಕ್ಕನ್ನು ರಕ್ಷಣೆ ಮಾಡಬೇಕಿದೆ. ನೈಸ್ ಯೋಜನೆಗೆ ಸಹಿಮಾಡಿದ ಪಿತಾಮಹರು ಅವರೇ ಎಂದು ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು.

### ರಾಹುಲ್‌ಗಾಂಧಿ ಹಾಗೂ ನನ್ನ ಧ್ವನಿ ಹತ್ತಿಕ್ಕಲು ಸಾಧ್ಯವಿಲ್ಲ

ರಾಹುಲ್ ಗಾಂಧಿ ಅವರು ಜನರ ಉದ್ದೇಶಕ್ಕಾಗಿ ಹೋರಾಟ ಮಾಡುತ್ತಿದ್ದು, ದೇಶದ ಚುನಾವಣಾ ವ್ಯವಸ್ಥೆಗಾಗಿ ಹೋರಾಟ ಮಾಡುತ್ತಿದ್ದಾರೆ. ಎಸ್ಐಆರ್ ವಿಚಾರ ಇಡೀ ದೇಶದ ಜನರ ವಿಚಾರ. ವಿರೋಧ ಪಕ್ಷದ ನಾಯಕರಾಗಿ, ಈ ದೇಶಕ್ಕೆ ಸ್ವಾತಂತ್ರ್ಯ, ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆ ಕೊಟ್ಟ ಪಕ್ಷದ ನಾಯಕರಾಗಿ ಪ್ರತಿಭಟನೆ ಮಾಡುವ ಹಕ್ಕು ಅವರಿಗಿದೆ. ರಾಹುಲ್ ಗಾಂಧಿ ಅವರು ತಮ್ಮ ಕರ್ತವ್ಯ ಮಾಡುತ್ತಿದ್ದು, ಬಿಜೆಪಿಯವರು ರಾಹುಲ್ ಗಾಂಧಿ ಹಾಗೂ ನಮ್ಮ ಧ್ವನಿಯನ್ನು ಹತ್ತಿಕ್ಕಲು ಸಾಧ್ಯವಿಲ್ಲ ಎಂದು ಡಿ.ಕೆ. ಶಿವಕುಮಾರ್ ಪುನರುಚ್ಚರಿಸಿದರು.

# ಎಸ್ಐಆರ್‌ನಲ್ಲಿ ಕಾಂಗ್ರೆಸ್ ಸರ್ಕಾರದ ಅನಗತ್ಯ ಹಸ್ತಕ್ಷೇಪ: ದೂರು

ಬೆಂಗಳೂರು, ಅ.6: ರಾಜ್ಯಾದ್ಯಂತ ಚುನಾವಣಾ ಆಯೋಗ ನಡೆಸುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ಐಆರ್) ವೇಳೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಅನಗತ್ಯವಾಗಿ ಹಸ್ತಕ್ಷೇಪ ಮಾಡುತ್ತಿದ್ದು, ಸೂಕ್ತ ನಿರ್ದೇಶನ ನೀಡಬೇಕೆಂದು ಎನ್‌ಡಿಎ ನಾಯಕರು ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

### ಸೂಕ್ತ ನಿರ್ದೇಶನ ನೀಡುವಂತೆ ಎನ್‌ಡಿಎ ನಾಯಕರಿಂದ ರಾಜ್ಯಪಾಲರಿಗೆ ದೂರು

ದೂರಿನಲ್ಲಿ ಪ್ರಮುಖವಾಗಿ ಅನರ್ಹ ಮತದಾರರ ಸೇರ್ಪಡೆಯನ್ನು ತಡೆಯಲು ಮತ್ತು ಮತದಾರರ ಪಟ್ಟಿಯ ಪಾವಿತ್ರ್ಯತೆಯನ್ನು ಕಾಪಾಡಲು ಆಕ್ಷೇಪಣೆ ಸಲ್ಲಿಸುವುದು ಕಾನೂನುಬದ್ಧ ಸಾಂವಿಧಾನಿಕ ಹಕ್ಕಾಗಿದೆ ಎಂದು ಸಮರ್ಥನೆ ಮಾಡಿಕೊಂಡಿದ್ದಾರೆ. ಮತದಾರರ ನೋಂದಣಿ ನಿಯಮಗಳು, ಭಾರತೀಯ ಚುನಾವಣಾ ಆಯೋಗದ ನಿರ್ದೇಶನಗಳ ಪ್ರಕಾರ ನಮೂನೆ-7ರ ಮೂಲಕ ಆಕ್ಷೇಪಣೆಗಳನ್ನು ಹಾಗೂ ಸಾಮೂಹಿಕ ಅರ್ಜಿಗಳನ್ನು ಸಲ್ಲಿಸಲು ಮುಕ್ತ ಅವಕಾಶವಿದೆ. ಬೂತ್ ಮಟ್ಟದ ಏಜೆಂಟರು ಮತ್ತು ಮತದಾರರು ಈ ಹಕ್ಕನ್ನು ಬಳಸಿಕೊಳ್ಳುತ್ತಿದ್ದಾರೆ ಎಂದು ನಿಯೋಗವು ಪತ್ರದಲ್ಲಿ ವಿವರಿಸಿದೆ.

ಈ ರಾಜಕೀಯ ಒತ್ತಡದ ಪರಿಣಾಮವಾಗಿಯೇ ಅಂದೇ (01.10.2026) ಸೆಕ್ಷನ್ 31ರ ಅಡಿಯಲ್ಲಿ ಕ್ರಮ ಕೈಗೊಳ್ಳುವ ಕುರಿತು ಸುತ್ತೋಲೆ ಹೊರಡಿಸಲಾಗಿದ್ದು, ಇದು ಆಕ್ಷೇಪಣೆ ಸಲ್ಲಿಸುವವರಲ್ಲಿ ಭಯ ವಾತಾವರಣವನ್ನು ನಿರ್ಮಿಸಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಸ್ವತಂತ್ರ ಮತ್ತು ನಿಷ್ಪಕ್ಷಪಾತ ಸಂಸ್ಥೆಯಾದ ಚುನಾವಣಾ ಆಯೋಗದ ಕಾರ್ಯನಿರ್ವಹಣೆಯಲ್ಲಿ ಸರ್ಕಾರದ ಈ ಹಸ್ತಕ್ಷೇಪವನ್ನು ತಕ್ಷಣವೇ ತಡೆಯಬೇಕು ಮತ್ತು ಎಸ್ಐಆರ್ ಪ್ರಕ್ರಿಯೆಯು ಯಾವುದೇ ಭಯವಿಲ್ಲದೆ ನ್ಯಾಯಸಮತವಾಗಿ ನಡೆಯಲು ಸೂಕ್ತ ನಿರ್ದೇಶನ ನೀಡಬೇಕೆಂದು ಬಿಜೆಪಿ-ಜೆಡಿಎಸ್ ನಾಯಕರು ರಾಜ್ಯಪಾಲರನ್ನು ಒತ್ತಾಯಿಸಿದ್ದಾರೆ. ಇದೇ ವೇಳೆ ಚುನಾವಣಾ ಆಯೋಗವು 2026ರ ಜನವರಿ 16ರಂದು ಹೊರಡಿಸಿರುವ ಸಂವಹನ ಹಾಗೂ ಮತದಾರರ ಪಟ್ಟಿಗಳ ಕೈಪಿಡಿ-2023ರ ಮಾರ್ಗಸೂಚಿಗಳನ್ನು ಉಲ್ಲೇಖಿಸಿರುವ ಎನ್‌ಡಿಎ, ಇಆರ್‌ಒ/ಎಇಆರ್‌ಒಗಳಿಗೆ ಸಲ್ಲಿಸಬಹುದಾದ ನಮೂನೆ 7ರ ಅರ್ಜಿಗಳ ಸಂಖ್ಯೆಗೆ ಮಿತಿ ಇಲ್ಲ ಎಂದು ಹೇಳಿದೆ. ಬೂತ್‌ಮಟ್ಟದ ಏಜೆಂಟ್‌ಗಳು ಸಹ ಹಲವು ನಮೂನೆ 7 ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.



ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಭೇಟಿಮಾಡಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಂಸದರಾದ ಪಿ.ಸಿ.ಮೋಹನ್, ಮಲ್ಲೇಶ್‌ಬಾಬು, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು, ಶಾಸಕರಾದ ಶ್ರೀವತ್ಸ, ವಿಠಲ್ ಹಲಗೇಕರ್, ವಿಧಾನಪರಿಷತ್ ಸದಸ್ಯರಾದ ಭೋಜೇಗೌಡ, ಟಿ.ಎ.ಶರವಣ ಸೇರಿ ಇತರರಿದ್ದ ನಿಯೋಗವು ನಾಲ್ಕು ಪುಟಗಳ ದೂರು ನೀಡಿದೆ.

### ಬಿಜೆಪಿ-ಜೆಡಿಎಸ್ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸಿರುವುದಕ್ಕೆ ಆಕ್ಷೇಪ

ಆಕ್ಷೇಪಣೆ ಸಲ್ಲಿಸುವ ಬಿಜೆಪಿ ಕಾರ್ಯಕರ್ತರು ಹಾಗೂ ಬೆಂಬಲಿಗರನ್ನು ಗುರಿಯಾಗಿಸಿಕೊಂಡು ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯ ಮೇಲೆ ಒತ್ತಡ ಹೇರುತ್ತಿದೆ. ಜನತಾ ಪ್ರಾತಿನಿಧ್ಯ ಕಾಯ್ದೆ, 1950 ಸೆಕ್ಷನ್ 31ರಡಿ ಅಪರಾಧಗಳು ಎಫ್ಐಆರ್ ದಾಖಲಿಸಲು ಅವಕಾಶವಿಲ್ಲದ ಸ್ವರೂಪದ್ದಾಗಿದ್ದರೂ, ಅದನ್ನು ಬದಿಗೊತ್ತಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಯಡಿ ವಂಚನೆ, ನಕಲಿ ದಾಖಲೆ ಸೃಷ್ಟಿ ಹಾಗೂ ಬೆದರಿಕೆಯಂತಹ ಗಂಭೀರ ಅಪರಾಧಗಳಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದು ಆಕ್ಷೇಪಿಸಿದೆ. ಈಗಾಗಲೇ ಭಾಲ್ಕಿ (ಬೀದರ್), ಮಾರ್ಕೆಟ್ ಏರಿಯಾ (ಬೆಳಗಾವಿ), ವ್ಯಾಲಿಕಾವಲ್ (ಬೆಂಗಳೂರು), ಬಳ್ಳಾರಿ ಮತ್ತು ಮೈಸೂರಿನ ನರಸಿಂಹರಾಜ ಕ್ಷೇತ್ರಗಳಲ್ಲಿ ಆರು ಎಫ್ಐಆರ್‌ಗಳು ದಾಖಲಾಗಿವೆ ಎಂದು ರಾಜ್ಯಪಾಲರಿಗೆ ಮನವರಿಕೆ ಮಾಡಿಕೊಡಲಾಗಿದೆ. ಕಳೆದ ಅ.1ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಮತ್ತು ಸಚಿವರು ನಿಷೇಧಾಜ್ಞೆ ಜಾರಿಯಲ್ಲಿದ್ದರೂ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಆವರಣದಲ್ಲಿ ಕಾನೂನುಬಾಹಿರವಾಗಿ ಪ್ರತಿಭಟನೆ ನಡೆಸಿದ್ದು, ಚುನಾವಣಾ ಯಂತ್ರಾಂಗದ ಮೇಲೆ ಅನಗತ್ಯ ಪ್ರಭಾವ ಬೀರಿದ್ದಾರೆ ಎಂದು ದೂರಿದ್ದಾರೆ.

**ಕೇಂದ್ರ ಸಚಿವ ಸಂಪುಟದಿಂದ ಎರಡು ಮಹತ್ವದ ನಿರ್ಧಾರ**

# ಸಾರಿಗೆ ಕ್ಷೇತ್ರಕ್ಕೆ ಹೊಸ ಪ್ರಾಧಿಕಾರ, ಸಣ್ಣ ಉದ್ಯಮಗಳಿಗೆ 10 ಸಾವಿರ ಕೋಟಿ ನಿಧಿ



**ನವದೆಹಲಿ, ಅ. 6:** ಸಾರಿಗೆ ಮತ್ತು ಸಣ್ಣ ಹಾಗೂ ಮಧ್ಯಮ ಉದ್ಯಮಗಳ ಕ್ಷೇತ್ರಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕೇಂದ್ರ ಸಚಿವ ಸಂಪುಟ ಎರಡು ಮಹತ್ವದ ನಿರ್ಧಾರಗಳನ್ನು ಕೈಗೊಂಡಿದೆ. ಸಮಗ್ರ ಸಾರಿಗೆ ಮತ್ತು ಸರಕು ಸಾಗಣೆ ಪ್ರಾಧಿಕಾರ (ITLA) ಸ್ಥಾಪನೆಗೆ ಹಾಗೂ 10,000 ಕೋಟಿ ಮೊತ್ತದ ಎಸ್‌ಎಂಇ ಬೆಳವಣಿಗೆ ನಿಧಿ ಸ್ಥಾಪನೆಗೆ ಸಂಪುಟ ಅನುಮೋದನೆ ನೀಡಿದೆ. ಸಾರಿಗೆ ಮತ್ತು ಸರಕು ಸಾಗಣೆ ಕ್ಷೇತ್ರದಲ್ಲಿ ಸಂಶೋಧನೆ, ಯೋಜನೆ, ಯೋಜನೆಗಳ ಮೌಲ್ಯಮಾಪನ, ಮೇಲ್ವಿಚಾರಣೆ ಹಾಗೂ ಪರಿಣಾಮದ ಅಂದಾಜುಗಳನ್ನು ಸಮನ್ವಯಗೊಳಿಸುವುದು ಐಟಿಎಲ್‌ಎಯ ಪ್ರಮುಖ ಉದ್ದೇಶವಾಗಿದೆ.

ರಸ್ತೆ, ರೈಲು, ಬಂದರು, ವಿಮಾನಯಾನ, ಒಳನಾಡು ಜಲಮಾರ್ಗ, ಕರಾವಳಿ ಸಾಗಣೆ, ನಗರ ಸಾರಿಗೆ ಹಾಗೂ ಸರಕು ಸಾಗಣೆ ಸೇರಿದಂತೆ ವಿವಿಧ ಸಾರಿಗೆ ವ್ಯವಸ್ಥೆಗಳನ್ನು ಸಮಗ್ರವಾಗಿ ಯೋಜಿಸಲು ಇದು ರಾಷ್ಟ್ರೀಯ ಮಟ್ಟದ ಪ್ರಮುಖ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ.

500 ಕೋಟಿ ಅಥವಾ ಅದಕ್ಕಿಂತ ಹೆಚ್ಚಿನ ವೆಚ್ಚದ ಸಾರಿಗೆ ಮತ್ತು ಮೂಲಸೌಕರ್ಯ ಯೋಜನೆಗಳ ತಾಂತ್ರಿಕ ಮೌಲ್ಯಮಾಪನ ಹಾಗೂ ಮೇಲ್ವಿಚಾರಣೆಯನ್ನೂ ಐಟಿಎಲ್‌ಎ ಕೈಗೊಳ್ಳಲಿದೆ. ಜಿಎಸ್‌ಟಿಎನ್ ಇ–ವೇ ಬಿಲ್, ಫಾಸ್ಟ್ಯಾಗ್, ವಾಹನ ನೋಂದಣಿ, ಜಿಪಿಎಸ್ ಮತ್ತು ನಗರ ಸಂಚಾರ ವ್ಯವಸ್ಥೆಗಳ ಮಾಹಿತಿಯನ್ನು ಒಗ್ಗೂಡಿಸಿ ರಾಷ್ಟ್ರೀಯ ಸಾರಿಗೆ ದತ್ತಾಂಶ ಸಂಗ್ರಹ ರೂಪಿಸುವ ಉದ್ದೇಶವೂ ಇದೆ. ಇದರಿಂದ ಸರಕು ಸಾಗಣೆ ಮಾರ್ಗಗಳ ವಿಶ್ಲೇಷಣೆ ಹಾಗೂ ಯೋಜನೆಗಳ ಪರಿಣಾಮಕಾರಿ ಮೇಲ್ವಿಚಾರಣೆಗೆ ನೆರವಾಗಲಿದೆ. ಇದೇ ವೇಳೆ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಬೆಳವಣಿಗೆಗೆ 10,000 ಕೋಟಿ ಮೊತ್ತದ ಎಸ್‌ಎಂಇ ಬೆಳವಣಿಗೆ ನಿಧಿಗೆ ಸಂಪುಟ ಅನುಮೋದನೆ ನೀಡಿದೆ. ಕೇಂದ್ರ ಬಜೆಟ್ 2026–27ರಲ್ಲಿ ಘೋಷಿಸಲಾಗಿದ್ದ ಈ ನಿಧಿಯ ಮೂಲಕ ಸಾಮರ್ಥ್ಯ ಹೊಂದಿರುವ ಉದ್ಯಮಗಳಿಗೆ ದೀರ್ಘಾವಧಿಯ ಬಂಡವಾಳ ಒದಗಿಸುವ ಗುರಿ ಹೊಂದಲಾಗಿದೆ. ನಿರ್ಮಾಣ ಕ್ಷೇತ್ರದ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ನಿಧಿಯಲ್ಲಿ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಸೇವಾ ಕ್ಷೇತ್ರ, ತಂತ್ರಜ್ಞಾನ, ನವೋದ್ಯಮ ಆಧಾರಿತ ವಲಯಗಳು ಹಾಗೂ ಕಾರ್ಯತಂತ್ರದ ಮೌಲ್ಯ ಸರಪಳಿಗಳಲ್ಲಿರುವ ಉದ್ಯಮಗಳಿಗೂ ಬೆಂಬಲ ದೊರೆಯಲಿದೆ. ಉದ್ಯಮಗಳ ವಿಸ್ತರಣೆ ಹಾಗೂ ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಭಾರತೀಯ ಉದ್ಯಮಗಳ ನಿರ್ಮಾಣಕ್ಕೆ ಈ ನಿಧಿ ನೆರವಾಗಲಿದೆ.



ನವದೆಹಲಿಯ ಸೇವಾತೀರ್ಥದಲ್ಲಿ 'ಗ್ಲೋಬಲ್ ಸಿಸ್ಟಮ್ ಫಾರ್ ಮೊಬೈಲ್ ಕಮ್ಯುನಿಕೇಷನ್ಸ್ ಅಸೋಸಿಯೇಷನ್' ಮಂಡಳಿಯ ಸದಸ್ಯರೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಗುಂಪು ಛಾಯಾಚಿತ್ರದಲ್ಲಿ ಪಾಲ್ಗೊಂಡರು.

# ಏಷ್ಯನ್ ಗೇಮ್ಸ್‌ನಲ್ಲಿ ಕೆಐಐಟಿ, ಕೆಐಎಸ್‌ಎಸ್ ಕ್ರೀಡಾಪಟುಗಳ ಪಾರಮ್ಯ

## ಭಾರತ ಗೆದ್ದ 85 ಪದಕಗಳಲ್ಲಿ 21 ಪದಕಗಳು ಸಂಸ್ಥೆಯ ಕ್ರೀಡಾಪಟುಗಳ ಪಾಲು

**ಭುವನೇಶ್ವರ, ಅ.6:** ಜಪಾನ್‌ನ ಪ್ರಮುಖ ನಗರ ಐಚಿ–ನಗೋಯಾದಲ್ಲಿ ನಡೆಯುತ್ತಿದ್ದ 20 ನೇ ಏಷ್ಯನ್ ಕ್ರೀಡಾಕೂಟ ಮುಕ್ತಾಯವಾಗಿದೆ. ಗೇಮ್ಸ್ ನ ವಿವಿಧ ಕ್ರೀಡೆಗಳಲ್ಲಿ ಭುವನೇಶ್ವರದ ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಟೆಕ್ನಾಲಜಿ (ಕೆಐಐಟಿ) ಮತ್ತು ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ (ಕಿಸ್) ಕ್ರೀಡಾಪಟುಗಳು 21 ಪದಕಗಳನ್ನು ಪಡೆದು ದೇಶಕ್ಕೆ ಕೀರ್ತಿ ತರುವುದರ ಜೊತೆಗೆ ತಾವು ಪ್ರತಿನಿಧಿಸಿದ್ದ ಸಂಸ್ಥೆಗೂ ಹೆಮ್ಮೆ ತಂದಿದ್ದಾರೆ. ಇದರಲ್ಲಿ 3 ಚಿನ್ನ, 7 ಬೆಳ್ಳಿ ಮತ್ತು 11 ಕಂಚಿನ ಪದಕಗಳು ಸೇರಿವೆ. ಇಡೀ ಭಾರತದಲ್ಲಿ ಯಾವುದೇ ವಿಶ್ವವಿದ್ಯಾಲಯ ಇಷ್ಟೊಂದು ಪದಕಗಳನ್ನು ಪಡೆದಿಲ್ಲ ಎಂಬುದು ಇಲ್ಲಿ ಗಮನಿಸಬೇಕಾದ ಅಂಶ. ಒಟ್ಟು 85 ಪದಕಗಳನ್ನು ಪಡೆಯುವ ಮೂಲಕ ಪದಕ ಪಟ್ಟಿಯಲ್ಲಿ ಭಾರತ ನಾಲ್ಕನೇ ಸ್ಥಾನದಲ್ಲಿದೆ. ಇದರಲ್ಲಿ 21 ಚಿನ್ನ, 27 ಬೆಳ್ಳಿ ಮತ್ತು 37 ಕಂಚಿನ ಪದಕ ಪಡೆದಿದೆ. ಭಾರತದ ಈ ಸಾಧನೆಯಲ್ಲಿ ಗಣನೀಯವಾದ ಕೊಡುಗೆ ಇರುವುದು ಕಳಿಂಗ ಶಿಕ್ಷಣ ಸಂಸ್ಥೆಗಳದ್ದು ಎಂಬುದು ಹೆಮ್ಮೆಯ ಸಂಗತಿಯಾಗಿದೆ. ಈ ಬಾರಿಯ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ಅತ್ಯುತ್ತಮ ಸಾಧನೆ ಮಾಡಿ ಜಾಗತಿಕ ಮಟ್ಟದಲ್ಲಿ ಪ್ರಶಂಸೆಗೊಳಗಾಗುತ್ತಿದೆ. ಈ ಸಾಧನೆಯಲ್ಲಿ ಕೆಐಐಟಿ ಮತ್ತು ಕೆಐಎಸ್‌ಎಸ್‌ನ ಕ್ರೀಡಾಪಟುಗಳ ಹೆಚ್ಚಿನ ಪಾಲು ಇದೆ ಎಂಬುದು ವಿಶೇಷವಾಗಿದೆ.



**ಕೆಐಐಟಿಯ ಕ್ರೀಡಾಸಾಧಕರು**

*ಮಹಿಳೆಯರ 10000 ಮೀಟರ್ ಓಟ – ಸೀಮಾ ಕುಮಾರಿ (ಕಂಚು)

*ಮಹಿಳೆಯರ 400 ಮೀ. ಓಟ – ಪ್ರಾಚಿ ಚೌಧರಿ (ಕಂಚು)

*ಮಹಿಳೆಯರ 200 ಮೀ. ಓಟ – ಹರಿತ ಭದ್ರ (ಕಂಚು)

*ಮಹಿಳೆಯರ ಪೋಲ್‌ವಾಲ್ಟ್ – ಬರಾನಿಕಾ ಎಲಂಗೋವನ್ (ಬೆಳ್ಳಿ)

*ಹೈಜಂಪ್ (ಪುರುಷರು) – ಸರ್ವೇಶ್ ಕುಶಾರೆ (ಬೆಳ್ಳಿ)

*ಜಾವೆಲಿನ್ (ಪುರುಷರು) – ಯಶ್‌ವೀರ್‌ಸಿಂಗ್ (ಬೆಳ್ಳಿ), ರೋಹಿತ್ ಯಾದವ್ (ಕಂಚು)

*ಲಾಂಗ್‌ಜಂಪ್ (ಪುರುಷರು) – ಎಂ.ಶ್ರೀಶಂಕರ್ (ಬೆಳ್ಳಿ)

*ಡೆಕಥ್ಲಾನ್ (ಪುರುಷರು) – ತೇಜಸ್ವಿನ್ ಶಂಕರ್ (ಕಂಚು)

*ಮಹಿಳೆಯರ 5000 ಮೀ. – ಪಾರುಲ್ ಚೌಧರಿ (ಕಂಚು)

*ಮಹಿಳೆಯರ 300 ಮೀ.ಸ್ಟೀಫಲ್‌ಚೇಸ್ – ಪಾರುಲ್ ಚೌಧರಿ (ಕಂಚು)

*4/100 ಮೀಟರ್ ಮಿಶ್ರ ರಿಲೇ: ಅನಿಮೇಶ್ ಕುಜೂರ್, ಗುರಿಂದರ್ ವೀರ್ ಸಿಂಗ್, ಹರಿತ ಭದ್ರ ಹಾಗೂ ಎಸ್.ಸ್ನೇಹಾ (ಕಂಚು)

*4/400 ರಿಲೇ (ಪುರುಷರು) – ಧರ್ಮವೀರ್ ಚೌಧರಿ, ಜಯಕುಮಾರ್, ಮನು ಟಿ.ಎಸ್. ಹಾಗೂ ವಿಶಾಲ್ ಟಿ.ಕೆ. (ಕಂಚು)

**3 ಪದಕ ಕೊರಳಿಗೇರಿಸಿದ ವಿದ್ಯಾ ರಾಮ್‌ರಾಜ್:**

ಮಹಿಳೆಯರ 400 ಮೀ. ಹರ್ಡಲ್ಸ್ (ಕಂಚು)
4/400 ಮೀ. ರಿಲೇ (ಕಂಚು)
4/400 ಮೀ. ಮಿಶ್ರ ರಿಲೇ (ಬೆಳ್ಳಿ)

**ಕಿಸ್‌ಗೆ ಎರಡು ಪದಕಗಳ ಗರಿ:**

ಕಳಿಂಗ ಇನ್‌ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ (ಕಿಸ್) ಕ್ರೀಡಾಪಟುಗಳು 2 ಪದಕ ಪಡೆದಿದ್ದಾರೆ. ಇದರಲ್ಲಿ ಸುನೇಲಿತಾ ಟೊಪ್ಪೊ ಹಾಗೂ ಅಮಿತ್ ರೋಹಿದಾಸ್ ಅವರು ಪುರುಷರ ಹಾಕಿಯಲ್ಲಿ ಚಿನ್ನದ ಪದಕ ಪಡೆದಿದ್ದಾರೆ.

**ಸಮಂತ ಅವರಿಗೆ ಕ್ರೀಡಾಪಟುಗಳ ಧನ್ಯವಾದ:**

ಕೆಐಐಟಿ ಹಾಗೂ ಕೆಐಎಸ್‌ಎಸ್ ಏಷ್ಯನ್ ಗೇಮ್ಸ್‌ನಲ್ಲಿ ಐತಿಹಾಸಿಕ ಸಾಧನೆ ಮಾಡುವಲ್ಲಿ ಸಾಕಷ್ಟು ಪ್ರೋತ್ಸಾಹ, ಬೆಂಬಲ ನೀಡಿರುವ ಅಚ್ಯುತ ಸಮಂತ ಅವರಿಗೆ ಪದಕ ವಿಜೇತ ಕ್ರೀಡಾಪಟುಗಳ ಧನ್ಯವಾದಗಳನ್ನು ತಿಳಿಸಿದ್ದಾರೆ. ಸಮಂತ ಅವರು ಶಿಕ್ಷಣಕ್ಕೆ ನೀಡುವಷ್ಟೇ ಪ್ರೋತ್ಸಾಹವನ್ನು ಕ್ರೀಡೆಗೂ ನೀಡುತ್ತಿದ್ದಾರೆ. ಸಂಸ್ಥೆಯಲ್ಲಿ ವಿಶ್ವದರ್ಜೆಯ ಕ್ರೀಡಾ ಸೌಲಭ್ಯಗಳು, ಅತ್ಯುತ್ತಮ ಮಾರ್ಗದರ್ಶಕರು ಇರುವುದರಿಂದಲೇ ಈ ಸಾಧನೆ ಮಾಡಲು ಸಾಧ್ಯವಾಗಿದೆ. ಸಮಂತ ಅವರ ದೂರದೃಷ್ಟಿ ಹಾಗೂ ಮುಂದಾಲೋಚನೆಯಿಂದ ಸಂಸ್ಥೆ ಇಷ್ಟು ಪದಕ ಗೆಲ್ಲಲು ಸಾಧ್ಯವಾಗಿದೆ. ಅವರು ನೀಡುತ್ತಿರುವ ಪ್ರೋತ್ಸಾಹ ನಮ್ಮ ಉತ್ಸಾಹವನ್ನು ಇಮ್ಮಡಿಗೊಳಿಸಿದೆ ಎಂದು ಕೆಐಐಟಿ, ಕೆಐಎಂಎಸ್ ಹಾಗೂ ಕೆಐಎಸ್‌ಎಸ್ ಸಂಸ್ಥಾಪಕರು ಹಾಗೂ ಮಾಜಿ ಸಂಸದ ಡಾ. ಅಚ್ಯುತ ಸಮಂತ ಹೇಳಿದ್ದಾರೆ.

# ಪತ್ರಕರ್ತೆಗೆ ಕಿರುಕುಳ ನೀಡಿ ವಿಕೃತಿ ಮೆರೆದ ಪೊಲೀಸ್ ಅಧಿಕಾರಿಗೆ ಬಡ್ತಿ

**ನವದೆಹಲಿ, ಅ. 6:** ಜಂತರ್ ಮಂತರ್‌ನಲ್ಲಿ ನಡೆದ ಮುಖ್ಯ ಚುನಾವಣಾ ಆಯುಕ್ತರ ವಿರುದ್ಧದ ಪ್ರತಿಭಟನೆ ವೇಳೆ ಮಹಿಳಾ ಪತ್ರಕರ್ತೆಯರಿಗೆ ಲೈಂಗಿಕ ಕಿರುಕುಳ ನೀಡಿದ ಗಂಭೀರ ಆರೋಪ ಎದುರಿಸುತ್ತಿರುವ ದೆಹಲಿ ಪೊಲೀಸ್ ಅಧಿಕಾರಿಗೆ ಇದೀಗ ಬಡ್ತಿ ನೀಡಲಾಗಿದೆ. ಆರೋಪ ಹೊತ್ತಿರುವ ಕನ್ನಾಟ್ ಪ್ಲೇಸ್ ವಿಭಾಗದ ಎಸಿಪಿ ವಿವೇಕ್ ಭಗತ್ ಅವರನ್ನು ಹೆಚ್ಚುವರಿ ಡಿಸಿಪಿಯಾಗಿ ಮುಂಬಡ್ತಿ ನೀಡಿ ಸೋಮವಾರ ಆದೇಶ ಹೊರಡಿಸಲಾಗಿದೆ. ಈ ಕುರಿತು ಸ್ಪಷ್ಟನೆ ನೀಡಿರುವ ಹಿರಿಯ ಪೊಲೀಸ್ ಅಧಿಕಾರಿಗಳು, ಇದೊಂದು ವಾಡಿಕೆಯ ಪ್ರಕ್ರಿಯೆ ಎಂದು ಸಮರ್ಥಿಸಿಕೊಂಡಿದ್ದಾರೆ. ಅಧಿಕಾರಿಗಳ ಬಡ್ತಿಗೆ ಸಂಬಂಧಿಸಿದ ಕಡತಗಳನ್ನು ಬಹಳ ಹಿಂದೆಯೇ ರವಾನಿಸಲಾಗಿತ್ತು. ಅದರಂತೆ ವಿವೇಕ್ ಭಗತ್ ಅವರೊಂದಿಗೆ ಇತರ 11 ಅಧಿಕಾರಿಗಳಿಗೂ ಬಡ್ತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಶನಿವಾರ ಜಂತರ್ ಮಂತರ್‌ನಲ್ಲಿ ಚುನಾವಣಾ ಆಯೋಗದ ವಿರುದ್ಧ ನಡೆದ ಪ್ರತಿಭಟನೆ ವೇಳೆ ಮೂವರು ಮಹಿಳಾ ಪತ್ರಕರ್ತೆಯರು ಹಿರಿಯ ಪೊಲೀಸ್ ಅಧಿಕಾರಿಗಳ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಮಾಡಿದ್ದರು. ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯುತ್ತಿದ್ದರು, ಆದರೆ ಸ್ಥಳದಲ್ಲಿ ಯಾವುದೇ ಮಹಿಳಾ ಪೊಲೀಸ್ ಸಿಬ್ಬಂದಿ ಇರಲಿಲ್ಲ. ಈ ಬಗ್ಗೆ ನಾನು ಎಸಿಪಿ ವಿವೇಕ್ ಭಗತ್ ಅವರನ್ನು ಪ್ರಶ್ನಿಸಿದಾಗ, ಅವರು ನನ್ನ ಮೇಲೆ ಲೈಂಗಿಕ ದೌರ್ಜನ್ಯವೆಸಗಿ, ಹಿಂದಕ್ಕೆ ತಳ್ಳಿದರು ಎಂದು ಸಂತ್ರಸ್ತ ಪತ್ರಕರ್ತೆಯೊಬ್ಬರು ಆರೋಪಿಸಿದ್ದರು. ಆರೋಪಗಳ ಬೆನ್ನಲ್ಲೇ ಶನಿವಾರ ಸಂಜೆ ಹಲವಾರು ಸ್ವತಂತ್ರ ಪತ್ರಕರ್ತರು ಹಾಗೂ ಸಾಮಾಜಿಕ ಜಾಲತಾಣಗಳ ಪ್ರಭಾವಿಗಳು ಸಂಸತ್ ಮಾರ್ಗ ಪೊಲೀಸ್ ಠಾಣೆ ಎದುರು ಜಮಾಯಿಸಿ, ಆರೋಪಿ ಎಸಿಪಿ ಹಾಗೂ ಇತರ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಪ್ರತಿಭಟನೆ ನಡೆಸಿದ್ದರು. ಸದ್ಯ ದೆಹಲಿ ಪೊಲೀಸರು ಈ ಬಗ್ಗೆ ಪ್ರತಿಕ್ರಿಯಿಸಿದ್ದು, ಪತ್ರಕರ್ತೆಯರ ದೂರುಗಳನ್ನು ಸ್ವೀಕರಿಸಲಾಗಿದ್ದು, ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತ ತನಿಖೆಗಾಗಿ ಪ್ರಕರಣವನ್ನು ?ಕ್ರೈಂ ಬ್ರ್ಯಾಂಚ್‌ಗೆ ವರ್ಗಾಯಿಸಲಾಗಿದೆ ಎಂದು ತಿಳಿಸಿದ್ದಾರೆ. ಆದರೆ, ಆರೋಪಿ ಅಧಿಕಾರಿಗೆ ಬಡ್ತಿ ನೀಡಿರುವುದನ್ನು ತೀವ್ರವಾಗಿ ಖಂಡಿಸಿರುವ ಕಾಕ್ರೋಚ್ ಜನತಾ ಪಾರ್ಟಿ, ಲೈಂಗಿಕ ದೌರ್ಜನ್ಯ ಎಸಗಿದ್ದಕ್ಕೆ ಈ ಬಡ್ತಿಯೇ ಬಹುಮಾನವೇ ಎಂದು ಕಿಡಿಕಾರಿದೆ.

ಘಟನೆಯನ್ನು ಖಂಡಿಸಿರುವ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ದೆಹಲಿ ಪೊಲೀಸರ ಕಾರ್ಯವೈಖರಿಯ ವಿರುದ್ಧ ಹರಿಹಾಯ್ದಿದ್ದಾರೆ. ಪತ್ರಕರ್ತೆಯರು ಪೊಲೀಸ್ ಅಧಿಕಾರಿ ವಿರುದ್ಧ ದುರ್ವರ್ತನೆ ಆರೋಪ ಮಾಡಿದ್ದಾರೆ. ಎಫ್‌ಐಆರ್ ದಾಖಲಿಸಬೇಕೆಂದು ನೂರಾರು ಪತ್ರಕರ್ತರು ಗಂಟೆಗಟ್ಟಲೆ ಧರಣಿ ನಡೆಸಿದ್ದಾರೆ. ಎಫ್‌ಐಆರ್ ದಾಖಲಿಸುವುದು ಪೊಲೀಸರ ಕನಿಷ್ಠ ಕರ್ತವ್ಯವಲ್ಲವೇ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರಿಯಾಂಕಾ ಗಾಂಧಿ ಪ್ರತಿಕ್ರಿಯಿಸಿ, ರಕ್ಷಣೆ ನೀಡಬೇಕಾದ ಪೊಲೀಸರೇ ಮಹಿಳೆಯರಲ್ಲಿ ಭಯ ಹುಟ್ಟಿಸುತ್ತಿದ್ದಾರೆ. ಕಾಲೇಜು ವಿದ್ಯಾರ್ಥಿನಿಯರಿಂದ ಹಿಡಿದು ಪತ್ರಕರ್ತೆಯರವರೆಗೆ ಎಲ್ಲೆಡೆ ಮಹಿಳೆಯರು ಅಭದ್ರತೆ ಎದುರಿಸುತ್ತಿದ್ದಾರೆ. ಹತ್ತಾರು ಪತ್ರಕರ್ತರು ಪ್ರತಿಭಟಿಸಿದರೂ ಎಫ್‌ಐಆರ್ ದಾಖಲಿಸಿಲ್ಲ, ಯಾವುದೇ ಕಠಿಣ ಕ್ರಮವನ್ನೂ ಕೈಗೊಂಡಿಲ್ಲ. ಶಾಂತಿಯುತವಾಗಿ ಪ್ರತಿಭಟಿಸುತ್ತಿರುವ ಮಹಿಳೆಯರೊಂದಿಗೂ ಪೊಲೀಸರು ಅಸಭ್ಯವಾಗಿ ವರ್ತಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಪತ್ರಕರ್ತರ ಮೇಲಿನ ಪೊಲೀಸರ ವರ್ತನೆ ಕುರಿತು ದೆಹಲಿಯ ಪ್ರೆಸ್ ಕ್ಲಬ್ ಆಫ್ ಇಂಡಿಯಾ ತೀವ್ರ ಆಘಾತ ಮತ್ತು ಬೇಸರ ವ್ಯಕ್ತಪಡಿಸಿದೆ. ಪ್ರಜಾಪ್ರಭುತ್ವದಲ್ಲಿ ಇಂತಹ ವರ್ತನೆಗಳನ್ನು ಸಾಮಾನ್ಯವೆಂದು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಪತ್ರಕರ್ತರು ಯಾವುದೇ ಭಯ, ಆಕ್ರಮಣಶೀಲತೆ ಮತ್ತು ಬೆದರಿಕೆಗಳಿಲ್ಲದೆ ಮುಕ್ತವಾಗಿ ತಮ್ಮ ಕರ್ತವ್ಯ ನಿಭಾಯಿಸಲು ಅವಕಾಶ ನೀಡಬೇಕು. ರಾಷ್ಟ್ರದ ರಾಜಧಾನಿಯಲ್ಲೇ ಮಾಧ್ಯಮ ಸ್ವಾತಂತ್ರ್ಯಕ್ಕೆ ಈ ರೀತಿಯ ಅಡ್ಡಿಯಾಗುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ. ದೆಹಲಿ ಪೊಲೀಸರು ತಕ್ಷಣವೇ ದೂರಿನ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದೆ.

# ಹಾರ್ಮುಜ್ ಜಲಸಂಧಿಯಲ್ಲಿ ಹಡಗಿಗೆ ಕ್ಷಿಪಣಿ ದಾಳಿ: 11 ಭಾರತೀಯರು ಗಾಯ

**ನವದೆಹಲಿ, ಅ. 6:** ಓಮನ್ ಕರಾವಳಿ ಸಮೀಪ ಹಾರ್ಮುಜ್ ಜಲಸಂಧಿಯಲ್ಲಿ ಪನಾಮಾ ಧ್ವಜದ ವಾಣಿಜ್ಯ ಹಡಗೊಂದರ ಮೇಲೆ ಕ್ಷಿಪಣಿ ಅಪ್ಪಳಿಸಿದ ಪರಿಣಾಮ 11 ಭಾರತೀಯ ಸಿಬ್ಬಂದಿ ಗಾಯಗೊಂಡಿದ್ದಾರೆ. ಮಂಗಳವಾರ ಬೆಳಗ್ಗೆ ಈ ಘಟನೆ ನಡೆದಿದ್ದು, ಘಟನೆಯನ್ನು ಭಾರತ ತೀವ್ರವಾಗಿ ಖಂಡಿಸಿದೆ.

ಎಂಟಿ ಆನ್ ಪೀಸ್ ಹೆಸರಿನ ಹಡಗಿನಲ್ಲಿ ಒಟ್ಟು 19 ಸಿಬ್ಬಂದಿ ಇದ್ದರು. ಅವರ ಪೈಕಿ 17 ಮಂದಿ ಭಾರತೀಯರು. ಕ್ಷಿಪಣಿ ಅಪ್ಪಳಿಸಿದ ಪರಿಣಾಮ ಒಟ್ಟು 12 ಸಿಬ್ಬಂದಿ ಗಾಯಗೊಂಡಿದ್ದು, ಅವರಲ್ಲಿ 11 ಮಂದಿ ಭಾರತೀಯರಾಗಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಗಾಯಗೊಂಡ ಸಿಬ್ಬಂದಿಯನ್ನು ಓಮನ್ ಅಧಿಕಾರಿಗಳ ನೆರವಿನಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದ್ದು, ಓಮನ್ನ ಖಿಸಬ್‌ನಲ್ಲಿ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳ ರಕ್ಷಣೆಗೆ ನೆರವು ನೀಡಿದ ಓಮನ್ ಅಧಿಕಾರಿಗಳಿಗೆ ಭಾರತ ಕೃತಜ್ಞತೆ ಸಲ್ಲಿಸಿದೆ.

ಹೋರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳ ಬಗ್ಗೆ ಭಾರತ ತೀವ್ರ ಕಳವಳ ವ್ಯಕ್ತಪಡಿಸಿದೆ. ವಾಣಿಜ್ಯ ಹಡಗುಗಳು, ನಾವಿಕರು ಹಾಗೂ ನಾಗರಿಕ ಮೂಲಸೌಕರ್ಯಗಳನ್ನು ಗುರಿಯಾಗಿಸುವ ದಾಳಿಗಳು ತಕ್ಷಣವೇ ನಿಲ್ಲಬೇಕು ಎಂದು ವಿದೇಶಾಂಗ ಸಚಿವಾಲಯ ಒತ್ತಾಯಿಸಿದೆ. ಅಂತಾರಾಷ್ಟ್ರೀಯ ಜಲಮಾರ್ಗಗಳಲ್ಲಿ ಸುರಕ್ಷಿತ ನೌಕಾಯಾನ ಮತ್ತು ವಾಣಿಜ್ಯ ಸಂಚಾರವನ್ನು ಶೀಘ್ರ ಮರುಸ್ಥಾಪಿಸಬೇಕು ಎಂದು ಭಾರತ ಆಗ್ರಹಿಸಿದೆ.

# 21 ಕಿ.ಮೀ. ಎತ್ತರದಲ್ಲಿ ಡಿಆರ್‌ಡಿಒ ಹೈ ಆಲ್ಟಿಟ್ಯೂಡ್ ಪ್ಲಾಟ್‌ಫಾರ್ಮ್ ಯಶಸ್ವಿ ಪರೀಕ್ಷೆ

**ನವದೆಹಲಿ, ಅ. 6:** ಭಾರತದ ವೈಮಾನಿಕ ಕಣ್ಗಾವಲು ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಮಹತ್ವದ ಸಾಧನೆ ಮಾಡಿದೆ. ಸ್ವದೇಶಿ ತಂತ್ರಜ್ಞಾನದಲ್ಲಿ ಅಭಿವೃದ್ಧಿಪಡಿಸಿರುವ ಹೈ ಆಲ್ಟಿಟ್ಯೂಡ್ ಪ್ಲಾಟ್ಫಾರ್ಮ್‌ನ ಹಾರಾಟ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದೆ. ಪರೀಕ್ಷೆಯ ವೇಳೆ ಪ್ಲಾಟ್‌ಫಾರ್ಮ್ ಸಮುದ್ರ ಮಟ್ಟದಿಂದ 21 ಕಿ.ಮೀ. ಎತ್ತರ ತಲುಪಿದೆ.



ಪರೀಕ್ಷೆಯ ಸಂದರ್ಭದಲ್ಲಿ ಪ್ಲಾಟ್‌ಫಾರ್ಮ್ ಅನ್ನು ಸುಮಾರು 20 ಕಿ.ಮೀ. ಎತ್ತರದಲ್ಲಿ 30 ನಿಮಿಷಕ್ಕೂ ಹೆಚ್ಚು ಕಾಲ ಸ್ಥಿರವಾಗಿ ಇರಿಸಲಾಯಿತು. ಬಳಿಕ ನಿಯಂತ್ರಿತವಾಗಿ ಕೆಳಕ್ಕೆ ಇಳಿಸಿ ಸುರಕ್ಷಿತವಾಗಿ ಭೂಮಿಗೆ ಮರಳಿ ತರಲಾಯಿತು. ಹಾರಾಟದ ಸಂಪೂರ್ಣ ಅವಧಿಯಲ್ಲಿ ಪ್ಲಾಟ್‌ಫಾರ್ಮ್‌ನಿಂದ ನೈಜ ಸಮಯದ ವಿಡಿಯೊ ದತ್ತಾಂಶ ಹಾಗೂ ಇತರ ಕಾರ್ಯಾಚರಣಾ ಮಾಹಿತಿಯನ್ನು ನೆಲದ ನಿಯಂತ್ರಣ ಕೇಂದ್ರದಲ್ಲಿ ಸಂಗ್ರಹಿಸಲಾಯಿತು. ಹೈ ಆಲ್ಟಿಟ್ಯೂಡ್ ಪ್ಲಾಟ್‌ಫಾರ್ಮ್‌ನಲ್ಲಿ ಜಿಪಿಎಸ್ ರಿಸೀವರ್, ಆನ್ಬೋರ್ಡ್ ಕ್ಯಾಮೆರಾಗಳು, ಎತ್ತರ ನಿಯಂತ್ರಣ ವ್ಯವಸ್ಥೆ ಸೇರಿದಂತೆ ಹಲವು ಉಪಕರಣಗಳು ಮತ್ತು ನಿಯಂತ್ರಣ ಎಲೆಕ್ಟ್ರಾನಿಕ್ಸ್ ಅಳವಡಿಸಲಾಗಿತ್ತು. ಪರೀಕ್ಷೆಯಲ್ಲಿ ನಿರೀಕ್ಷಿತ ರೀತಿಯ ಕಾರ್ಯಕ್ಷಮತೆ ದಾಖಲಾಗಿದೆ ಎಂದು ಡಿಆರ್‌ಡಿಒ ತಿಳಿಸಿದೆ. ಈ ಪ್ಲಾಟ್‌ಫಾರ್ಮ್ ಅನ್ನು ಆಗ್ರಾದ ಏರಿಯಲ್ ಡೆಲಿವರಿ ರಿಸರ್ಚ್ ಅಂಡ್ ಡೆವಲಪ್ಮೆಂಟ್ ಎಸ್ಟಾಬ್ಲಿಷ್ಮೆಂಟ್ ಅಭಿವೃದ್ಧಿಪಡಿಸುತ್ತಿದೆ. ಇದು ಹಗುರವಾದ, ಗಾಳಿಗಿಂತ ಕಡಿಮೆ ಸಾಂದ್ರತೆಯ ವ್ಯವಸ್ಥೆಯಾಗಿದ್ದು, ದೀರ್ಘಾವಧಿಗೆ ವಾಯುಮಂಡಲದ ಮೇಲ್ಭಾಗದಲ್ಲಿ ಕಾರ್ಯನಿರ್ವಹಿಸುವ ಕಣ್ಗಾವಲು ವೇದಿಕೆಯಾಗಿ ರೂಪಿಸಲಾಗುತ್ತಿದೆ. ಭಾರತೀಯ ವಾಯುಪಡೆ, ಡಿಜಿಸಿಎ, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಸೇರಿದಂತೆ ವಿವಿಧ ಸಂಸ್ಥೆಗಳ ಸಮನ್ವಯದಲ್ಲಿ ಈ ಪರೀಕ್ಷೆ ನಡೆದಿದೆ. ಪರೀಕ್ಷೆ ಯಶಸ್ವಿಯಾಗಿರುವುದು ದೀರ್ಘಾವಧಿಯ ಎತ್ತರದ ಕಣ್ಗಾವಲು ಸಾಮರ್ಥ್ಯ ಅಭಿವೃದ್ಧಿಯಲ್ಲಿ ಮಹತ್ವದ ಹೆಜ್ಜೆಯಾಗಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಡಿಆರ್‌ಡಿಒ, ಭಾರತೀಯ ವಾಯುಪಡೆ, ಸಾರ್ವಜನಿಕ ವಲಯದ ಸಂಸ್ಥೆಗಳು ಹಾಗೂ ಉದ್ಯಮ ವಲಯದ ತಂಡಗಳನ್ನು ಅಭಿನಂದಿಸಿದ್ದಾರೆ. ಸ್ವದೇಶಿ ತಂತ್ರಜ್ಞಾನ ಆಧಾರಿತ ದೀರ್ಘಾವಧಿಯ ಸ್ಟ್ರಾಟೋಸ್ಫಿಯರ್ ಏರ್‌ಶಿಪ್ ಅಭಿವೃದ್ಧಿಯತ್ತ ಇದು ಮಹತ್ವದ ಮೈಲಿಗಲ್ಲು ಎಂದು ಅವರು ಹೇಳಿದ್ದಾರೆ.

# ಫಾರಂ 7 ಅಕ್ರಮ: ತನಿಖೆಗೆ ಆದೇಶ

**ಹೈದರಾಬಾದ್, ಅ. 6:** ಪ್ರಸ್ತುತ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ದೊಡ್ಡ ಪ್ರಮಾಣದಲ್ಲಿ ನಕಲಿ ಫಾರಂ– 7 ಅರ್ಜಿಗಳನ್ನು ಸಲ್ಲಿಸಲಾಗುತ್ತಿದೆ ಎಂಬ ಆರೋಪಗಳ ನಡುವೆ, ಮತದಾರರ ಪಟ್ಟಿಗೆ ಸಂಬಂಧಿಸಿದ ನಮೂನೆಗಳಲ್ಲಿ ಉದ್ದೇಶಪೂರ್ವಕವಾಗಿ ಸುಳ್ಳು ಘೋಷಣೆಗಳನ್ನು ಸಲ್ಲಿಸುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ತೆಲಂಗಾಣದ ಮುಖ್ಯ ಚುನಾವಣಾಧಿಕಾರಿ ಸಿ. ಸುದರ್ಶನ್ ರೆಡ್ಡಿ ಚುನಾವಣಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಫಾರಂ– 7 ಅನ್ನು ಮತದಾರರ ಪಟ್ಟಿಯಲ್ಲಿ ಹೆಸರನ್ನು ಸೇರಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಲು ಅಥವಾ ಈಗಾಗಲೇ ಇರುವ ಹೆಸರನ್ನು ಮತದಾರರ ಪಟ್ಟಿಯಿಂದ ಅಳಿಸುವಂತೆ ಮನವಿ ಮಾಡಲು ಬಳಸಲಾಗುತ್ತದೆ. ಈ ಕುರಿತು ಆಡಳಿತಾರೂಢ ಕಾಂಗ್ರೆಸ್ ಮತ್ತು ಅಸಾದುದ್ದೀನ್ ಓವೈಸಿ ನೇತೃತ್ವದ ಎಐಎಂಐಎಂ ಪಕ್ಷಗಳು ಬಿಜೆಪಿ ವಿರುದ್ಧ ಆರೋಪ ಮಾಡಿದ್ದು, ಪಕ್ಷವು ದೊಡ್ಡ ಪ್ರಮಾಣದಲ್ಲಿ ಫಾರಂ– 7 ಅರ್ಜಿಗಳನ್ನು ಸಲ್ಲಿಸಿ ಮತದಾರರ ಹೆಸರುಗಳನ್ನು ಅಳಿಸಲು ಯತ್ನಿಸಿದೆ ಎಂದು ಆರೋಪಿಸಿವೆ. ಸಲ್ಲಿಸಲಾದ ಅರ್ಜಿಗಳ ಬಗ್ಗೆ ಸಂಬಂಧಿತ ಕಾನೂನಿನ ಅಡಿಯಲ್ಲಿ ಕ್ರಮ ಕೈಗೊಳ್ಳುವ ಮೊದಲು ಜಿಲ್ಲಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಮತದಾರರ ನೋಂದಣಿ ಅಧಿಕಾರಿಗಳು ಸೂಕ್ತ ತನಿಖೆ ನಡೆಸಬೇಕು ಎಂದು ರೆಡ್ಡಿ ಸೂಚಿಸಿದ್ದಾರೆ.

ತೆಲಂಗಾಣದಲ್ಲಿ ಇದುವರೆಗೆ 28,753 ಫಾರಂ–7 ಅರ್ಜಿಗಳು ಬಂದಿವೆ. ಅವುಗಳಲ್ಲಿ 5,000 ಅರ್ಜಿಗಳು ಹೈದರಾಬಾದ್‌ನಿಂದಲೇ ಬಂದಿವೆ ಎಂದು ತಿಳಿದುಬಂದಿದೆ. ರಾಜಕೀಯ ಪಕ್ಷಗಳು ಸೇರಿದಂತೆ ಯಾರೇ ದೊಡ್ಡ ಪ್ರಮಾಣದಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದರೂ, ಯಾವುದೇ ಹೆಸರು ಅಳಿಸುವಂತೆ ಆದೇಶಿಸುವ ಮೊದಲು ಅವುಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಬೇಕು ಎಂದು ರೆಡ್ಡಿ ಹೇಳಿದ್ದಾರೆ. ಹೈದರಾಬಾದ್ನ ಕೆಲವು ಭಾಗಗಳಲ್ಲಿ ಅರ್ಹ ಮತದಾರರ ಹೆಸರುಗಳನ್ನು ಅಳಿಸಲು ಮುಂಚಿತವಾಗಿ ಮುದ್ರಿಸಲಾದ ಫಾರಂ–



7 ಅರ್ಜಿಗಳನ್ನು ಬಳಸಲಾಗುತ್ತಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಈ ನಿರ್ದೇಶನ ಬಂದಿದೆ. ಮತದಾರರ ಮಾಹಿತಿಯನ್ನು ಹೇಗೆ ಪಡೆದು, ಆ ಮಾಹಿತಿಯನ್ನು ಬಳಸಿಕೊಂಡು ಅರ್ಜಿಗಳನ್ನು ಸಿದ್ಧಪಡಿಸಲಾಯಿತು ಎಂಬುದರ ಕುರಿತು ಸಂಘಟಿತ ದುರುಪಯೋಗ ನಡೆದಿದೆ ಎಂದು ಕಾಂಗ್ರೆಸ್ ಆರೋಪಿಸಿ ತನಿಖೆಗೆ ಒತ್ತಾಯಿಸಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ತೆಲಂಗಾಣ ಕಾಂಗ್ರೆಸ್ ವಕ್ತಾರ ಸೈಯದ್ ನಿಜಾಮುದ್ದೀನ್, ಮತದಾರರ ಪಟ್ಟಿಯ ಮಾಹಿತಿಯನ್ನು ಬಳಸಿಕೊಂಡು ಮುಂಚಿತವಾಗಿ ಭರ್ತಿ ಮಾಡಲಾದ ಅರ್ಜಿಗಳನ್ನು ಸಿದ್ಧಪಡಿಸಲಾಗಿದೆ ಎಂದು ಆರೋಪಿಸಿದ್ದಾರೆ. ಇಂತಹ ಅರ್ಜಿಗಳನ್ನು ಚುನಾವಣಾ ಆಯೋಗ ವಶಪಡಿಸಿಕೊಳ್ಳಬೇಕು, ಡೌನ್ಲೋಡ್ ಲಾಗ್ಗಳನ್ನು ಪರಿಶೀಲಿಸಬೇಕು ಮತ್ತು ಅವುಗಳನ್ನು ಸಿದ್ಧಪಡಿಸಿ ಹಂಚಿದವರನ್ನು ಗುರುತಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಹೈದರಾಬಾದ್ ಸಂಸದರು, ಎಐಎಂಐಎಂ ಮುಖ್ಯಸ್ಥರಾದ ಅಸಾದುದ್ದೀನ್ ಓವೈಸಿ ಮಾತನಾಡಿ:

ಸುಳ್ಳು ಫಾರಂ– 7 ಅರ್ಜಿಗಳು ಸಲ್ಲಿಕೆಯಾಗುತ್ತಿದ್ದರೆ, ಸಂಬಂಧಪಟ್ಟವರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ನಾವು ಮನವಿ ಮಾಡುತ್ತೇವೆ. ಈ ನಾಟಕ ನಿಲ್ಲದಿದ್ದರೆ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಗಳಿಗಿಂತಲೂ ದೊಡ್ಡ ಪ್ರತಿಭಟನೆಗಳು ಹೈದರಾಬಾದ್ನ ರಸ್ತೆ ಮತ್ತು ಬೀದಿಗಳಲ್ಲಿ ನಡೆಯಲಿವೆ ಎಂದು ಹೇಳಿದ್ದಾರೆ.

# ಇಂಡಿಯಾ ಬಣದ ಪ್ರತಿಭಟನೆಗೆ ಬಿಜೆಡಿ ಸಾಥ್, ಸಿಇಸಿ ರಾಜೀನಾಮೆಗೆ ಆಗ್ರಹ

**ನವದೆಹಲಿ, ಅ. 6::** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಚುನಾವಣಾ ಆಯೋಗದ ಕಚೇರಿಗೆ ಹೊರಟಿದ್ದ ಇಂಡಿಯಾ ಮೈತ್ರಿಕೂಟದ ಪ್ರತಿಭಟನಾ ಮೆರವಣಿಗೆಯಲ್ಲಿ ಬಿಜೆಡಿ ಸಂಸದರು ಭಾಗವಹಿಸಿದ್ದು ಮಹತ್ವದ ಬೆಳವಣಿಗೆಯಾಗಿದೆ. ಸಂಸತ್ ಭವನದಿಂದ ಹೊರಟ ಮೆರವಣಿಗೆಯನ್ನು ಪೊಲೀಸರು ಪಾರ್ಲಿಮೆಂಟ್ ಸ್ಟ್ರೀಟ್ ನಲ್ಲಿ ತಡೆದರು. ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ನೇತೃತ್ವದಲ್ಲಿ ನಾಯಕರು ಧರಣಿ ಕುಳಿತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿದರು. ಹಲವರನ್ನು ವಶಕ್ಕೆ ಪಡೆಯಲಾಯಿತು. ಇಂಡಿಯಾ ಬಣದ ಸದಸ್ಯವಲ್ಲದ ಬಿಜೆಡಿಯ ಮಾನಸ್ ಮಂಗರಾಜ್ ಮತ್ತು ಸುಲತಾ ದೇವ್ ಪ್ರತಿಭಟನೆಯಲ್ಲಿ ಭಾಗವಹಿಸಿದರು. ನಾವು ಇಂಡಿಯಾ ಮೈತ್ರಿಕೂಟಕ್ಕೂ ಸೇರಿಲ್ಲ, ಎನ್‌ಡಿಎಗೂ ಸೇರಿಲ್ಲ, ಜವಾಬ್ದಾರಿಯುತ ಪ್ರಾದೇಶಿಕ ಪಕ್ಷ ಎಂದು ದೇವ್ ಹೇಳಿದರು. ವೋಟ್ ಚೋರಿ ಇರಲಿ, ಕ್ಷೇತ್ರ ಮರುವಿಂಗಡಣೆ ಇರಲಿ ಕೇಂದ್ರದ ಹುನ್ನಾರವನ್ನು ಸೋಲಿಸಲು ವಿಪಕ್ಷಗಳ ಒಗ್ಗಟ್ಟು ಮುಂದುವರಿಯುತ್ತದೆ ಎಂದು ಕಾಂಗ್ರೆಸ್ ಹೇಳಿದೆ. ಬಿಜೆಡಿ ಬೆಂಬಲಕ್ಕೆ ಮಮತಾ ಬ್ಯಾನರ್ಜಿ ನವೀನ್ ಪಟ್ನಾಯಕ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ. ಬಿಜೆಡಿ ಪ್ರಕಾರ ಎಸ್‌ಐಆರ್ ವೇಳೆ ಫಾರ್ಮ್ 6 ಬದಲಾವಣೆಗೆ ಸುಪ್ರೀಂ ಕೋರ್ಟ್ ಅನುಮೋದನೆ ನೀಡಿದೆ ಎಂದು ಜ್ಞಾನೇಶ್‌ಕುಮಾರ್ ಸುಳ್ಳು ಹೇಳಿದ್ದಾರೆ. ಆದರೆ ಸುಪ್ರೀಂ ಕೋರ್ಟ್ ಯಾವುದೇ ಬದಲಾವಣೆಗೆ ಅನುಮೋದನೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದೆ. ಸೆಪ್ಟೆಂಬರ್ 26ರಂದು ಆಯೋಗ ಸುಪ್ರೀಂ ಕೋರ್ಟ್ ಬೆಂಬಲಿಸಿದೆ ಎಂದು ಪ್ರಕಟಣೆ ಹೊರಡಿಸಿತ್ತು. ಜನರು ಆಯೋಗದ ಮೇಲಿನ ನಂಬಿಕೆ ಕಳೆದುಕೊಂಡಿದ್ದಾರೆ, 2024ರ ಒಡಿಶಾ ಚುನಾವಣೆಯಲ್ಲಿ ಇವಿಎಂ ತಿರುಚಿ ಬಿಜೆಪಿ ಗೆಲ್ಲಿಸಲಾಗಿದೆ ಎಂದು ಬಿಜೆಡಿ ನಾಯಕಿ ಲೇಖಶ್ರೀ ಸಾಮಂತ ಸಿಂಘಾರ್ ಆರೋಪಿಸಿದ್ದಾರೆ.

# ಬಿಜೆಪಿ ಕಾರ್ಯಕರ್ತರ ವಿರುದ್ಧ ಸುಳ್ಳು ಎಫ್‌ಐಆರ್ ಪ್ರಿಯಾಂಕ್ ಖರ್ಗೆ ಜೈಲಿಗೆ ಹೋಗುವ ಕಾಲ ಸಮೀಪಿಸುತ್ತಿದೆ: ಛಲವಾದಿ ನಾರಾಯಣಸ್ವಾಮಿ

**ಬೆಂಗಳೂರು, ಅ.6:** ರಾಜ್ಯದಲ್ಲಿ ವಿವಿಧ ಕಡೆ ಬಿಜೆಪಿ ಕಾರ್ಯಕರ್ತರ ವಿರುದ್ಧ ಸುಳ್ಳು ಎಫ್‌ಐಆರ್‌ಗಳನ್ನು ಹಾಕಲಾಗುತ್ತಿದೆ. ಗೃಹಸಚಿವ ಪ್ರಿಯಾಂಕ ಖರ್ಗೆ ಜೈಲಿಗೆ ಹೋಗುವ ಕಾಲ ಸಮೀಪಿಸುತ್ತಿದೆ ಎಂದು ವಿಧಾನ ಪರಿಷತ್ ಛಲವಾದಿ ನಾರಾಯಣ ಸ್ವಾಮಿ ಎಚ್ಚರಿಕೆ ನೀಡಿದ್ದಾರೆ.



ನಮೂನೆ 7ನ್ನು ದುರುಪಯೋಗ ಪಡಿಸಿಕೊಂಡರೆ ಜೈಲಿಗೆ ಹಾಕುತ್ತೇವೆ ಎಂದು ಗೃಹಸಚಿವರು ಹೇಳುತ್ತಾರೆ. ನ್ಯಾಯಾಲಯ ಹೇಳಿರುವುದನ್ನು ನೋಡಿದರೆ ಗೃಹಸಚಿವರೇ ಜೈಲಿಗೆ ಹೋಗುವ ಕಾಲ ದೂರ ಇಲ್ಲ ಎಂದು ಎಚ್ಚರಿಕೆ ನೀಡಿದರು.

ಸುಳ್ಳು ಎಫ್‌ಐಆರ್ ಹಾಕಿಸಿದ್ದಾರೆ. ಕೋರ್ಟ್ ಕೂಡ ಸರ್ಕಾರಕ್ಕೆ ಛೀಮಾರಿ ಹಾಕಿದೆ. ನಿಮಗೆ ಪ್ರತಿಭಟನೆ ಮಾಡುವ ದಾರಿದ್ರ್ಯ ಬಂದಿದೆ. ಕ್ಯಾಬಿನೆಟ್ ಬಿಟ್ಟು ಪ್ರತಿಭಟನೆ ಮಾಡುವಂತ ಅಪಹಾಸ್ಯಕ್ಕೆ ಒಳಗಾಗಿದ್ದಾರೆ ಎಂದರು.

ಯಾರು ಬೇಕಾದರೂ ಫಾರ್ಮ್ 7 ತುಂಬಬಹುದು. ಕಾಂಗ್ರೆಸ್ ಭಯ ಹುಟ್ಟಿಸುವ ಕೆಲಸ ಮಾಡುತ್ತಿದೆ. ಪರಿಶೀಲನೆ ಮಾಡಿದಾಗ ಅದನ್ನ ತೆಗೆಯುವುದು, ಸೇರಿಸುವುದು ಆಗಲಿದೆ. ಅದನ್ನೇ ರಾಜ್ಯಪಾಲರ ಗಮನಕ್ಕೆ ತಂದಿದ್ದೇವೆ ಎಂದರು. ಬಿಎನ್‌ಎಸ್ ಕಾಯ್ದೆಯಡಿ ಎಫ್‌ಐಆರ್ ಹಾಕಿ ಕಾಂಗ್ರೆಸ್ ಸರ್ಕಾರ ಭಯ ಹುಟ್ಟಿಸುವ ಕೆಲಸ ಮಾಡುತ್ತಿದೆ. ಪೀಪಲ್ ರೆಪ್ರೆಸಂಟೇಟಿವ್ಸ್ ಆಕ್ಟ್ ಅಡಿ ಏನಾದರೂ ಸಮಸ್ಯೆ ಇದ್ದರೆ ಆಯೋಗವೇ ಕ್ರಮ ತೆಗೆದ ುಕೊಳ್ಳಬೇಕು. ಚುನಾವಣಾ ಆಯೋಗದ ಬದಲು, ಪೊಲೀಸರಿಂದ ಮಾಡಿಸುವ ಕೆಲಸ ಸರ್ಕಾರ ಮಾಡುತ್ತಿದೆ ಎಂದು ಆರೋಪಿಸಿದರು.

ಇದೇ ವೇಳೆ ಮಾಜಿ ಸಿಎಂ ಯಡಿಯೂರಪ್ಪ ಮೈತ್ರಿ ಬಗ್ಗೆ ಬೆಂಬಲದ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಯಡಿಯೂರಪ್ಪ ಹೇಳಿರುವುದು ಸರಿ ಇದೆ. ನಮ್ಮಲ್ಲಿ ದ್ವಂದ್ವ, ಗೊಂದಲ ಇಲ್ಲ. ನಾವು ಎನ್‌ಡಿಎ ಒಟ್ಟಾಗಿ ಹೋರಾಡುತ್ತೇವೆ. ನಾವು ಹಾಲು ಜೇನಿನಂತೆ ಇದ್ದೇವೆ. ಮುಂದಿನ ಚುನಾವಣೆಯಲ್ಲಿ ಗೆದ್ದು ಅಧಿಕಾರ ಪಡೆಯುತ್ತೇವೆ. ಕಾಂಗ್ರೆಸ್ ಆಗಲೇ ಚಾಪೆ ಸುತ್ತುತ್ತಿದೆ ಎಂದು ವ್ಯಂಗ್ಯವಾಡಿದರು.

## ಇವಿಎಂ ಹ್ಯಾಕ್ ಆಗಿದ್ದರೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗುತ್ತಿರಲಿಲ್ಲ: ಬಿಜೆಪಿ ತಿರುಗೇಟು

# ಸುಳ್ಳು ಆರೋಪ ಮಾಡಿದ ಸಿಎಂ ವಿರುದ್ಧ ಮೊಕದ್ದಮೆ ದಾಖಲಿಸಿ: ಚುನಾವಣಾ ಆಯೋಗಕ್ಕೆ ಸಿ.ಟಿ.ರವಿ ಆಗ್ರಹ

**ಬೆಂಗಳೂರು, ಅ.6:** ಇ.ವಿ.ಎಂ ವಿಷಯದಲ್ಲಿ ಕಪೋಲಕಲ್ಪಿತ ಆರೋಪ ಮಾಡಿ ಸಾಬೀತು ಮಾಡಿದವರ ವಿರುದ್ಧ ಚುನಾವಣಾ ಆಯೋಗವು ಸ್ವಯಂಪ್ರೇರಿತ ದೂರು ದಾಖಲಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ಸಮುದಾಯದ 60ರಿಂದ 70 ಲಕ್ಷ ಮತಗಳನ್ನು ಗುರಿ ಮಾಡಿ ಮತದಾರರ ಪಟ್ಟಿಯಿಂದ ಹೆಸರನ್ನು ತೆಗೆಯಲು ಹೊರಟಿದ್ದಾರೆ ಎಂದು ನಮ್ಮ ವಿರುದ್ಧ ಆರೋಪ ಮಾಡಿರುವ ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯದ ಮುಖ್ಯಮಂತ್ರಿಗಳ ಮೇಲೆ ಮೊಕದ್ದಮೆ ದಾಖಲಿಸಬೇಕು. ಸಾಬೀತು ಮಾಡದಿದ್ದರೆ ಅವರು ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದರು.

ಇವಿಎಂ ಹ್ಯಾಕ್ ಆಗಿದ್ದಿದ್ದರೆ ಡಿ.ಕೆ.ಶಿವಕುಮಾರ್ ಅವರು ಸಿಎಂ ಆಗುತ್ತಿರಲಿಲ್ಲ. ಅವರ ಪಕ್ಷ ಬಹುಮತ ಪಡೆಯುತ್ತಿರಲಿಲ್ಲ. ಆದರೆ ಪ್ರಧಾನಿ, ಕೇಂದ್ರ ಗೃಹ ಸಚಿವರ ಮೇಲೆ ಸಿಎಂ ಆರೋಪಿಸಿದ್ದಾರೆ. ಅವರದೇ ಸರ್ಕಾರದ ಅಧಿಕಾರಿಗಳು ಆಯೋಗದಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದರು.

### ಕಾಂಗ್ರೆಸ್‌ನಿಂದ ಸಾಮೂಹಿಕ ಮ್ಯಾಪಿಂಗ್

ಸಿಎಂ ಹೇಳಿದ್ದು ಅರವತ್ತರಿಂದ ಎಪ್ಪತ್ತು ಲಕ್ಷ. ಆದರೆ ಕೇವಲ 91 ಸಾವಿರ ಫಾರಂ ನಂಬರ್ 7 ಬಂದಿದೆ ಎಂದು ಆಯೋಗ ಹೇಳಿದೆ. ಇದಕ್ಕೆ ಸಿಎಂ ಉತ್ತರ ಕೊಡಬೇಕು. ಸಿಎಂ ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ. ನ್ಯಾಯಸಮ್ಮತ ಮತದಾರರ ಹೆಸರು ಮಾತ್ರ ಉಳಿಯಬೇಕು.



ಎಸ್‌ಐಆರ್‌ನಲ್ಲಿ ಕಾಂಗ್ರೆಸ್ ಸಾಮೂಹಿಕ ಮ್ಯಾಪಿಂಗ್ ಮಾಡಿಸಿದೆ. ಆ ಮೂಲಕ ತಮಗೆ ಬೇಕಾದ ಮತದಾರರನ್ನು ಮತಪಟ್ಟಿಯಲ್ಲಿ ಸೇರಿಸುವ ಷಡ್ಯಂತ್ರ ಮಾಡಿದೆ. ನಾವೀಗ ದೂರು ನೀಡಿದ್ದರಿಂದ ಕಾಂಗ್ರೆಸ್ ಮಾಡಿದ ಸಂಚು ಬಯಲಾಗಿದೆ. ಈ ಭಯದಿಂದಲೇ ನಮ್ಮ ಮೇಲೆ ದೂರು ದಾಖಲಿಸುತ್ತಿದ್ದಾರೆ ಎಂದು ಸಿ.ಟಿ. ರವಿ ಆರೋಪಿಸಿದರು.

ಎರಡು ಕಡೆ ಮತ ಇದ್ದವರನ್ನು ಬಯಲು ಮಾಡಿ ದೂರು ನೀಡಿದರೆ ನಮ್ಮ ಮೇಲೆಯೇ ಪ್ರಕರಣ ದಾಖಲಿಸುತ್ತಾರೆ. ರಾಹುಲ್ ಗಾಂಧಿ ದೂರು ನೀಡಿದರೆ ಸರಿ, ಬಿಜೆಪಿಯವರು ದೂರು ನೀಡಿದರೆ ಅಪರಾಧವೇ.

ಚುನಾವಣಾ ಆಯೋಗವು ಎಲ್ಲಾ ದೂರುಗಳನ್ನು ಪರಿಶೀಲನೆ ಮಾಡಬೇಕು. ಅಕ್ರಮ ಮತದಾರರ ಹೆಸರನ್ನು ತೆಗೆದು ಹಾಕಲಿ. ಹಾಗೂ ಅಕ್ರಮ ಮಾಡಿದವರ ವಿರುದ್ಧ ಕ್ರಮವಾಗಬೇಕು.

ಆಕ್ಷೇಪಣೆಯ ಸತ್ಯಾಸತ್ಯತೆ ಪರಿಶೀಲಿಸುವ ಹೊಣೆಗಾರಿಕೆ ಚುನಾವಣಾ ಆಯೋಗದ ಮೇಲಿದೆ. ಅಲ್ಪಸಂಖ್ಯಾತರ ಮತಗಳನ್ನು ತೆಗೆಯಲು ಸಂಚು ನಡೆದಿದೆ ಎಂದು ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ. ವಾಸ್ತವವಾಗಿ ಹಿಂದೂ ಮತದಾರರ ಹೆಸರೇ ಹೆಚ್ಚು ತೆಗೆಯಲಾಗಿದೆ ಎಂದು ಸಿ.ಟಿ. ರವಿ ಹೇಳಿದರು.

ಎಫ್‌ಐಆರ್ ಹಾಕುವಂತೆ ಚುನಾವಣಾ ಆಯೋಗ ದೂರು ನೀಡಿಲ್ಲ. ಯಂಕ, ನಾಣ, ಶೀನ ಹೆಸರಲ್ಲಿ ದೂರು ಪಡೆದು ಬಿಜೆಪಿ ಕಾರ್ಯಕರ್ತರ ಮೇಲೆ ಎಫ್‌ಐಆರ್ ಹಾಕಿ ಕಿರುಕುಳ ನೀಡುತ್ತಿದ್ದಾರೆ. ಅಧಿಕಾರ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಆಯೋಗ ಸ್ವಾಯುತ್ತ ಸಂಸ್ಥೆ, ಸರ್ಕಾರದ ಸಂಸ್ಥೆ ಅಲ್ಲ. ನಾವು ಸಾಂವಿಧಾನಿಕ ಮಾರ್ಗದಲ್ಲಿ ಹೋದರೆ ಕಾಂಗ್ರೆಸ್ ಅರಾಜಕತೆ ಸೃಷ್ಟಿ ಮಾಡುತ್ತಿದೆ.

ತನಿಖೆ ಮಾಡಿ ಎಂದು ಕೇಳುವುದೇ ಅಪರಾಧವಾಗಿದ್ದರೆ ಯಾವ ಕಾಯ್ದೆ ಅಡಿ ಅಪರಾಧ ಎಂದು ಕಾಂಗ್ರೆಸ್ ಹೇಳಲಿ ಎಂದು ಸಿ.ಟಿ.ರವಿ ಆಗ್ರಹಿಸಿದರು.

## ಸಂತ್ರಸ್ತರು ಜನಸಾಮಾನ್ಯರು: ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು

# ಅಡುಗೆ ಅನಿಲ ದರ ಏರಿಕೆಗೆ ಅಮೆರಿಕ ಅಧ್ಯಕ್ಷರ ಧೋರಣೆ ಕಾರಣ

**ಬೆಂಗಳೂರು, ಅ.6:** ಅಮೆರಿಕ ಅಧ್ಯಕ್ಷರ ಧೋರಣೆಯಿಂದ ತಮ್ಮ ಮನಸ್ಸು ಕದಡಿದೆ. ಆದರೆ ಅವರನ್ನು ಟೀಕಿಸಲಾರೆ. ಅಲ್ಲಿನ ಪರಿಣಾಮಗಳಿಂದ ನಮ್ಮ ದೇಶದಲ್ಲಿ ಅಡುಗೆ ಅನಿಲ ಬೆಲೆಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಸಾಮಾನ್ಯ ಕುಟುಂಬ, ಜನಸಾಮಾನ್ಯರು ತೀವ್ರ ಬಾಧಿತರಾಗಿದ್ದಾರೆ ಎಂದು ಮಾಜಿ ಉಪರಾಷ್ಟ್ರಪತಿ ಹಾಗೂ ಪದ್ಮವಿಭೂಷಣ ಎಂ.ವೆಂಕಯ್ಯ ನಾಯ್ಡು ವಿಷಾದ ವ್ಯಕ್ತಪಡಿಸಿದ್ದಾರೆ.

ಯಲಹಂಕ ಉಪನಗರದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನಲ್ಲಿ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆಗಳ 96ನೇ ವರ್ಷದ ಸಂಸ್ಮರಣಾ ಸಮಾರಂಭದಲ್ಲಿ ಮಾತನಾಡಿ, ಅಮೆರಿಕ ಸದಾ ಕಾಲ ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುತ್ತದೆ. ಆದರೆ ವಾಸ್ತವವಾಗಿ ಈಗ ಏನಾಗಿದೆ. ಎಲ್.ಪಿ.ಜಿ ದರಗಳ ಏರಿಕೆ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬಂದರೂ ಈ ವಿಚಾರದಲ್ಲಿ ಕೇಂದ್ರದ ತಪ್ಪಿಲ್ಲ. ಕೆಲವರು ಕ್ರೇಜಿಯಾಗಿದ್ದು, ಕೆಲವರಲ್ಲಿ ಅತಿ ಹೆಚ್ಚು ಹಣವಿದೆ. ಹೀಗಾಗಿ ಅಂತಹ ಉನ್ನತ ವರ್ಗ ಜನಸಾಮಾನ್ಯರನ್ನು ನಿರ್ದೇಶಿಸುತ್ತಿದ್ದಾರೆ. ಏನೇ ಆದರೂ ಶಾಂತಿ ಪ್ರಗತಿಯ ಸಂಕೇತವಾಗಿದೆ. ಶಾಂತಿ, ಸಮೃದ್ಧತೆಗೆ ಬುನಾದಿ. ಇದನ್ನು ಮರೆಯಬಾರದು ಎಂದು ಅಮೆರಿಕಗೆ ಕಿವಿಮಾತು ಹೇಳಿದರು.

### ಕುಟುಂಬ ವ್ಯವಸ್ಥೆ ವಾಪಸ್ ಬರಬೇಕು

ಸಾಮಾಜಿಕ ಮಾಧ್ಯಮಗಳು ಸಮಾಜ ವಿರೋಧಿಯಾಗಿದ್ದು, ಗೂಗಲ್‌ನಲ್ಲಿ ಯಾವುದೋ ಶೀರ್ಷಿಕೆ ನೋಡುತ್ತೀರಿ, ಆದರೆ ಅದರಲ್ಲಿ ವಾಸ್ತವಾಂಶವೇ ಇರುವುದಿಲ್ಲ. ಯುವ ಸಮೂಹ ಇಂತಹ ಮಾಧ್ಯಮಗಳಲ್ಲಿ ಸಮಯ ವ್ಯರ್ಥ ಮಾಡದೇ ತಂದೆ, ತಾಯಿ, ಅಜ್ಜ, ಅಜ್ಜಿಯರ ಜೊತೆ ಸಮಯ ಕಳೆಯಬೇಕು. ನಮ್ಮ ಕುಟುಂಬ ವ್ಯವಸ್ಥೆ ಮತ್ತೆ ವಾಪಸ್ ಬರಬೇಕು. ಅಂತಾರಾಷ್ಟ್ರೀಯ ಹಣಕಾಸು ನಿಧಿಯ ಇತ್ತೀಚಿನ ಹೇಳಿಕೆ ಪ್ರಕಾರ ಭಾರತ ಆರ್ಥಿಕವಾಗಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ದೇಶವಾಗಿದೆ.




ನೂತನ ಶಿಕ್ಷಣ ನೀತಿಯಿಂದ ಸಮಗ್ರ ಬದಲಾವಣೆಯಾಗಿದೆ. ವಿದ್ಯಾರ್ಥಿಗಳು ಕೇವಲ ಪದವಿ ಹಾಗೂ ಉದ್ಯೋಗ ಪಡೆಯುವುದಕ್ಕೆ ಶಿಕ್ಷಣವನ್ನು ಸೀಮಿತಗೊಳಿಸದೆ, ಜ್ಞಾನ, ಕೌಶಲ್ಯ, ನೈತಿಕ ಮೌಲ್ಯಗಳು ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ಯುವಶಕ್ತಿಯೇ ಭಾರತದ ಅತ್ಯಂತ ದೊಡ್ಡ ಸಂಪತ್ತು. ಯುವಜನ ವಿಕಸಿತ ಭಾರತದ ನಿಜವಾದ ಶಿಲ್ಪಿಗಳು. ಯುವ ಸಮೂಹ ದೊಡ್ಡ ಕನಸುಗಳನ್ನು ಕಂಡು ನನಸು ಮಾಡಲು ನಿರಂತರ ಪರಿಶ್ರಮ, ಆತ್ಮವಿಶ್ವಾಸ ಮತ್ತು ಶಿಸ್ತನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶಿಕ್ಷಣವೆಂದರೆ ಕೇವಲ ಪುಸ್ತಕದ ಜ್ಞಾನವಲ್ಲ. ಅದು ವ್ಯಕ್ತಿತ್ವ ನಿರ್ಮಾಣ, ಉತ್ತಮ ಚಿಂತನೆ ಹಾಗೂ ಸಮಾಜದ ಅಭಿವೃದ್ಧಿಗೆ ದಾರಿಯಾಗಬೇಕು ಎಂದು ವೆಂಕಯ್ಯನಾಯ್ಡು ಆಶಯ ವ್ಯಕ್ತಪಡಿಸಿದರು.

### ಉದ್ಯೋಗ ನೀಡುವವರಾಗಿ

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೃತಕ ಬುದ್ಧಿಮತ್ತೆ, ವಿಜ್ಞಾನ, ತಂತ್ರಜ್ಞಾನ, ಸಂಶೋಧನೆ ಮತ್ತು ನಾವೀನ್ಯತೆಗೆ ಹೆಚ್ಚಿನ ಮಹತ್ವವಿದೆ. ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಸಿಕೊಳ್ಳುವ ಜೊತೆಗೆ ಮಾನವೀಯ ಮೌಲ್ಯಗಳನ್ನು ಮರೆಯಬಾರದು. ಹೊಸ ಆವಿಷ್ಕಾರಗಳು, ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿಯ ಮೂಲಕ ಉದ್ಯೋಗ ಅರಸುವವರಿಗಿಂತ ಉದ್ಯೋಗದಾತರಾಗಲು ಗಮನಹರಿಸಬೇಕು. ಭಾರತವನ್ನು ವಿಶ್ವದ ಮುಂಚೂಣಿ ರಾಷ್ಟ್ರವನ್ನಾಗಿ ರೂಪಿಸುವ ಸಾಮರ್ಥ್ಯ ಇಂದಿನ ವಿದ್ಯಾರ್ಥಿಗಳಲ್ಲಿದೆ. ಯುವಜನರ ಜ್ಞಾನ, ಪ್ರತಿಭೆ, ಪರಿಶ್ರಮ ಮತ್ತು ದೇಶಪ್ರೇಮ ಒಂದಾದಾಗ ವಿಕಸಿತ ಭಾರತದ ಕನಸು ನನಸಾಗಲು ಸಾಧ್ಯ. ಆಧುನಿಕ ಶಿಕ್ಷಣದೊಂದಿಗೆ ನೈತಿಕತೆ, ಪ್ರಾಮಾಣಿಕತೆ ಮತ್ತು ಸಾಮಾಜಿಕ ಕಳಕಳಿಯನ್ನು ಅಳವಡಿಸಿಕೊಂಡಾಗ ಮಾತ್ರ ಶಿಕ್ಷಣ ಸಾರ್ಥಕವಾಗುತ್ತದೆ ಎಂದು ವೆಂಕಯ್ಯನಾಯ್ಡು ಪ್ರತಿಪಾದಿಸಿದರು.

### 96 ವರ್ಷಗಳ ಶೈಕ್ಷಣಿಕ ಸೇವೆ ಶ್ಲಾಘನೀಯ

ಸುಮಾರು ಒಂದು ಶತಮಾನದ ಶೈಕ್ಷಣಿಕ ಪರಂಪರೆಯನ್ನು ಹೊಂದಿರುವ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆಗಳು ಅಸಂಖ್ಯಾತ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿವೆ. ಗುಣಮಟ್ಟದ ಶಿಕ್ಷಣದೊಂದಿಗೆ ಶಿಸ್ತು, ಸಂಸ್ಕಾರ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಶಿಕ್ಷಣ ಸಂಸ್ಥೆಗಳ ಸೇವೆ ಸಮಾಜದ ಪ್ರಗತಿಗೆ ಅತ್ಯಂತ ಅಗತ್ಯ ಎಂದು ವೆಂಕಯ್ಯ ನಾಯ್ಡು ಮೆಚ್ಚುಗೆ ವ್ಯಕ್ತಪಡಿಸಿದರು.

ಶೇಷಾದ್ರಿಪುರಂ ಶೈಕ್ಷಣಿಕ ಟ್ರಸ್ಟ್ ಅಧ್ಯಕ್ಷ ಎನ್.ಆರ್. ಪಂಡಿತಾ ರಾಧ್ಯ, ಗೌರವ ಪ್ರಧಾನ ಕಾರ್ಯದರ್ಶಿ ನಾಡೋಜ ಡಾ. ವೂಡೇ ಪಿ. ಕೃಷ್ಣ ಮಾತನಾಡಿದರು. ಪರಿಸರ ಸಂರಕ್ಷಣೆ ಮತ್ತು ಹಸಿರು ಭವಿಷ್ಯದ ಮಹತ್ವ ಸಾರುವ ಉದ್ದೇಶದಿಂದ ಮಾಜಿ ಉಪರಾಷ್ಟ್ರಪತಿ ಸಸಿ ನೆಟ್ಟರು. ಶೇಷಾದ್ರಿಪುರಂ ಶೈಕ್ಷಣಿಕ ಟ್ರಸ್ಟ್ ಉಪಾಧ್ಯಕ್ಷ ಟಿ.ಎಸ್. ಹೆಂಜಾರಪ್ಪ ಮತ್ತು ಡಬ್ಲ್ಯು.ಎಚ್. ಅನಿಲ್‌ಕುಮಾರ್, ಗೌರವ ಖಜಾಂಚಿ ಬಿ.ಎಂ. ಪಾರ್ಥಸಾರಥಿ, ಗೌರವ ಜಂಟಿ ಕಾರ್ಯದರ್ಶಿ ಎಸ್. ಶೇಷನಾರಾಯಣ, ಗೌರವ ಸಹಾಯಕ ಕಾರ್ಯದರ್ಶಿ ಎಂ.ಎಸ್. ನಟರಾಜ್, ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಎಸ್.ಎನ್. ವೆಂಕಟೇಶ್, ಕಾರ್ಯಕ್ರಮ ಸಂಯೋಜಕ ಡಾ.ಶಂತನು ದಾಸ್, ಪದಾಧಿಕಾರಿಗಳು, ಪ್ರಾಧ್ಯಾಪಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಐದು ಪ್ರತ್ಯೇಕ ಕಮಿಷನರೇಟ್‌ಗಳ ಸ್ಥಾಪನೆಗೆ ಸಂಪುಟ ಒಪ್ಪಿಗೆ: ಸಚಿವ ಪ್ರಿಯಾಂಕ್ ಖರ್ಗೆ

ಜಿಬಿಎ ರಚನೆ ಬೆನ್ನಲ್ಲೇ ಬೆಂಗಳೂರು ನಗರ ಪೊಲೀಸ್ ವ್ಯವಸ್ಥೆಯಲ್ಲಿ ಪುನರ್‌ಸಂಘಟನೆ

**ಬೆಂಗಳೂರು, ಅ.6:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಿರುವ ಹಿನ್ನೆಲೆಯಲ್ಲಿ, ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ, ಅಪರಾಧ ನಿಯಂತ್ರಣ, ಸಂಚಾರ ನಿರ್ವಹಣೆ ಹಾಗೂ ಸಾರ್ವಜನಿಕ ಸುರಕ್ಷತೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು ಬೆಂಗಳೂರು ನಗರ ಪೊಲೀಸ್ ಆಯುಕ್ತಾಲಯವನ್ನು ಸಮಗ್ರವಾಗಿ ಪುನರ್‌ಸಂಘಟಿಸಲು ಇಂದು ಸಿಎಂ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ.

ಈ ಕುರಿತು ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಐದು ಪ್ರತ್ಯೇಕ ಕಮಿಷನರೇಟ್‌ಗಳ ರಚನೆ ಆಗಲಿದೆ. ಸದ್ಯ ಚಾಲ್ತಿಯಲ್ಲಿರುವ ಬೆಂಗಳೂರು ನಗರ ಪೊಲೀಸ್ ಆಯುಕ್ತಾಲಯವನ್ನು ಮುಖ್ಯ



ಪೊಲೀಸ್ ಆಯುಕ್ತರ ಒಟ್ಟಾರೆ ಮೇಲ್ವಿಚಾರಣೆಯಲ್ಲಿ ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ಮತ್ತು ಕೇಂದ್ರ ಎಂಬ ಐದು ಪ್ರತ್ಯೇಕ ಪೊಲೀಸ್ ಆಯುಕ್ತಾಲಯಗಳಾಗಿ ವಿಭಜಿಸಿ ಪುನರ್ ರಚಿಸಲಾಗುವುದು ಎಂದು ಹೇಳಿದರು.

ಪ್ರಸ್ತುತ ಪೊಲೀಸ್ ಆಯುಕ್ತರ ಹುದ್ದೆಯನ್ನು 'ಮುಖ್ಯ ಪೊಲೀಸ್ ಆಯುಕ್ತರು' ಎಂದು ಉನ್ನತೀಕರಿಸಲಾಗುವುದು. ಜಂಟಿ ಅಥವಾ ಅಪರ ಪೊಲೀಸ್ ಆಯುಕ್ತರು (ಸಂಚಾರ) ಹುದ್ದೆಯನ್ನು 'ಪೊಲೀಸ್ ಆಯುಕ್ತರು (ಸಂಚಾರ)' ಎಂದು ಮರುಪದ ನಾಮೀಕರಿಸಲಾಗುವುದು. ಈ ಯೋಜನೆಗೆ ಅಗತ್ಯವಿರುವಂತೆ ಒಟ್ಟು 1,022 ಹೊಸ ಹುದ್ದೆಗಳನ್ನು ಸೃಜಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಸಚಿವ ಸಂಪುಟ ಅನುಮೋದಿಸಿದೆ ಎಂದರು.

ಪ್ರಸ್ತಾವಿತ ಘಟಕಗಳಲ್ಲಿ ಅಪರಾಧ ಪ್ರಕರಣಗಳ ನಿರ್ವಹಣೆ, ಸಂಚಾರ ದಟ್ಟಣೆ ನಿಯಂತ್ರಣ ಹಾಗೂ ಸಾರ್ವಜನಿಕ ಭದ್ರತೆಗಾಗಿ ಒಟ್ಟು 6,550 ಹುದ್ದೆಗಳ ಅಗತ್ಯವಿದ್ದು, ಹೊಸ ಹುದ್ದೆಗಳ ಜೊತೆಗೆ ಪ್ರಸ್ತುತ ಚಾಲ್ತಿಯಲ್ಲಿರುವ ಹುದ್ದೆಗಳನ್ನು ಮರುನಿಯೋಜಿಸಿ ವ್ಯವಸ್ಥೆಯನ್ನು ಬಲಪಡಿಸಲಾಗುವುದು ಎಂದು ತಿಳಿಸಿದರು.

ಪ್ರತಿಯೊಂದು ಎಸಿಪಿ ಕಚೇರಿಗೆ ತಲಾ 5 ಕಾರ್ಯಕಾರಿ ಹುದ್ದೆಗಳನ್ನು ಹೊಸದಾಗಿ ನೀಡಲಾಗುವುದು. ಆಡಳಿತಾತ್ಮಕ ವೆಚ್ಚವನ್ನು ಸರಳೀಕರಿಸಲು, ಪ್ರಸ್ತುತವಿರುವ ಸಿಎಆರ್ ಘಟಕಗಳಿಂದಲೇ ಹುದ್ದೆಗಳನ್ನು ಮರುನಿಯೋಜಿಸಿ, ಪೂರ್ವ ವಿಭಾಗಕ್ಕಾಗಿ ಹೊಸ ಸಿಎಆರ್ ಘಟಕವನ್ನು ರಚಿಸಲಾಗುವುದು ಎಂದರು.

# ಬರ ಹಿನ್ನೆಲೆ: ಮೋಜಣಿ ಸೇವೆಗಳ ಪರಿಷ್ಕೃತ ಶುಲ್ಕಕ್ಕೆ ತಡೆ–ಡಿಸಿಎಂ ಪರಮೇಶ್ವರ್

**ಬೆಂಗಳೂರು, ಅ.6:** ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ರೈತರ ಹಿತಾಸಕ್ತಿಯನ್ನು ಪರಿಗಣಿಸಿ ಭೂ ದಾಖಲೆಗಳ ಇಲಾಖೆಯ ಮೋಜಣಿ ವ್ಯವಸ್ಥೆಯಡಿ ಸಾರ್ವಜನಿಕರಿಂದ ಸ್ವೀಕರಿಸಲಾಗುವ ವಿವಿಧ ಅಳತೆ ಅರ್ಜಿಗಳ ಪರಿಷ್ಕೃತ ಶುಲ್ಕವನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಡಿಸಿಎಂ ಡಾ. ಜಿ. ಪರಮೇಶ್ವರ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಸೆ. 19ರ ಸರ್ಕಾರದ ಆದೇಶದ ಅನ್ವಯ ಮೋಜಣಿ ವ್ಯವಸ್ಥೆಯಡಿ ಸ್ವೀಕರಿಸಲಾಗುವ ವಿವಿಧ ರೀತಿಯ ಭೂ ಅಳತೆ ಅರ್ಜಿಗಳ ಶುಲ್ಕ ಹಾಗೂ ಪರವಾನಗಿ ಪಡೆದ ಭೂಮಾಪಕರ ಸೇವಾ ಶುಲ್ಕವನ್ನು ಪರಿಷ್ಕರಿಸಿ ಅಕ್ಟೋಬರ್ ಒಂದರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿತ್ತು. ಆದರೆ, ಪ್ರಸ್ತುತ ರಾಜ್ಯದ ವಿವಿಧ ಭಾಗಗಳಲ್ಲಿ ತೀವ್ರ ಬರ ಪರಿಸ್ಥಿತಿ ಇರುವುದರಿಂದ ರೈತರು ಈಗಾಗಲೇ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ.



ಈ ಸಂದರ್ಭದಲ್ಲಿ ಭೂಮಾಪನ ವ ುತ್ತು ಕಂದಾಯ ಸೇವೆಗಳ ಶುಲ್ಕ ಹೆಚ್ಚಳದಿಂದ ರೈತರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಬಾರದು ಎಂಬ ಉದ್ದೇಶದಿಂದ ಪರಿಷ್ಕೃತ ಶುಲ್ಕವನ್ನು ತಾತ್ಕಾಲಿಕವಾಗಿ ತಡೆ ಹಿಡಿಯುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಮುಂದಿನ ಆದೇಶ ಹೊರಡಿಸುವವರೆಗೆ ಮೋಜಣಿ ಸೇವೆಗಳಿಗೆ ಸಂಬಂಧಿಸಿದಂತೆ ಅ.1ಕ್ಕೂ ಮೊದಲು ಚಾಲ್ತಿಯಲ್ಲಿದ್ದ ಶುಲ್ಕವೇ ಅನ್ವಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ರೈತರ ಹಿತಾಸಕ್ತಿ ಮತ್ತು ಸಾರ್ವಜನಿಕ ಅನುಕೂಲವನ್ನು ಗಮನದಲ್ಲಿಟ್ಟುಕೊಂಡೇ ಕಂದಾಯ ಇಲಾಖೆಯ ಎಲ್ಲಾ ನಿರ್ಧಾರಗಳನ್ನು ಕೈಗೊಳ್ಳಲಾಗುವುದು ಎಂದು ಡಿಸಿಎಂ ಹೇಳಿದ್ದಾರೆ.




ಏಷ್ಯನ್ ಕ್ರೀಡಾಕೂಟದಲ್ಲಿ ಮಹಿಳೆಯರ 400 ಮೀಟರ್ ರಿಲೇಯಲ್ಲಿ ಚಿನ್ನದ ಪದಕ ಹಾಗೂ ಮಿಶ್ರ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದಿರುವ ಕುಮಾರಿ ಪೂವಮ್ಮ ಅವರು, ವಿಧಾನಸೌಧದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರನ್ನು ಭೇಟಿಯಾಗಿದ್ದರು.

## ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ವಶಕ್ಕೆ ಪಡೆದ ಇ.ಡಿ.



**ಬೆಂಗಳೂರು, ಅ.6:** ಕರ್ನಾಟಕ ಲೋಕಸೇವಾ ಆಯೋಗದ ಪಶು ವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮಂಗಳವಾರ ಅಧಿಕೃತವಾಗಿ ವಶಕ್ಕೆ ಪಡೆದಿದ್ದಾರೆ.ಅಧಿಕಾರಿಗಳು ಕೇಳಿದ ಪ್ರಶ್ನೆಗಳಿಗೆ ಸೂಕ್ತ ಸಮಜಾಯಿಷಿ ನೀಡಲು ವಿಫಲರಾದ ಹಿನ್ನೆಲೆಯಲ್ಲಿ, ಹೆಚ್ಚಿನ ವಿಚಾರಣೆ ಹಾಗೂ ತನಿಖೆಯ ದೃಷ್ಟಿಯಿಂದ ಶಿವಶಂಕರಪ್ಪ ಸಾಹುಕಾರ್ ಅವರನ್ನು ಇಡಿ ಅಧಿಕಾರಿಗಳು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ಅವರನ್ನು ಬೆಂಗಳೂರಿನ ಶಾಂತಿನಗರದಲ್ಲಿರುವ ಇ.ಡಿ ವಲಯ ಕಚೇರಿಗೆ ಕರೆದೊಯ್ದು ತೀವ್ರ ವಿಚಾರಣೆ ಮುಂದುವರಿಸಲಾಗಿದ್ದು, ನ್ಯಾಯಾಲಯದ ಮುಂದೆ ಹಾಜರುಪಡಿಸುವ ಸಾಧ್ಯತೆಯಿದೆ.

## ಬಿಯರ್ ಮಾರಾಟ ಶೇ.41.32ರಷ್ಟು ಏರಿಕೆ, 3,337.88 ಕೋಟಿ ರೂ. ರಾಜಸ್ವ ಸಂಗ್ರಹ

# ಕಳೆದ 6 ತಿಂಗಳಲ್ಲಿ ಅಬಕಾರಿ ಆದಾಯದಲ್ಲಿ ಗಣನೀಯ ಹೆಚ್ಚಳ

**ಬೆಂಗಳೂರು, ಅ.6:** ಆಲ್ಕೋಹಾಲ್ ಆಧರಿತ ತೆರಿಗೆ (ಎಐಬಿ) ಪದ್ಧತಿಯಿಂದಾಗಿ ರಾಜ್ಯದಲ್ಲಿ ಅಬಕಾರಿ ರಾಜಸ್ವ ಸಂಗ್ರಹದಲ್ಲಿ ಕಳೆದ ಆರು ತಿಂಗಳಿನಲ್ಲಿ ಗಣನೀಯವಾಗಿ ಹೆಚ್ಚಳವಾಗಿದೆ. ಬಿಯರ್ ಮಾರಾಟ ಅಧಿಕವಾಗಿರುವುದು ಇದಕ್ಕೆ ಪ್ರಮುಖ ಕಾರಣವಾಗಿದೆ.2026–27ರ ಹಣಕಾಸು ವರ್ಷದ ಮೊದಲ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ರಾಜ್ಯಾದ್ಯಂತ ರೂ.22,191.63 ಕೋಟಿ ಅಬಕಾರಿ ರಾಜಸ್ವ ಸಂಗ್ರಹವಾಗಿದೆ.

ಕಳೆದ ವರ್ಷದ ಇದೇ ಅವಧಿಯಲ್ಲಿ 19,570.23 ಕೋಟಿ ಸಂಗ್ರಹವಾಗಿದ್ದು ಪ್ರಸಕ್ತ 2,621.40 ಕೋಟಿ ಹೆಚ್ಚಳವಾಗಿದೆ (ಶೇ.13.39). ಇದೇ ಅವಧಿಯಲ್ಲಿ ಬಿಯರ್ ಮಾರಾಟದಲ್ಲಿ ಶೇ.41.32 ರಷ್ಟು ಬೃಹತ್ ಏರಿಕೆ ಕಂಡುಬಂದಿದೆ. 2025 ರಲ್ಲಿ 195.27 ಲಕ್ಷ ಬಾಕ್ಸ್ ಇದ್ದ ಬಿಯರ್ ಬೀರ್ ಮಾರಾಟವು, 2026ರಲ್ಲಿ 275.96 ಲಕ್ಷ ಬಾಕ್ಸ್‌ಗೆ ಹೆಚ್ಚಳವಾಗಿದೆ. ಬಿಯರ್ ಒಂದರ ಮಾರಾಟದಿಂದಲೇ ಸರ್ಕಾರಕ್ಕೆ 3,337.88 ಕೋಟಿ ರಾಜಸ್ವ ಸಂಗ್ರಹ ವಾಗಿದೆ.

ಭಾರತೀಯ ಮದ್ಯದ ಮಾರಾಟ ಪ್ರಮಾಣದಲ್ಲಿ ಶೇ.1.14 ರಷ್ಟು ಮಾತ್ರ ಏರಿಕೆ ಕಂಡುಬಂದಿದೆ. ಲೈಸೆನ್ಸ್ ಶುಲ್ಕ, ದಂಡ ಇತ್ಯಾದಿ ಮೂಲಗಳಿಂದ ಅರ್ಧವಾರ್ಷಿಕ ಅವಧಿಯಲ್ಲಿ 1,389.18 ಕೋಟಿ ರಾಜಸ್ವ ಸಂಗ್ರಹವಾಗಿದೆ. ಮದ್ಯದಲ್ಲಿರುವ ಆಲ್ಕೋಹಾಲ್ ಆಧರಿಸಿ ತೆರಿಗೆ ಹಾಕುವ ಹೊಸ ಪದ್ಧತಿಯನ್ನು ದೇಶದಲ್ಲೇ ಮೊದಲ ಬಾರಿಗೆ ರಾಜ್ಯದಲ್ಲಿ ಮೇ 11 ರಿಂದ ಜಾರಿಗೆ ತರಲಾಗಿತ್ತು. ಐಎಂಎಲ್‌ನಿಂದ ಬಂದ ರಾಜಸ್ವ ಒಟ್ಟು 17,428.57 ಕೋಟಿ ಆದಾಯ ಬಂದಿದ್ದು, ಕಳೆದ ವರ್ಷಕ್ಕಿಂತ 2,048.35 ಕೋಟಿ ಹೆಚ್ಚುವರಿ ರಾಜಸ್ವ ಸಂಗ್ರಹವಾಗಿದೆ.



ಮಳೆಗಾಲದ ನಡುವೆಯೂ ಬಿಯರ್ ಮಾರಾಟ ಭಾರಿ ಪ್ರಮಾಣದಲ್ಲಿ ಹೆಚ್ಚಾಗಲು ಪ್ರಮುಖವಾಗಿ ಎರಡು ಕಾರಣಗಳಿವೆ. ರಾಜ್ಯ ಸರ್ಕಾರವು ಮದ್ಯದಲ್ಲಿರುವ ಆಲ್ಕೋಹಾಲ್ ಪ್ರಮಾಣಕ್ಕೆ ಅನುಗುಣವಾಗಿ ದರ ನಿಗದಿಪಡಿಸುವ ನೀತಿಯನ್ನು ಜಾರಿಗೆ ತಂದಿತ್ತು. ಅಬಕಾರಿ ಇಲಾಖೆಯ ಅಂದಾಜಿಗಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಆದಾಯ ಸಂಗ್ರಹವಾಗಿದ್ದು, ರಾಜ್ಯದ ಆರ್ಥಿಕತೆಗೆ ಈ ಮದ್ಯ ಮಾರಾಟವು ದೊಡ್ಡ ಪ್ರಮಾಣದ ಬೆಂಬಲ ನೀಡಿದೆ.

# ಬೀಡಾಡಿ ದನಗಳ ಬೇಟೆಗೆ ಪೂರ್ವ ಪಾಲಿಕೆಯಿಂದ ಹೈಡ್ರಾಲಿಕ್ ವಾಹನ ಕಾರ್ಯಾಚರಣೆಗೆ ಚಾಲನೆ

**ಬೆಂಗಳೂರು, ಅ.6:** ರಸ್ತೆಗಳಲ್ಲಿ ಬೀಡಾಡಿ ಜಾನುವಾರುಗಳಿಂದ ಸಾರ್ವಜನಿಕರಿಗೆ ಎದುರಾಗುತ್ತಿರುವ ತೊಂದರೆ ಹಾಗೂ ಅಪಘಾತದ ಅಪಾಯಕ್ಕೆ ಕಡಿವಾಣ ಹಾಕಲು ಬೆಂಗಳೂರು ಪೂರ್ವ ನಗರ ಪಾಲಿಕೆ ಹೈಡ್ರಾಲಿಕ್ ದನ ಹಿಡಿಯುವ ವಾಹನದ ಮೂಲಕ ವಿಶೇಷ ಕಾರ್ಯಾಚರಣೆಗೆ ಚಾಲನೆ ನೀಡಿದೆ.

ಪಾಲಿಕೆ ವ್ಯಾಪ್ತಿಯ ಪ್ರಮುಖ ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ದನ, ಹಸು, ಕರು, ಎಮ್ಮೆ, ಎತ್ತು, ಹೋರಿ ಸೇರಿದಂತೆ ಜಾನುವಾರುಗಳು ಅಡ್ಡಾದಿಡ್ಡಿಯಾಗಿ ಸಂಚರಿಸುವುದು, ರಸ್ತೆಯಲ್ಲೇ ಮಲಗುವುದು ಹಾಗೂ ಏಕಾಏಕಿ ವಾಹನಗಳ ಮುಂದೆ ಬರುವುದರಿಂದ ವಾಹನ ಸವಾರರು ಮತ್ತು ಪಾದಚಾರಿಗಳಿಗೆ ತೊಂದರೆಯಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಆದ್ಯತೆ ನೀಡಿ ಕಾರ್ಯಾಚರಣೆ ಆರಂಭಿಸಲಾಗಿದೆ ಎಂದು ಅಪರ ಆಯುಕ್ತರು (ಅಭಿವೃದ್ಧಿ) ಲೋಖಂಡೆ ಸ್ನೇಹಲ್ ಸುಧಾಕರ್ ತಿಳಿಸಿದ್ದಾರೆ.

ಸಾರ್ವಜನಿಕ ರಸ್ತೆಗಳಲ್ಲಿ ಬಿಡಾಡಿಯಾಗಿ ಓಡಾಡುವ ಜಾನುವಾರುಗಳನ್ನು ಪಾಲಿಕೆ ಸಿಬ್ಬಂದಿ ಹೈಡ್ರಾಲಿಕ್ ವಾಹನದ ನೆರವಿನಿಂದ ಸುರಕ್ಷಿತವಾಗಿ ವಶಕ್ಕೆ ಪಡೆದು ಆಶ್ರಯ ಕೇಂದ್ರಕ್ಕೆ ಸ್ಥಳಾಂತರಿಸಲಿದ್ದಾರೆ. ಪೂರ್ವ ಪಾಲಿಕೆ ವ್ಯಾಪ್ತಿಯಲ್ಲಿ ದನದ ದೊಡ್ಡಿ ನಿರ್ಮಾಣವಾಗುವವರೆಗೆ ವಶಪಡಿಸಿಕೊಂಡ



ಜಾನುವಾರುಗಳನ್ನು ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಕೆ.ಆರ್. ಮಾರ್ಕೆಟ್‌ನ ನಗರ ದನದ ದೊಡ್ಡಿಗೆ ಕಳುಹಿಸಲಾಗುತ್ತದೆ.

ಮಾಲೀಕರಿರುವ ಜಾನುವಾರುಗಳಿಗೆ ನಿಯಮಾನುಸಾರ ದಂಡ ವಿಧಿಸಿ, ದಂಡ ಪಾವತಿಸಿದ ಬಳಿಕ ಮಾಲೀಕರಿಗೆ ಹಸ್ತಾಂತರಿಸಲಾಗುವುದು. ಪದೇಪದೇ ಜಾನುವಾರುಗಳನ್ನು ರಸ್ತೆಗಳಿಗೆ ಬಿಡುವ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಪಾಲಿಕೆ ಎಚ್ಚರಿಕೆ ಕೊಟ್ಟಿದೆ.

### ದಂಡ ವಸೂಲಿ

ಮಾಲೀಕರಿಲ್ಲದ ಜಾನುವಾರುಗಳನ್ನು ನಿಯಮಾನುಸಾರ ಗೋಶಾಲೆಗಳಿಗೆ ಹಸ್ತಾಂತರಿಸಲಾಗುತ್ತದೆ. ಕರ್ನಾಟಕ ಜಾನುವಾರು ಅತಿಕ್ರಮಣ ಅಧಿನಿಯಮದಂತೆ ದಂಡ ವಸೂಲಿ ಮಾಡಲಾಗುತ್ತದೆ. ದನ, ಹಸು, ಎತ್ತು, ಎಮ್ಮೆ: ಮೊದಲ ಮೂರು ದಿನಗಳಿಗೆ ಪ್ರತಿ ಜಾನುವಾರಿಗೆ 600; ಬಳಿಕ ದಿನಕ್ಕೆ 300.ಕರು: ಮೊದಲ ಮೂರು ದಿನಗಳಿಗೆ 300; ಬಳಿಕ ದಿನಕ್ಕೆ 200.ಕುದುರೆ, ಹೇಸರಗತ್ತೆ ಮತ್ತಿತರ ವರ್ಗ: ಮೊದಲ ಮೂರು ದಿನಗಳಿಗೆ 100; ಬಳಿಕ ದಿನಕ್ಕೆ 50.ಕತ್ತೆ, ಹಂದಿ: ಮೊದಲ ಮೂರು ದಿನಗಳಿಗೆ 50; ಬಳಿಕ ದಿನಕ್ಕೆ 25.ಕುರಿ, ಮೇಕೆ ಹಾಗೂ ಮರಿಗಳು: ಮೊದಲ ಮೂರು ದಿನಗಳಿಗೆ ಪ್ರತಿ ಜಾನುವಾರಿಗೆ 25 ದಂಡ ವಿಧಿಸಲಾಗುತ್ತದೆ. ಸೋಮವಾರದಿಂದ ಶನಿವಾರದವರೆಗೆ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ಕಾರ್ಯಾಚರಣೆ ನಡೆಯಲಿದೆ. ಸರ್ಕಾರಿ ರಜಾದಿನಗಳಲ್ಲಿ ಕಾರ್ಯಾಚರಣೆ ಇರುವುದಿಲ್ಲ ಎಂದು ಅಧಿಕಾರಿಗಳು ತಿಳಿಸಿದರು.

### 1533ಕ್ಕೆ ದೂರು ನೀಡಿ

ರಸ್ತೆ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬಿಡಾಡಿ ಜಾನುವಾರುಗಳು ಕಂಡುಬಂದಲ್ಲಿ ಸಾರ್ವಜನಿಕರು ಸಹಾಯ ಆಪ್, ನಾಗರಿಕ ಸಹಾಯವಾಣಿ 1533 ಅಥವಾ ಪಾಲಿಕೆ ನಿಯಂತ್ರಣ ಕೊಠಡಿ 9480685706ಕ್ಕೆ ಮಾಹಿತಿ ನೀಡಬಹುದು. ದೂರು ನೀಡುವಾಗ ಜಾನುವಾರು ಇರುವ ನಿಖರ ಸ್ಥಳ ಹಾಗೂ ಸಾಧ್ಯವಾದರೆ ಛಾಯಾಚಿತ್ರ ನೀಡಿದರೆ, ಸಿಬ್ಬಂದಿ ತ್ವರಿತವಾಗಿ ಸ್ಥಳಕ್ಕೆ ತೆರಳಿ ಕಾರ್ಯಾಚರಣೆ ನಡೆಸಲು ಅನುಕೂಲವಾಗಲಿದೆ ಎಂದು ಲೋಖಂಡೆ ಸ್ನೇಹಲ್ ಸುಧಾಕರ್ ಮನವಿ ಮಾಡಿದ್ದಾರೆ.



ಕಲಬುರಗಿ ಸಮೀಪದ ತೊಗರಿ ಹೊಲದಲ್ಲಿ ಮಂಗಳವಾರ ಎರಡು ಆಸನಗಳ ತರಬೇತಿ ವಿಮಾನವೊಂದು ತುರ್ತು ಭೂಸ್ಪರ್ಶ ಮಾಡಿದ್ದು, ಪೈಲಟ್ ಹಾಗೂ ಸಹಪೈಲಟ್ (ತರಬೇತಿದಾರ) ಇಬ್ಬರೂ ಯಾವುದೇ ಗಾಯಗಳಿಲ್ಲದೆ ಸುರಕ್ಷಿತವಾಗಿ ಪಾರಾಗಿದ್ದಾರೆ.

### ಯೋಜನೆ ಇನ್ನೂ ಹಾಸನವನ್ನೇ ದಾಟಿಲ್ಲ: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ

# ಚಿಕ್ಕಬಳ್ಳಾಪುರ, ಕೋಲಾರಕ್ಕೆ ಎತ್ತಿನಹೊಳೆ ಹರಿಸಲು ಈ ಸರ್ಕಾರಕ್ಕೆ ಸಾಧ್ಯವಿಲ್ಲ

**ಬೆಂಗಳೂರು, ಅ.6:** ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಿಗೆ ಎತ್ತಿನಹೊಳೆ ನೀರು ಕೊಡುವುದು ಈ ಸರ್ಕಾರಕ್ಕೆ ಸಾಧ್ಯವಿಲ್ಲ. ಇಂದು, ನಾಳೆ ಎಂದು ಜನರಿಗೆ ಸುಳ್ಳು ಹೇಳುತ್ತಿದ್ದಾರೆ. ಈ ಜಿಲ್ಲೆಗಳ ಪಾಲಿಗೆ ಎತ್ತಿನಹೊಳೆ 'ನಾಳೆ ಬಾ' ಎನ್ನುವಂತಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಮಾಧ್ಯಮಗಳ ಜತೆ, ಯೋಜನೆಯ ಪೈಪ್‌ಲೈನ್ ಹಾಕುವುದನ್ನು ಯಾರು ಬೇಕಾದರೂ ಮಾಡಬಹುದು. ಆದರೆ ನೀರು ಕೊಡಬೇಕಲ್ಲ. ನೀರು ಕೊಡಿಸುವುದಕ್ಕೆ ವ್ಯವಸ್ಥೆ ಮಾಡದೆ ಕೇವಲ ಪೈಪ್‌ಲೈನ್ ಹಾಕಿದರೆ ಅದು ದುಡ್ಡು ಹೊಡೆಯುವ ಕೆಲಸವಷ್ಟೇ ಆಗುತ್ತದೆ. ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ತರುತ್ತೇವೆ ಎಂದು ಹೇಳಿ ಆ ಭಾಗದ ಜನತೆಗೆ ದ್ರೋಹ ಬಗೆಯಬೇಡಿ, ದುಡ್ಡು ಹೊಡೆಯುವ ಕಾರ್ಯಕ್ರಮ ಮಾಡಬೇಡಿ ಎಂದರು.

ಈ ಜಿಲ್ಲೆಗಳ ಜನರು ನೀರಿಲ್ಲದಿದ್ದರೂ ತಮ್ಮ ಕಾಯಕದಿಂದ ರಾಜ್ಯದ ಆರ್ಥಿಕತೆಗೆ ಶಕ್ತಿ ತುಂಬಿದ್ದಾರೆ. ನಾನು 2013–14ರಲ್ಲಿ ಆದಿಚುಂಚನಗಿರಿ ಮಹಾಸ್ವಾಮೀಜಿಯವರ ಉಪಸ್ಥಿತಿಯಲ್ಲಿ ಚಿಕ್ಕಬಳ್ಳಾಪುರದಲ್ಲಿ ಈ ಯೋಜನೆಗೆ ಭೂಮಿಪೂಜೆ ನೆರವೇರಿಸಿದ ದಿನವೇ ನಾನು ಕೋಲಾರದಲ್ಲಿ ಇದ್ದೆ. ಆವತ್ತೇ ನಾನು ಹೇಳಿದ್ದೆ. ಇವರಿಂದ ನೀರು ಕೊಡಲು ಆಗುವುದಿಲ್ಲ ಎಂದು. ಶಂಕುಸ್ಥಾಪನೆ ಮಾಡಿದ್ದ ಅಂದಿನ ಮುಖ್ಯಮಂತ್ರಿ ಒಂದೆರಡು ವರ್ಷಗಳಲ್ಲಿ



ಕೋಲಾರದ ಕೊನೆ ಅಂಚಿನವರೆಗೂ ನೀರು ಕೊಡುತ್ತೇವೆ ಎಂದು ಭರವಸೆ ನೀಡಿದ್ದನ್ನು ಎಚ್‌ಡಿಕೆ ಕಾಂಗ್ರೆಸ್ ಸರಕಾರಕ್ಕೆ ನೆನಪಿಸಿದರು.

**ನಿಖರ ತೀರ್ಮಾನವಿಲ್ಲ**

ಸಿದ್ದರಾಮಯ್ಯ ಅವರು 1–2 ವರ್ಷದಲ್ಲಿ ನೀರು ಹರಿಸುತ್ತೇವೆ ಎಂದಿದ್ದರು. ಅದು ಸಾಧ್ಯವಾಗುವುದಿಲ್ಲ ಎಂದು ಹೇಳಿದ್ದ ನನ್ನ ಮಾತನ್ನು ಅಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲಘುವಾಗಿ ತಳ್ಳಿಹಾಕಿದ್ದರು. ಅವರು ಮಾತು ಕೊಟ್ಟು 12–13 ವರ್ಷ ಕಳೆದಿದೆ. ಆದರೆ ಯೋಜನೆ ಹಾಸನ ದಾಟಿ ಮುಂದೆ ಬರಲಿಲ್ಲ. ಜಲಾಶಯ ಎಲ್ಲಿ ನಿರ್ಮಾಣ ಮಾಡ್ತಿದ್ದಾರೆ. ದೇವರಾಯನದುರ್ಗದ ಬಳಿ 10 ಟಿಎಂಸಿ ನೀರು ಸಂಗ್ರಹಕ್ಕೆ ಜಲಾಶಯ ಕಟ್ಟುತ್ತೇವೆ ಎಂದರು. ಆಮೇಲೆ ಅದು 5 ಟಿಎಂಸಿ ಮಟ್ಟಕ್ಕೆ ಬಂತು. ಈಗ 2 ಟಿಎಂಸಿಗೆ ಬಂದಿದೆ. ಇವತ್ತಿನವರೆಗೂ ಈ ಕುರಿತು ನಿಖರ ತೀರ್ಮಾನ ಮಾಡಿಲ್ಲ. ಕಳೆದ ಮೂರು ವರ್ಷಗಳಿಂದ ಮುಂದಿನ ಜೂನ್‌ಗೆ ನೀರು ಹರಿಸುತ್ತೇವೆ ಎನ್ನುತ್ತಿದ್ದಾರೆ ಎಂದು ಕುಮಾರಸ್ವಾಮಿ ಕಿಡಿಕಾರಿದರು.

ಪ್ರಧಾನಿ ನರೇಂದ್ರ ಮೋದಿ ಅವರಿಗಿಂತ ನಾನೇನು ಕಡಿಮೆ ಇಲ್ಲ ಎನ್ನುವ ರೀತಿಯಲ್ಲಿ ಈ ಮುಖ್ಯಮಂತ್ರಿ ಬಿಂಬಿಸಿಕೊಳ್ಳುತ್ತಿದ್ದಾರೆ. ಆದರೆ ರಾಜ್ಯದ ವಾಸ್ತವ ಸ್ಥಿತಿಯೇ ಬೇರೆ ಇದೆ. ಮುಖ್ಯಮಂತ್ರಿ ವಿಷನ್ 2037, ವಿಷನ್ 2047 ಎಂದೆಲ್ಲ ಹೇಳುತ್ತಿದ್ದಾರೆ. ಅದಕ್ಕೆಲ್ಲ ಹಣ ಎಲ್ಲಿಂದ ತರುತ್ತಾರೆ, ಈಗ ಬೇರೆ ಇಂಟಿಗ್ರೇಟೆಡ್ ಟೌನ್‌ಶಿಪ್ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಅವರ ಭೂಮಿಗೆ ಬೆಲೆ ತಂದುಕೊಳ್ಳುವುದು ಅದರ ಹಿಂದಿನ ಉದ್ದೇಶವಾಗಿದೆ. 2006ರಲ್ಲಿ ನಾನು 5 ಟೌನ್‌ಶಿಪ್ ಮಾಡಲು ಹೊರಟಾಗ ರೈತರ ಭೂಮಿ ಕಿತ್ತುಕೊಳ್ಳುತ್ತಿದ್ದಾರೆ ಎಂದು ನನ್ನ ಮೇಲೆ ಮುಗಿಬಿದ್ದಿದ್ದರು. ಇವತ್ತು ಈಗಾಗಲೇ 7,500 ಎಕರೆ ಭೂಮಿಯನ್ನು ನೋಟಿಫೈ ಮಾಡಿದ್ದಾರೆ ಎಂದು ಟೀಕಿಸಿದರು.

# ಹೊಸದಾಗಿ 26,000 ಜಾಬ್ ಕಾರ್ಡ್ ವಿತರಣೆ: ಈಶ್ವರ ಖಂಡ್ರೆ

**ಬೀದರ್, ಅ. 6:** ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಜುಲೈ 1ರಿಂದ ಬೀದರ್ ಜಿಲ್ಲೆಯಲ್ಲಿ 20 ಲಕ್ಷ ಮಾನವ ದಿನ ಸೃಜಿಸಲಾಗಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.150ರಷ್ಟು ಹೆಚ್ಚಳವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷ ಇದೇ ಅವಧಿಯಲ್ಲಿ ಮನ್ರೇಗಾ ಅಡಿಯಲ್ಲಿ 7 ಲಕ್ಷ ಮಾನವ ದಿನ ಸೃಷ್ಟಿ ಮಾಡಲಾಗಿತ್ತು. ಆದರೆ ಈ ವರ್ಷ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ 13 ಲಕ್ಷ ಮಾನವ ದಿನ ಹೆಚ್ಚಳವಾಗಿದೆ ಎಂದರು.

ಮಳೆ ಕೊರತೆಯಿಂದ ಬರಪರಿಸ್ಥಿತಿ ತಲೆದೋರಿದ್ದು, ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ಹೋಗುತ್ತಿದ್ದ ಗ್ರಾಮೀಣ ಬಡಜನರು, ಮಹಿಳೆಯರು, ದುರ್ಬಲರು, ವಂಚಿತರು, ಭೂರಹಿತ ಕೂಲಿ ಕಾರ್ಮಿಕರಿಗೆ ಇರುವ ಸ್ಥಳದಲ್ಲಿಯೇ ಉದ್ಯೋಗ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಈವರೆಗೆ ರಾಜ್ಯದಲ್ಲಿ 1.75 ಕೋಟಿ ಮಾನವ ದಿನ ಸೃಜನೆ ಮಾಡಲಾಗಿದೆ. ಸಂಕಷ್ಟದ ಪರಿಸ್ಥಿತಿಯಲ್ಲಿ ಗುಳೆ ಹೋಗದಂತೆ ತಡೆಯಲು ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ನೆರವಾಗಿದೆ. ಕೇಂದ್ರ ಸರ್ಕಾರ ನರೇಗಾದ 90: 10 ಅನುಪಾತವನ್ನು ಬದಲಾಯಿಸಿ 60: 40 ಅನುಪಾತ ಮಾಡಿದ್ದು, ಸರ್ಕಾರಕ್ಕೆ ಹೆಚ್ಚಿನ ಹೊರೆ ಆಗುತ್ತಿದ್ದಾಗ್ಯೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಗ್ರಾಮೀಣ



ಉದ್ಯೋಗ ಖಾತ್ರಿ ಯೋಜನೆಯನ್ನು ಯಶಸ್ವಿಯಾಗಿ ಜಾರಿ ಮಾಡಲಾಗಿದೆ.

ಈ ಯೋಜನೆಯಡಿ ಒಂದು ಕುಟುಂಬಕ್ಕೆ ಒಂದು ವರ್ಷದಲ್ಲಿ 125 ದಿನ ಉದ್ಯೋಗ ನೀಡಲು ಅವಕಾಶವಿದ್ದು, ಹೆಣ್ಣು, ಗಂಡು ಎಂಬ ತಾರತಮ್ಯವಿಲ್ಲದೆ 382 ರೂ. ಕೂಲಿ ನೀಡಲಾಗುತ್ತಿದೆ. ಹೀಗಾಗಿ ಪ್ರತಿ ಗ್ರಾಮೀಣ ಕುಟುಂಬಗಳು ವಾರ್ಷಿಕ 47750 ರೂ. ಗಳಿಸಬಹುದಾಗಿದೆ ಎಂದು ವಿವರಿಸಿದರು.

ಅಂತರ್ಜಲ ಮಟ್ಟ ದೇಶಾದ್ಯಂತ ದಿನದಿಂದ ದಿನಕ್ಕೆ ಕ್ಷೀಣಿಸುತ್ತಿದ್ದು, ಅಂತರ್ಜಲ ಮಟ್ಟ ಹೆಚ್ಚಿಸಲು ವೈಯಕ್ತಿಕ ಕೊಳವೆ ಬಾವಿಗಳಿಗೂ ಮರುಪೂರಣ (ರೀಚಾರ್ಜ್ ಪಿಟ್) ಮಾಡಿಸಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಇದರ ಜೊತೆಗೆ ದನದ ಕೊಟ್ಟಿಗೆ, ಕುರಿ, ಮೇಕೆ ಕೊಟ್ಟಿಗೆ, ಚೆಕ್ ಡ್ಯಾಂ, ಶಾಲಾ ಕೊಠಡಿ, ಅಂಗನವಾಡಿ ನಿರ್ಮಾಣಕ್ಕೂ ಅವಕಾಶವಿದೆ. ಇದರಿಂದ ಗ್ರಾಮೀಣ ಪ್ರದೇಶದಲ್ಲಿ ಗುಣಮಟ್ಟದ ಆಸ್ತಿ ಸೃಜನೆ ಮಾಡಬಹುದು.

ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು. 382ರೂ. ಹಣ ಪಡೆದು, ಶ್ರಮದಾನ ಮಾಡಿದರೆ ಗ್ರಾಮೀಣ ವಿಕಾಸ ಆಗುತ್ತದೆ ಎಂದರು.

**ಹೊಸದಾಗಿ ಜಾಬ್ ಕಾರ್ಡ್ ವಿತರಣೆ:** ಹಲವರ ಜಾಬ್ ಕಾರ್ಡ್ ನಿಷ್ಕ್ರಿಯವಾಗಿತ್ತು. ಹೀಗಾಗಿ ಅರ್ಹ ಫಲಾನುಭವಿಗಳಿಗೆ ಬರ ಪರಿಸ್ಥಿತಿಯ ಕಾಲದಲ್ಲಿ ಉದ್ಯೋಗ ಒದಗಿಸಲು ಜಾಬ್ ಕಾರ್ಡ್ ಮೇಳ ನಡೆಸಲು ಸೂಚಿಸಿದ ಪರಿಣಾಮ ಬೀದರ್ ಜಿಲ್ಲೆಯೊಂದರಲ್ಲೇ 26 ಸಾವಿರ ಕುಟುಂಬಗಳು ಹೊಸದಾಗಿ ಜಾಬ್ ಕಾರ್ಡ್ ಮಾಡಿಸಿಕೊಂಡಿವೆ ಎಂದು ತಿಳಿಸಿದರು.ಬರ ಪರಿಸ್ಥಿತಿ ಎದುರಿಸಲು ಸರ್ಕಾರ ಎಲ್ಲ ಅಗತ್ಯ ಕ್ರಮ ಕೈಗೊಂಡಿದೆ. ಬೀದರ್ ಜಿಲ್ಲೆಗೆ ಕುಡಿಯುವ ನೀರಿಗಾಗಿ 10 ಕೋಟಿ ರೂ. ಮಂಜೂರು ಮಾಡಲಾಗಿದೆ. ಬರುವ ಬೇಸಿಗೆಯಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಲು ಈಗಿನಿಂದಲೇ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದರು.

# ಹಾಸನದಲ್ಲಿ ಪೆಂಡಾಲ್ ಗಣಪತಿ ವಿಸರ್ಜನೆ: ಎಸ್‌ಪಿಗೆ ಡಿಸಿ ನೋಟಿಸ್ ವಿಚಾರಕ್ಕೆ ಶಾಸಕ ಎಚ್.ಡಿ.ರೇವಣ್ಣ ಲೇವಡಿ

**ಹಾಸನ, ಅ.6:** ಹಾಸನದ ಪೆಂಡಾಲ್ ಗಣಪತಿ ವಿಸರ್ಜನೆ ವಿಚಾರವಾಗಿ ಎಸ್‌ಪಿ ಶುಭನ್ವಿತಾಗೆ ಡಿಸಿ ಲತಾಕುಮಾರಿ ನೋಟಿಸ್ ನೀಡಿದ ವಿಚಾರಕ್ಕೆ ಸಂಬಂಧಿಸಿದಂತೆ ಶಾಸಕ ಎಚ್.ಡಿ.ರೇವಣ್ಣ ಲೇವಡಿ ಮಾಡಿದ್ದಾರೆ. ನನಗೆ ಯಾವುದೇ ನೋಟಿಸ್ ಬಂದಿಲ್ಲ, ಎಸ್ಪಿಗೇ ನೋಟಿಸ್ ಕೊಟ್ಟ ಮೇಲೆ ನನಗೂ ನೋಟಿಸ್ ಕೊಡಬಹುದು. ಎಸ್ಪಿಗೆ ಯಾಕೆ ನೋಟಿಸ್ ಕೊಟ್ಟಿದ್ದಾರೆಂದು ಗೊತ್ತಿಲ್ಲ ಎಂದಿದ್ದಾರೆ. 72 ವರ್ಷದಿಂದ ಗಣಪತಿ ಉತ್ಸವ ನಡೆಸಿಕೊಂಡು ಬಂದಿದ್ದಾರೆ. ದೇವಿಗೆರೆಯಲ್ಲಿ ಗಣಪತಿ ಬಿಡಲು ಅನುಮತಿ ಕೊಡಿಸಿ ಎಂದು ಕೇಳಿದರು. ನಾನು ತಹಶೀಲ್ದಾರ್‌ಗೆ ಕೇಳಿದಾಗ ಎಲ್ಲಾ ಡಿಸಿಯವರದ್ದು ಎಂದು ಹೇಳಿದರು. ಬೇರೆಯವರಿಗೆ



ಜಿಲ್ಲಾಧಿಕಾರಿ ಹೇಗೆ ಅನುಮತಿ ಕೊಟ್ಟರು, ಯಾವ ಕಾರಣದಿಂದ ಪೆಂಡಾಲ್ ಗಣಪತಿಗೆ ನಿಷೇಧ ಹೇರಿದರು, ಯಾವುದೇ ಘಟನೆ ಆದರು, ಏನೇ ಆದರೂ ಪೊಲೀಸರು ಬೇಕಿಲ್ಲ. ತಾನೇ ಕ್ರಮ ಕೈಗೊಳ್ತೀನಿ ಎಂದ ಮೇಲೆ ಪೂರ್ತಿ ಬೆಂಬಲ ಕೊಡೋಣ. ಹಾಸನ ಜಿಲ್ಲೆಯನ್ನು ಶಾಂತ ರೀತಿಯಿಂದ ನಡೆಸಿಕೊಂಡು ಹೋಗಲಿ. ನಾನೇ ಹ್ಯಾಂಡಲ್ ಮಾಡ್ತೀನಿ ಎಂದ ಮೇಲೆ ನಾವೇಕೆ ಹೇಳಬೇಕು ಎಂದು ರೇವಣ್ಣ ವ್ಯಂಗ್ಯವಾಡಿದ್ದಾರೆ.ಏನೇನು ನಡೆದಿದೆ ಎಲ್ಲದರ ಬಗ್ಗೆ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯುವಂತೆ ಇದೇ ವೇಳೆ ಶಾಸಕ ಸ್ವರೂಪ್‌ಪ್ರಕಾಶ್‌ಗೂ ತಿಳಿಸಿದ ಜಚ್.ಡಿ.ರೇವಣ್ಣ, ಅಂತಹ ಪರಿಸ್ಥಿತಿ ಬಂದರೆ ಕೋರ್ಟ್ ಮತ್ತು ಲೋಕಾಯುಕ್ತ ಇದೆ. ಇನ್ನೂ ಕೆಲ ವಿಚಾರ ಇದೆ, ಹೇಗೆ ರಿಪೇರಿ ಮಾಡಬೇಕೆಂದು ಗೊತ್ತಿದೆ ಎಂದಿದ್ದಾರೆ.

# ಕೇಂದ್ರ ತಂಡದಿಂದ ಬರ ಸಮೀಕ್ಷೆ ಅಳಲು ತೋಡಿಕೊಂಡ ರೈತರು

**ರಾಯಚೂರು, ಅ. 6:** ಪಾಟ್ನಾದ ಭತ್ತ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಮಾನಸಿಂಗ್ ಅವರ ನೇತೃತ್ವದ ಅಧಿಕಾರಿಗಳ ತಂಡದಿಂದ ಜಿಲ್ಲೆಯಲ್ಲಿ ಬರ ಸಮೀಕ್ಷೆ ನಡೆಸಲು ಆಗಮಿಸಿ, ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಮಳೆಯಿಂದ ನಷ್ಟವದ ಬೆಳೆ ವೀಕ್ಷಿಸಿದ್ದಲ್ಲದೇ ರೈತರೊಂದಿಗೆ ಚರ್ಚೆ ನಡೆಸಿತು.



ಕೇಂದ್ರ ಸರ್ಕಾರದ ವೆಚ್ಚ ಇಲಾಖೆಯ ಅಧೀನ ಕಾರ್ಯದರ್ಶಿ ಪಾರ್ಥ ಪಾಲ್ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯ ಅಧೀನ ಕಾರ್ಯದರ್ಶಿ ರಾಕೇಶ್‌ಕುಮಾರ್ ಅವರು ಜಿಲ್ಲೆಯಲ್ಲಿ ಆಗಿರುವ ಮಳೆಯ ಪ್ರಮಾಣ, ಬರದಿಂದ ಆಗಿರುವ ಬೆಳೆಹಾನಿ, ಕ್ರಾಫ್ ಕಟಿಂಗ್ ಕುರಿತು ಕೃಷಿ ಇಲಾಖೆ, ತೋಟಗಾರಿಕೆ ಹಾಗೂ ಪಶು ಇಲಾಖೆ ಸೇರಿದಂತೆ ಇತರೆ ಸಂಬಂಧಿಸಿದ ವಿವಿಧ ಇಲಾಖೆಯ ಅಧಿಕಾರಿಗಳಿಂದ ದೇವದುರ್ಗ ತಾಲ್ಲೂಕು ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಜಿಲ್ಲೆಯ ಬರದಿಂದಾದ ಹಾನಿಯ ಕುರಿತು ಸಮಗ್ರ ಮಾಹಿತಿಗಳನ್ನು ಪಡೆದು ಕೊಂಡರು.

ಸಭೆಯ ನಂತರ ದೇವದುರ್ಗ ತಾಲ್ಲೂಕಿನ ಮಸರಕಲ್ ಗ್ರಾಮದ ಹೊಲದಲ್ಲಿ ಅನಾವೃಷ್ಟಿಯಿಂದ ಹಾನಿಯಾದ ಹತ್ತಿ ಹಾಗೂ ಮೆಣಸಿನಕಾಯಿ ಬೆಳೆ ವೀಕ್ಷಣೆ ಮಾಡಿ ರೈತರಿಂದ ಮಾಹಿತಿ ಪಡೆದುಕೊಂಡರು. ನಂತರ ಎನ್. ಗಣೇಕಲ್ ಗ್ರಾಮದ ಹೊಲದಲ್ಲಿ ಹತ್ತಿ ಬೆಳೆಹಾನಿ ವೀಕ್ಷಣೆ ಮಾಡಿ ರೈತರಿಂದ ಮಾಹಿತಿ ಪಡೆದುಕೊಂಡಾಗ ಜಮೀನಿನ ರೈತರು, ನಮಗೆ ಈ ವರ್ಷ ಮಳೆ ಬರದೆ ಇರುವುದರಿಂದ ಹೊಲಕ್ಕೆ ಹಾಕಿದ ಬೀಜ ಗೊಬ್ಬರದ ದುಡ್ಡು ಬರದಂತೆ ಆಗಿದೆ. ಪ್ರತಿ ವರ್ಷ ಹತ್ತಿ ಎಕರೆಗೆ 12 ರಿಂದ 15 ಕ್ವಿಂಟಲ್ ಬರುತ್ತಿತ್ತು ಈ ವರ್ಷ ಎಕರೆಗೆ 2 ರಿಂದ ಮೂರು ಕ್ವಿಂಟಲ್ ಬಂದಿದೆ. ಇದರಿಂದ ನಾವು ಬಹಳ ನಷ್ಟದಲ್ಲಿದ್ದೇವೆ. ಬರಗಾಲದಿಂದ ಜನರು ಬೇರೆ ಕಡೆಗೆ ಗುಳೆ ಹೋಗುತ್ತಿದ್ದಾರೆ. ಎಕರೆಗೆ 50 ಸಾವಿರ ನಮಗೆ ಬರ ಪರಿಹಾರ ನೀಡಬೇಕು ಎಂದು ಕೇಂದ್ರ ತಂಡಕ್ಕೆ ಮನವಿ ಮಾಡಿದರು.

ಗಣೇಕಲ್ ಜಲಾಶಯಕ್ಕೆ ಬೇಟಿ ನೀಡಿದ ತಂಡ ವಿಬಿ ಜಿ ರಾಮ್ ಜಿ ಕಾಮಗಾರಿಯ ವೀಕ್ಷಣೆ ಮಾಡಿ ಅಲ್ಲಿ ಕೆಲಸ ಮಾಡುತ್ತಿರುವ ಜನರಿಂದ ಮಾಹಿತಿ ಪಡೆದರು. ದಿನಕ್ಕೆ 375 ಕೂಲಿ ಕೊಡುತ್ತಾರೆ. ಹೊರಗಡೆ ಕೆಲಸಕ್ಕೆ ಹೋದರೆ 700 ರಿಂದ 800 ಕೂಲಿ ಕೊಡುತ್ತಾರೆ. ಹಾಗಾಗಿ ನಮಗೆ ಕೂಲಿ ಹೆಚ್ಚಿಸಬೇಕು ಎಂದು ಕೆಲಸಗಾರರು ಹೇಳಿದರು.

ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಮಸರಕಲ್, ಎನ್. ಗಣೇಕಲ್, ಮಂದಕಲ್, ಯರಡೋಣ ಸೇರಿದಂತೆ ಇತರೆ ಕಡೆ ಬರ ಸಮೀಕ್ಷೆ ವೀಕ್ಷಣೆ ಮಾಡಿ ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕೇಂದ್ರ ತಂಡ ರೈತರಿಗೆ ಭರವಸೆ ನೀಡಿತು.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಕಾರ್ಯದರ್ಶಿ ಗಿರಿಶ್ ಆರ್, ಜಿಲ್ಲಾಧಿಕಾರಿ ಪೂವಿತಾ ಎಸ್. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ, ಕೃಷಿ ವಿಜ್ಞಾನಿಗಳು, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಚವ್ಹಾಣ್, ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲೆಯ ಬರ ಸಮೀಕ್ಷೆಗೆ ಆಗಮಿಸಿದ ಕೇಂದ್ರ ತಂಡದಿಂದ ದೇವದುರ್ಗ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಭಾನುವಾರ ಅಧಿಕಾರಿಗಳೊಂದಿಗೆ ಸಭೆ ನಡೆಯಿತು

# ವಾಟ್ಸಾಪ್–ಇನ್‌ಸ್ಟಾಗ್ರಾಂ ಮೂಲಕ ಉಗ್ರರ ಸಂಪರ್ಕ? ಬೀದರ್‌ನ 7 ಮಂದಿ ವಿರುದ್ಧ ಎಫ್‌ಐಆರ್ ದಾಖಲು

**ಬೀದರ್, ಅ. 6:** ನಿಷೇಧಿತ ಭಯೋತ್ಪಾದಕ ಸಂಘಟನೆಗಳ ಸದಸ್ಯರು ಹಾಗೂ ಅಕ್ರಮ ಶಸ್ತ್ರಾಸ್ತ್ರ ಸಾಗಾಟದಲ್ಲಿ ತೊಡಗಿರುವವರೊಂದಿಗೆ ವಾಟ್ಸಾಪ್ ಮತ್ತು ಇನ್‌ಸ್ಟಾಗ್ರಾಂ ಮೂಲಕ ಪಾಕಿಸ್ತಾನದ ಉಗ್ರ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿದ್ದ ಆರೋಪದ ಮೇಲೆ ಜಿಲ್ಲೆಯ ಪೊಲೀಸರು ಏಳು ಮಂದಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಕಳೆದ ಅಕ್ಟೋಬರ್ 1ರಂದು ಖಟಕ್‌ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಯೆಂಕೂರ್ ಗ್ರಾಮದ ವಿಶಾಲಕುಮಾರ್ ವಿಜಯಕುಮಾರ್ ಮೆತ್ರೆ (24) ಪ್ರಮುಖ ಆರೋಪಿಯಾಗಿದ್ದಾನೆ. ಭಾಲ್ಕಿ ಗ್ರಾಮೀಣ ವೃತ್ತದ ಪೊಲೀಸ್ ಇನ್ಸ್‌ಪೆಕ್ಟರ್ ಹನಮರೆಡ್ಡಿಯಪ್ಪ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ.



ಪೊಲೀಸರ ಪ್ರಕಾರ, ಅಕ್ಟೋಬರ್ 1ರಂದು ಮುಂಜಾನೆ 3 ಗಂಟೆಗೆ ಮೇತ್ರೆ ಅಕ್ರಮ ಶಸ್ತ್ರಾಸ್ತ್ರಗಳ ಖರೀದಿ ಮತ್ತು ಸಾಗಾಟದಲ್ಲಿ ತೊಡಗಿರುವವರೊಂದಿಗೆ ಸಾಮಾಜಿಕ ಜಾಲತಾಣಗಳ ಮೂಲಕ ಸಂಪರ್ಕದಲ್ಲಿದ್ದಾನೆ ಎಂಬ ಮಾಹಿತಿ ಲಭಿಸಿತ್ತು. ಬಳಿಕ ಪೊಲೀಸರು ಯೆಂಕೂರ್ ಗ್ರಾಮಕ್ಕೆ ತೆರಳಿ ಆತನನ್ನು ವಶಕ್ಕೆ ಪಡೆದು ಮೊಬೈಲ್ ಪರಿಶೀಲಿಸಿದ್ದಾರೆ. ಮೊಬೈಲ್‌ನಲ್ಲಿದ್ದ ವಾಟ್ಸಾಪ್ ಸಂಭಾಷಣೆಗಳಲ್ಲಿ ಪಾಕಿಸ್ತಾನ ಮೂಲದ ಶಹಜಾದ್ ಭಟ್ಟಿ, ರಾಣಾ ಹುಸೇನ್ ಮತ್ತು ನೋಮಿಖಾನ್ ಜೊತೆ ಸಂಪರ್ಕ ಹೊಂದಿರುವುದು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಶಹಜಾದ್ ಭಟ್ಟಿಯನ್ನು ಪೊಲೀಸರು ಪಾಕಿಸ್ತಾನ ಮೂಲದ ಘೋಷಿತ ಭಯೋತ್ಪಾದಕ ಎಂದು ಗುರುತಿಸಿದ್ದಾರೆ.

ಅಲ್ಲದೆ, ರಹೆ ಹಕ್ ಮತ್ತು 'Rahe Haq' ಮತ್ತು ರಾಣಾಭಾಯ್ ಎಂಬ ಖಾಸಗಿ ವಾಟ್ಸಾಪ್ ಗ್ರೂಪ್‌ಗಳಲ್ಲಿ ಮೇತ್ರೆ ಸಕ್ರಿಯ ಸದಸ್ಯನಾಗಿದ್ದ ಎಂದು ಪೊಲೀಸರು ಆರೋಪಿಸಿದ್ದು, ಈ ಗ್ರೂಪ್ ಗಳಲ್ಲಿ ಭಾರತದ ಏಕತೆ, ಸಮಗ್ರತೆ ಮತ್ತು ಸಾರ್ವಭೌಮತ್ವಕ್ಕೆ ಧಕ್ಕೆ ತರುವಂತಹ ವಿಷಯಗಳಿದ್ದವು ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

ಉತ್ತರ ಪ್ರದೇಶದ ಆಶು ಶರ್ಮಾ ಹಾಗೂ ಮಧ್ಯಪ್ರದೇಶದ ರಾಜ್ ಭಾಯ್ ಅಲಿಯಾಸ್ ಲಕ್ಕಿ ಸಿಂಗ್ ಅವರೊಂದಿಗೂ ಅಕ್ರಮ ಶಸ್ತ್ರಾಸ್ತ್ರಗಳ ಸಾಗಾಟಕ್ಕೆ ಸಂಬಂಧಿಸಿದಂತೆ ಮೆತ್ರೆ ಸಂಪರ್ಕದಲ್ಲಿದ್ದ ಎಂದು ಎಫ್ ಐ ಆರ್ ನಲ್ಲಿ ಉಲ್ಲೇಖಿಸಲಾಗಿದೆ.

ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಪ್ರಕರಣದ ಕುರಿತು, ಮೆತ್ರೆಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಆರೋಪಿಗಳ ಮೊಬೈಲ್‌ಗಳು ಹಾಗೂ ಡಿಜಿಟಲ್ ವಸ್ತುಗಳನ್ನು ಪರಿಶೀಲಿಸಲಾಗುತ್ತಿದ್ದು, ಯಾವುದೇ ಶಸ್ತ್ರಾಸ್ತ್ರಗಳನ್ನು ನಿಜವಾಗಿಯೂ ಖರೀದಿಸಲಾಗಿದೆಯೇ ಅಥವಾ ಸಾಗಾಟ ಮಾಡಲಾಗಿದೆಯೇ ಎಂಬುದನ್ನು ತನಿಖೆ ನಡೆಸಲಾಗುತ್ತಿದೆ ಎಂದಿದ್ದಾರೆ.

ಪ್ರಕರಣದಲ್ಲಿ ಅಪರಾಧ ಕಾಯ್ದೆಯ ಸೆಕ್ಷನ್ 18, 20 ಮತ್ತು 39 ಹಾಗೂ ಕ್ರಿಮಿನಲ್ ಪಿತೂರಿ ಮತ್ತು ಸಾಮಾನ್ಯ ಉದ್ದೇಶಕ್ಕೆ ಸಂಬಂಧಿಸಿದ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪೊಲೀಸರ ಆರೋಪಗಳು ತನಿಖೆಯಲ್ಲಿದ್ದು, ಎಫ್‌ಐಆರ್‌ನಲ್ಲಿ ಉಲ್ಲೇಖಿಸಿರುವ ಆರೋಪಗಳು ನ್ಯಾಯಾಲಯದಲ್ಲಿ ಇನ್ನೂ ಸಾಬೀತಾಗಿಲ್ಲ.

## ಚಿಕಿತ್ಸೆ ಕೊಡುವಾಗಲೇ ಜಿ.ಪಂ ಸಿಇಓ ಕೈಗೆ ಸಿಕ್ಕಿಬಿದ್ದ ನಕಲಿ ವೈದ್ಯ!

**ಬೀದರ್, ಅ. 6:** ಗ್ರಾಮೀಣ ಭಾಗದ ಮುಗ್ಧ ಜನರ ಜೀವದ ಜತೆಗೆ ಚೆಲ್ಲಾಟವಾಡುತ್ತಿದ್ದ ಒಡಿಶಾ ಮೂಲದ ವಿಶ್ವಜೀತ್ ಎನ್ನುವ ನಕಲಿ ವೈದ್ಯನನ್ನು ಭಾಲ್ಕಿ ತಾಲೂಕಿನ ಬೀರಿ (ಕೆ) ಗ್ರಾಮದಲ್ಲಿ ಖುದ್ದು ಜಿ.ಪಂ ಸಿಇಓ ಗಿತ್ತೆ ಮಾಧವ್ ವಿಠಲರಾವ್ ಪತ್ತೆ ಹಚ್ಚಿದ್ದಾರೆ. ಅವರ ಸಮಯ ಪ್ರಜ್ಞೆಯಿಂದ ನಕಲಿ ವೈದ್ಯರ ಜಾಲ ಜಿಲ್ಲೆಯಲ್ಲಿ ಸಕ್ರಿಯವಾಗಿರುವುದು ಬಯಲಿಗೆ ಬಂದಿದೆ.

ಬೆಳಗಿನ ನಡೆ ಗ್ರಾಮಗಳ ಕಡೆ ಕಾರ್ಯಕ್ರಮದ ಅಂಗವಾಗಿ ಸಿಇಓ ಅವರು ಬೆಳಗ್ಗೆ ಬೀರಿ (ಕೆ) ಗ್ರಾಮಕ್ಕೆ ಭೇಟಿ ನೀಡಿದ್ದರು. ಗ್ರಾಮದ ವಿವಿಧ ಬಡಾವಣೆಗಳಲ್ಲಿ ಸಂಚರಿಸಿ ಗ್ರಾಮಸ್ಥರ ಅಹವಾಲು ಆಲಿಸುವುದು ಮತ್ತು ಸೌಕರ್ಯಗಳ ಪರಿಶೀಲನೆ ನಡೆಸುತ್ತಿದ್ದರು. ಈ ವೇಳೆ ವ್ಯಕ್ತಿಯೊಬ್ಬ ರೋಗಿಗಳಿಗೆ ಚುಚ್ಚುಮದ್ದು ಹಾಗೂ ಮಾತ್ರೆಗಳನ್ನು ನೀಡುತ್ತಿರುವುದು ಅವರು ಗಮನಿಸಿದರು. ಆತನ ಚಿಕಿತ್ಸಾ ವಿಧಾನವನ್ನು ಸೂಕ್ಷ್ಮವಾಗಿ ಗಮನಿಸಿ, ಅನುಮಾನಗೊಂಡು ಆತನ ಹಿನ್ನೆಲೆ ಮುಂತಾದವ ಗಳನ್ನು ವಿಚಾರಿಸಿದರು.



ವೈದ್ಯ ಪದವಿ ಪ್ರಮಾಣಪತ್ರ ಹಾಗೂ ಪರವಾನಗಿ ದಾಖಲೆ ತೋರಿಸುವಂತೆ ಕೇಳುತ್ತಿದ್ದಂತೆ ಆತ ತಬ್ಬಿಬ್ಬಾಗಿದ್ದು, ಯಾವುದೇ ಅಧಿಕೃತ ದಾಖಲೆಗಳನ್ನು ಒದಗಿಸುವಲ್ಲಿ ವಿಫಲನಾಗಿದ್ದಾನೆ. ಪ್ರಾಥಮಿಕ ತನಿಖೆಯಲ್ಲೆ ಆತ ಯಾವುದೇ ವೈದ್ಯಕೀಯ ಪದವಿ ಪಡೆದಿಲ್ಲ ಮತ್ತು ಒಡಿಶಾದಿಂದ ಬಂದು 2019 ರಿಂದ ಇದೇ ಗ್ರಾಮದಲ್ಲಿ ಬಾಡಿಗೆ ಮನೆ ಮಾಡಿಕೊಂಡು ಇಲ್ಲಿ ನಕಲಿ ವೈದ್ಯನಾಗಿ ಚಿಕಿತ್ಸೆ ನೀಡುತ್ತಿರುವ ಬಗ್ಗೆ ಮಾಹಿತಿ ಪಡೆದ ಸಿಇಓ, ಕೂಡಲೇ ಆತನನ್ನು ವಶಕ್ಕೆ ಪಡೆಯುವಂತೆ ಸಿಇಓ ಅಧಿಕಾರಿಗಳಿಗೆ ಸೂಚಿಸಿದರು.

**ಔಷಧಿ ಪೂರೈಕೆದಾರರ ವಿರುದ್ಧವೂ ಕ್ರಮ:** ನಕಲಿ ವೈದ್ಯನ ಬಣ್ಣ ಬಯಲಾಗುತ್ತಿದ್ದಂತೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಸಿಇಓ, ಕೇವಲ ಈತನ ಬಂಧನದಿಂದ ಸಮಸ್ಯೆ ಬಗೆಹರಿಯುವುದಿಲ್ಲ, ಈ ಜಾಲದ ಬೇರನ್ನು ಕಿತ್ತೊಗೆಯ ಬೇಕಿದೆ. ಈ ನಕಲಿ ವೈದ್ಯನಿಗೆ ಭಾರಿ ಪ್ರಮಾಣದಲ್ಲಿ ಔಷಧಿಗಳನ್ನು ಪೂರೈಕೆ ಮಾಡುತ್ತಿರುವ ಔಷಧ ವ್ಯಾಪಾರಿಗಳನ್ನು ಪತ್ತೆ ಹಚ್ಚಿ ಅವರ ವಿರುದ್ಧವೂ ಕಾನೂನು ರೀತ್ಯ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ನಕಲಿ ವೈದ್ಯರುಗಳ ಪಟ್ಟಿ ಸಿದ್ಧಪಡಿಸಿ, ಈ ಜಾಲಕ್ಕೆ ಹೆಡೆಮುರಿ ಕಟ್ಟಲಾಗುವುದು ಎಂದು ಸಿಇಓ ಹೇಳಿದ್ದಾರೆ.

### ಕ್ವಿಂಟಾಲ್‌ಗೆ ರೂ.8,343 ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿ

# 13 ಖರೀದಿ ಕೇಂದ್ರಗಳಲ್ಲಿ ನೋಂದಣಿ, ಖರೀದಿ ಪ್ರಕ್ರಿಯೆ ಆರಂಭಿಸಲು ವಿಜಯಪುರ ಜಿಲ್ಲಾಧಿಕಾರಿ ಸೂಚನೆ

**ವಿಜಯಪುರ,ಅ.6,** 2026ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ ರೂ.8,343 ಬೆಂಬಲ ಬೆಲೆಯಲ್ಲಿ ಖರೀದಿಸಲು ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯನ್ನು ಆರಂಭಿಸುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಕನಿಷ್ಠ ಬೆಂಬಲ ಬೆಲೆ ಕಾರ್ಯಪಡೆ ಸಮಿತಿ ಸಭೆಯಲ್ಲಿ ಈ ಕುರಿತು ನಿರ್ಧಾರ ಕೈಗೊಳ್ಳಲಾಗಿದ್ದು, ರೈತರ ನೋಂದಣಿಗೆ 80 ದಿನಗಳು ಹಾಗೂ ಖರೀದಿ ಪ್ರಕ್ರಿಯೆಗೆ 90 ದಿನಗಳ ಅವಧಿ ನಿಗದಿಪಡಿಸಲಾಗಿದೆ.

ಪ್ರತಿ ರೈತರಿಂದ ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್ ಹಾಗೂ ಒಬ್ಬ ರೈತನಿಂದ ಗರಿಷ್ಠ 20 ಕ್ವಿಂಟಾಲ್ ಎಫ್‌ಎಕ್ಯೂ ಗುಣಮಟ್ಟದ ಸೂರ್ಯ ಕಂತಿಯನ್ನು ಖರೀದಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು. ಬೆಂಬಲ ಬೆಲೆ ಯೋಜನೆಯ ಮಾರ್ಗಸೂಚಿಯನ್ವಯ ಖರೀದಿಸಿದ ಉತ್ಪನ್ನದ ಮೌಲ್ಯವನ್ನು ಮೂರು ದಿನಗಳೊಳಗಾಗಿ ರೈತರ ಆಧಾರ್ ಸಂಖ್ಯೆ ಜೋಡಣೆಯಾದ ಬ್ಯಾಂಕ್ ಖಾತೆಗೆ ನೇರ ಲಾಭ ವರ್ಗಾವಣೆ ಮೂಲಕ ಜಮೆ ಮಾಡುವಂತೆ ನಿರ್ದೇಶನ ನೀಡ ಲಾಯಿತು. ಆವರ್ತ ನಿಧಿಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆಯೂ ಸೂಚಿಸಲಾಯಿತು.

ಜಿಲ್ಲೆಯಲ್ಲಿ ಪ್ರಸಕ್ತ 6,641 ಹೆಕ್ಟೇರ್ ಪ್ರದೇಶದಲ್ಲಿ ಸೂರ್ಯಕಾಂತಿ ಬಿತ್ತನೆಯಾಗಿದ್ದು, ಅಂದಾಜು 79,692



ಕ್ವಿಂಟಾಲ್ ಇಳುವರಿ ನಿರೀಕ್ಷಿಸಲಾಗಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಸೂರ್ಯಕಾಂತಿ ಪ್ರತಿ ಕ್ವಿಂಟಾಲ್‌ಗೆ ರೂ.7,000 ರಿಂದ ರೂ.7,300ರ ವರೆಗೆ ಮಾರಾಟವಾಗುತ್ತಿರುವುದಾಗಿ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಹೀಗಾಗಿ ಬೆಂಬಲ ಬೆಲೆ ಯೋಜನೆಯಡಿ ಪ್ರತಿ ಕ್ವಿಂಟಾಲ್‌ಗೆ ರೂ.8,343 ದೊರೆಯಲಿದ್ದು, ರೈತರು ಇದರ ಸದುಪಯೋಗ ಪಡೆಯುವಂತೆ ಮನವಿ ಮಾಡಲಾಗಿದೆ.

# ಅಭಿವೃದ್ಧಿಗೆ ಸಂಪನ್ಮೂಲದ ಲಭ್ಯತೆ ಪರಿಗಣನೆ ಅಗತ್ಯ: ಪ್ರೊ.ಬಿರಾದಾರ

**ಕಲಬುರಗಿ, ಅ. 6:** ಪರಿಣಾಮಕಾರಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸುವಲ್ಲಿ ಸ್ಥಳಿಯ ಅಗತ್ಯ, ಲಭ್ಯವಿರುವ ಸಂಪನ್ಮೂಲ ಹಾಗೂ ಜನರ ಆದ್ಯತೆ ಗುರುತಿಸುವುದು ಅತ್ಯಗತ್ಯವಾಗಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ)ದ ಕುಲಸಚಿವ ಪ್ರೊ.ಆರ್.ಆರ್. ಬಿರಾದಾರ್ ಹೇಳಿದರು.

ಮೂರು ದಿನದ ತರಬೇತಿ ಕಾರ್ಯಕ್ರಮದಲ್ಲಿ, ಗ್ರಾಮೀಣ ಸಮುದಾಯಗಳ ಆರ್ಥಿಕ ಸಬಲೀಕರಣ ಮತ್ತು ಸ್ವಾವಲಂಬನೆಗೆ ಸೂಕ್ಷ್ಮ ಸಾಲ ಪ್ರಮುಖ ಸಾಧನವಾಗಬಲ್ಲದು. ಸರ್ಕಾರಿ ಯೋಜನೆಗಳ ಪ್ರಯೋಜನ ಅರ್ಹರಿಗೆ ತಲುಪುವಂತೆ ಮಾಡುವ ಅಗತ್ಯದ ಬಗ್ಗೆ ವಿವರಿಸಿದರು.



ಸಮಾಜ ಮತ್ತು ವರ್ತನಾ ವಿಜ್ಞಾನಗಳ ನಿಕಾಯ ಡೀನ್ ಪ್ರೊ.ಪವಿತ್ರಾ ಆಲೂರ ಅವರು ಸಮಾಜಕಾರ್ಯ ಶಿಕ್ಷಣ ಮತ್ತು ಕ್ಷೇತ್ರ ಕಾರ್ಯದಲ್ಲಿ ಸಹಭಾಗಿತ್ವದ ಯೋಜನೆಯ ಪ್ರಸ್ತುತತೆ ಕುರಿತು ಹೇಳಿದರು.

ಹಿರಿಯ ಪ್ರಾಧ್ಯಾಪಕ ಪ್ರೊ. ಚನ್ನವೀರ ಆರ್.ಎಂ. ಅವರು, ಸಮುದಾಯ ಸಂಘಟನೆ ಮತ್ತು ಅಭಿವೃದ್ಧಿಯಲ್ಲಿ ಸಹಭಾಗಿತ್ವದ ಗ್ರಾಮೀಣ ಮೌಲ್ಯಮಾಪನ ಹಾಗೂ ವಿಧಾನಗಳ ಮಹತ್ವದ ಕುರಿತು ಬೆಳಕು ಚೆಲ್ಲಿದರು.

ಪಿಆರ್‌ಎ ಮತ್ತು ಗ್ರಾಮೀಣ ಅಭಿವೃದ್ಧಿ ಕ್ಷೇತ್ರದ ಸಂಪನ್ಮೂಲ ವ್ಯಕ್ತಿ ಡಾ.ಪ್ರಕಾಶದವ್ ಅವರು ತಾಂತ್ರಿಕ ಅವಧಿ ನಡೆಸಿಕೊಟ್ಟರು. ಸಮಾಜ ಕಾರ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹರೀಶಕುಮಾರ್ ಚೌಧರಿ ಕಾರ್ಯಕ್ರಮ ಸಂಯೋಜಿಸಿದ್ದರು. ಡಾ.ಲಕ್ಷ್ಮಣ ಜಿ, ಡಾ.ಚಿತ್ಕಲಾ ವೆಂಕಾರೆಡ್ಡಿ ಇತರರಿದ್ದರು. ತರಬೇತಿ ಭಾಗವಾಗಿ ವಿದ್ಯಾರ್ಥಿಗಳು ಗ್ರಾಮಗಳಿಗೆ ಭೇಟಿ ನೀಡಿ ಸಮುದಾಯಗಳೊಂದಿಗೆ ಸಂವಾದ ನಡೆಸಿ ವಿವಿಧ ಪಿಆರ್‌ಎ ಸಾಧನಗಳನ್ನು ಪ್ರಾಯೋಗಿಕವಾಗಿ ಬಳಸಿದರು. ಸಮುದಾಯದ ಅಗತ್ಯ ಮತ್ತು ಸಂಪನ್ಮೂಲ ಗುರುತಿಸಿ ಗ್ರಾಮ ಮಟ್ಟದ ಅಭಿವೃದ್ಧಿ ಯೋಜನೆ ಸಿದ್ಧಪಡಿಸುವ ಪ್ರಾಯೋಗಿಕ ಅನುಭವ ಪಡೆದರು.

ಸಾಮಾಜಿಕ ಹಾಗೂ ಸಂಪನ್ಮೂಲ ನಕ್ಷೆ ರಚನೆ, ಸಂದರ್ಭಕ್ಕಾನುಸಾರ ಚಟುವಟಿಕೆ ಪಟ್ಟಿ ಮತ್ತು ಜೋಡಿ ಶ್ರೇಯಾಂಕ ಪದ್ಧತಿ ಸೇರಿ ಪ್ರಮುಖ ಪಿಆರ್‌ಎ ಸಾಧನಗಳ ಕುರಿತು ತರಬೇತಿ ನೀಡಲಾಯಿತು.

**ಗ್ರಾಮಗಳ ವಾಸ್ತವಿಕ ಅಗತ್ಯ ಮತ್ತು ಸಂಪನ್ಮೂಲ ಆಧರಿಸಿದ ಅಭಿವೃದ್ಧಿ ಕ್ರಮ ಸರ್ಕಾರಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ನೆರವಾಗುವುದರ ಜತೆಗೆ ಗ್ರಾಮೀಣ ಪ್ರದೇಶದ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಗೆ ಭದ್ರ ಬುನಾದಿ ಒದಗಿಸಬಲ್ಲವು. – ಪ್ರೊ.ಆರ್. ಆರ್.ಬಿರಾದಾರ್, ಕುಲಸಚಿವರು.**

# ಚುನಾವಣೆ ಕೆಲಸ ನಿರ್ವಹಿಸುವ ಶಿಕ್ಷಕರಿಗೆ ಬೆದರಿಕೆ: ಡಿಕೆಶಿ ವಿರುದ್ಧ ಯಡಿಯೂರಪ್ಪ ಆರೋಪ

**ಕಲಬುರಗಿ, ಅ. 6:** ಎಸ್ಐಆರ್ ಪ್ರಕ್ರಿಯೆಯಲ್ಲಿ ತಪ್ಪುಗಳಾಗಿದ್ದರೆ ಸರಿಪಡಿಸಿ, ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕು. ಆದರೆ ಮುಖ್ಯಮಂತ್ರಿಗಳು ಅಧಿಕಾರ ದುರುಪಯೋಗಪಡಿಸಿಕೊಂಡು ಚುನಾವಣಾ ಆಯೋಗದ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರ ಮೇಲೆ ಒತ್ತಡ ಹೇರಿ ಬೆದರಿಕೆ ಹಾಕುವ ಮೂಲಕ ಚುನಾವಣಾ ಆಯೋಗದ ಕೆಲಸ ಮಾಡುತ್ತಿರುವ ಬಿಎಲ್ಓ ಅವರುಗಳು ತಮ್ಮ ಅಣತಿಯಂತೆ ಕೆಲಸ ಮಾಡಬೇಕೆಂದು ಅವರ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆರೋಪಿಸಿದರು.



ಸುದ್ದಿಗೋಷ್ಠಿಯಲ್ಲಿ, ಎಸ್ಐಆರ್ ಪ್ರಕ್ರಿಯೆಯಲ್ಲಿ ತಪ್ಪಾಗಿದ್ದರೆ ಅದನ್ನು ಸರಿಪಡಿಸುವುದು ಚುನಾವಣಾ ಆಯೋಗದ ಕೆಲಸ. ಸರ್ಕಾರ ಅದನ್ನು ಸಾಕ್ಷಿ ಸಮೇತ ಆಯೋಗದ ಮುಂದೆ ಹಾಜರುಪಡಿಬೇಕು. ಆದರೆ ಅದೆಲ್ಲ ಬಿಟ್ಟು ಪ್ರತಿಭಟನೆ ನಡೆಸಿದ ಶಿಕ್ಷಕರ ವಿರುದ್ಧ ಅಧಿಕಾರದ ಬಲ ಪ್ರಯೋಗಿಸಿ ಬೆದರಿಕೆ ಹಾಕುವುದು ಸರಿಯಲ್ಲ ಎಂದರು.

ಭಾರತದ ಇತಿಹಾಸದಲ್ಲಿ ಮುಖ್ಯಮಂತ್ರಿ ಯೊಬ್ಬರು ಪ್ರತಿಭಟನೆ ನಡೆಸಿದ ಉದಾಹರಣೆ ಇಲ್ಲ. ಡಿ.ಕೆ. ಶಿವಕುಮಾರ್ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆ. ಶಿಕ್ಷಕರ ಮೇಲೆ ಒತ್ತಡ ಹೇರುವ ಬದಲು ಅವರ ಅಹವಾಲುಗಳನ್ನು ಆಲಿಸಬೇಕು. ಎಸ್ಐಆರ್‌ನಲ್ಲಿ ಲೋಪವಿದ್ದರೆ ಸರಿಪಡಿಸಲಿ ಎಂದು ಹೇಳಿದರು.

ರಾಜ್ಯದಲ್ಲಿ 64 ಸಾವಿರ ಶಿಕ್ಷಕರ ಹುದ್ದೆಗಳು ಹಾಗೂ 6 ಸಾವಿರ ವಿಶ್ವವಿದ್ಯಾಲಯ ಪ್ರಾಧ್ಯಾಪಕರ ಹುದ್ದೆಗಳು ಖಾಲಿ ಇವೆ. 35 ಸಾವಿರ ಶಾಲಾ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿವೆ. ಶಿಕ್ಷಕರ ಮೇಲೆ ತಮ್ಮ ಕೋಪ ವ್ಯಕ್ತಪಡಿಸುವ ಬದಲು ಶಿಕ್ಷನ ಇಲಾಖೆಯಲ್ಲಿರುವ ಇಂತಹ ಮೂಲಭೂತ ಸಮಸ್ಯೆಗಳನ್ನು ಬಗೆಹರಿಸುವತ್ತ ಸರ್ಕಾರ ಗಮನಹರಿಸಬೇಕು ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಮಳೆ ಬಾರದೇ ಬರಗಾಲ ಗಂಭೀರ ಪರಿಸ್ಥಿತಿ ಉಂಟು ಮಾಡಿದೆ. ರೈತರಿಗೆ ಸಮರ್ಪಕ ನೆರವು ನೀಡಿಲ್ಲ. ಬರ ಪರಿಹಾರವಾಗಿ 2,500 ರೂ ಪರಿಹಾರ ಘೋಷಣೆ ಮಾಡಿದ್ದನ್ನೂ ಕೊಡುತ್ತಿಲ್ಲ. ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಸರ್ಕಾರ ಅವರ ನೆರವಿಗೆ ಧಾವಿಸಬೇಕು ಎಂದರು.

ಹಣಬಲ, ತೋಳ್ಬಲ ಹಾಗೂ ಜಾತಿಬಲದಿಂದ ಚುನಾವಣೆ ಗೆಲ್ಲುವ ಕಾಲ ಹೋಗಿದೆ. ಕಳೆದ ಲೋಕಸಭೆ ಚುನಾವಣೆಯಲ್ಲಿ ನಿಮ್ಮ ಸೋದರ ಡಿಕೆ ಸುರೇಶ್ ಕತೆ ಏನಾಯ್ತು ನೋಡಿದ್ದೀರಲ್ಲ, ಈಗ ಜನರು ಜಾಗೃತರಾಗಿದ್ದಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಶೀಲ್ ನಮೋಶಿ ಕ್ಷೇತ್ರದಾದ್ಯಂತ ಪ್ರವಾಸ ಮಾಡಿ ಶಿಕ್ಷಕರ ವಿಶ್ವಾಸ ಗಳಿಸಿದ್ದಾರೆ. ಈ ಚುನಾವಣೆಯಲ್ಲಿ ನಮೋಶಿ ಗೆಲುವು ಸಾಧಿಸುವ ಪೂರ್ಣ ವಿಶ್ವಾಸ ನನಗಿದೆ. ಬಿಜೆಪಿ ಹಾಗೂ ಜೆಡಿಎಸ್ ಎನ್‌ಡಿಎ ಮೈತ್ರಿಕೂಟದಡಿ ಒಟ್ಟಾಗಿ ಚುನಾವಣೆ ಎದುರಿಸಲಿವೆ. 2028ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂಬ ಭ್ರಮೆಯಲ್ಲಿ ಡಿ.ಕೆ.ಶಿವಕುಮಾರ್ ಇದ್ದಾರೆ. ನರೇಂದ್ರ ಮೋದಿ ನೇತೃತ್ವದಲ್ಲಿ ಬಿಜೆಪಿ ರಾಜ್ಯದಲ್ಲಿ ಮತ್ತೆ ಸ್ಪಷ್ಟ ಬಹುಮತ ಪಡೆದು ಅಧಿಕಾರಕ್ಕೆ ಬರಲಿದೆ ಎಂದು ಬಿ.ಎಸ್.ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದರು.




ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ವಿರುದ್ಧ ಎನ್‌ಎಸ್‌ಯುಐ ಸದಸ್ಯರು ಮಂಗಳವಾರ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸಿದರು.

### ಸಿಇಸಿ ಜ್ಞಾನೇಶ್‌ಕುಮಾರ್ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ

## ಚುನಾವಣಾ ಆಯೋಗದ ಪಾರದರ್ಶಕತೆ ಕಾಪಾಡಿ: ಸಂಸದೆ ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ/ನವದೆಹಲಿ, ಅ.6:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ಇಂಡಿಯಾ ಒಕ್ಕೂಟದ ಸಂಸದರು ಸಂಸತ್ ಭವನದ ಮಕರ ದ್ವಾರದಿಂದ ಕೇಂದ್ರ ಚುನಾವಣಾ ಆಯೋಗದ ಕಚೇರಿವರೆಗೆ ನಡೆಸಿದ ಪ್ರತಿಭಟನಾ ಮೆರವಣಿಗೆಯಲ್ಲಿ ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಭಾಗವಹಿಸಿದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಒಕ್ಕೂಟದ ಹಲವು ಸಂಸದರು ಪ್ರತಿಭಟನೆಯಲ್ಲಿ ಪಾಲ್ಗೊಂಡು, ಮತದಾರರ ಪಟ್ಟಿಯ ಪರಿಷ್ಕರಣೆ ಹಾಗೂ ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಕುರಿತು ಎದ್ದಿರುವ ಪ್ರಶ್ನೆಗಳಿಗೆ ಚುನಾವಣಾ ಆಯೋಗ ಸ್ಪಷ್ಟ ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಾ. ಪ್ರಭಾ ಮಲ್ಲಿಕಾರ್ಜುನ್, ಪ್ರಜಾಪ್ರಭುತ್ವದ ಅಡಿಪಾಯವೇ ನಾಗರಿಕರ ಮತದಾನದ ಹಕ್ಕು. ಪ್ರತಿಯೊಂದು ಮತಕ್ಕೂ ಮೌಲ್ಯವಿದ್ದು, ಯಾವುದೇ ಅರ್ಹ ಮತದಾರರ ಮತದಾನದ ಹಕ್ಕು ಕಸಿದುಕೊಳ್ಳಲು ಅವಕಾಶ ನೀಡಬಾರದು ಎಂದು ಹೇಳಿದರು. ಮತದಾರರ ಪಟ್ಟಿಯಿಂದ ಹೆಸರು ಕೈಬಿಡಲಾಗುತ್ತಿದೆ ಎಂಬ ಆರೋಪಗಳು ಸೇರಿದಂತೆ ಚುನಾವಣಾ ಪ್ರಕ್ರಿಯೆಯ ಕುರಿತು ಎದ್ದಿರುವ ಅನುಮಾನಗಳಿಗೆ ಪಾರದರ್ಶಕವಾಗಿ ಉತ್ತರಿಸುವ ಅಗತ್ಯವಿದೆ. ಚುನಾವಣಾ ಆಯೋಗದ ಸ್ವಾತಂತ್ರ್ಯ, ನಿಷ್ಪಕ್ಷಪಾತತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡುವುದು ಪ್ರಜಾಪ್ರಭುತ್ವದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಚುನಾವಣಾ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸವನ್ನು ಉಳಿಸುವುದು ಅತ್ಯಗತ್ಯ. ಸಂವಿಧಾನಿಕ



ಸಂಸ್ಥೆಗಳು ಸ್ವತಂತ್ರವಾಗಿ ಮತ್ತು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು. ಜನರ ಮತದ ಹಕ್ಕು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆಗೆ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆ ಕಾಪಾಡುವ ನಿಟ್ಟಿನಲ್ಲಿ ಎದ್ದಿರುವ ಪ್ರತಿಯೊಂದು ಪ್ರಶ್ನೆ ಮತ್ತು ಅನುಮಾನಕ್ಕೂ ಚುನಾವಣಾ ಆಯೋಗ ಸ್ಪಷ್ಟನೆ ನೀಡಬೇಕು ಎಂಬುದು ಪ್ರತಿಭಟನೆಯ ಪ್ರಮುಖ ಆಗ್ರಹವಾಗಿತ್ತು.

# ಪೊಲೀಸರು ತಮ್ಮ ವ್ಯಾಪ್ತಿಗೆ ಬರದಿದ್ದರೂ ರಾಜಕೀಯ ಒತ್ತಡದಿಂದ ದೂರು ದಾಖಲಿಸಿದ್ದಾರೆ–ಮಾಜಿ ಶಾಸಕ ಸೋಮಶೇಖರರೆಡ್ಡಿ ಕಿಡಿ

**ಬಳ್ಳಾರಿ, ಅ.06:** ಶಾಂತಿಯುತ ವಾಗಿ ಪ್ರತಿಭಟನೆ ನಡೆಸಿದ ನಮ್ಮಪಕ್ಷದ ಮುಖಂಡರ ಮೇಲೆ ಪೊಲೀಸ್ ದೌರ್ಜನ್ಯವನ್ನು ಖಂಡಿಸುತ್ತಿದೆ. ದೌರ್ಜನ್ಯ ಎಸಗಿದ ಪೊಲೀಸ್ ಅಧಿಕಾರಿಗಳನ್ನು ಅಮಾನತ್ತು ಮಾಡಬೇಕೆಂದು ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಆಗ್ರಹಿಸಿದ್ದಾರೆ.

ಅವರು ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ, ಎಸ್ ಐ ಆರ್ ವಿಷಯದಲ್ಲಿ ಪೊಲೀಸರು ದೂರು ದಾಖಲಿಸಲು ಬರಲ್ಲ. ಆದರೂ ಪೊಲೀಸರು ಒತ್ತಡಕ್ಕೆ ಮಣಿದು ಬಿಜೆಪಿ ಪಕ್ಷದ ಕಾರ್ಯಕರ್ತರ ಮೇಲೆ ದೂರು ದಾಖಲಿಸಿದ್ದಾರೆ.

ಜಿಲ್ಲೆಯಲ್ಲಿ ಒಬ್ಬೇ ಒಬ್ಬ ಪೊಲೀಸ್ ಉತ್ತಮರಿಲ್ಲ. ಸವರೆಲ್ಲ ದೌರ್ಜನ್ಯ ಮಾಡುತ್ತಿದ್ದಾರೆ. ನಿನ್ನೆ ನಮ್ಮ ಕಾರ್ಯಕರ್ತರನ್ನು ಎಳೆದಾಡಿ, ಗಾಯ ಮಾಡಿದ ಬ್ರೂಸ್ ಪೇಟೆ, ಎಪಿಎಂಸಿ ಇನ್ಸ್ಪೆಕ್ಟರ್ ಅವರನ್ನು ಅಮಾನತ್ತು ಕ್ರಮ ಆಗಬೇಕು ಎಂದರು.

ಪಕ್ಷದ ಜಿಲ್ಲಾ ಅಧ್ಯಕ್ಷ ಅವರ ಕೈ ಮುರಿದಿದೆ' ಇದು ಸರಿಯಾ, ಚುನಾವಣ ಆಯೋಗಕ್ಕೆ ಸಂಬಂಧಿಸಿದ ವಿಷಯದಲ್ಲಿ ದೂರು ದಾಖಲಿಸಲು ಬರಲ್ಲ. ಇದು ನಮ್ಮ ವ್ಯಾಪ್ತಿಗೆ ಬರಲ್ಲ ಎಂದು ಹೇಳಿ ಕಳಿಸಬೇಕಿತ್ತು. ಅದಕ್ಕಾಗಿ ಈಗ



ಕೇಸು ಹಿಂದಕ್ಕೆ ಪಡೆಯಬೇಕು ಎಂದರು.

ಸಿಇಸಿ ಕಚೇರಿ ಮುಂದೆ ಪ್ರತಿಭಟನೆ ಮಾಡಿದ ಸಿಎಂ ಅವರ ಮೇಲೆ ಏಕೆ ಕೇಸು ದಾಖಲಿಸಲಿಲ್ಲ ಎಂದು ಪ್ರಶ್ನಿಸಿದ ಅವರು. ನಾನು ಎಂಎಲ್ ಸಿ ಆಗಿದ್ದರೂ ನನ್ನ ಮೇಲೆ ನಕಲಿ ಕೇಸು ದಾಖಲು ಮಾಡಿದ್ದಾರೆ. ಈ ಬಗ್ಗೆ ಸದನದಲ್ಲಿ ಹೋರಾಟ ಮಾಡಿದರೂ ಇನ್ನೂ ಆಗಿಲ್ಲ ಎಂದರೆ, ಸಾಮಾನ್ಯ ಜನರ ಪಾಡೇನು ಎಂದು ಪ್ರಶ್ನಿಸಿ.

ಪೊಲೀಸರೆಂದರೆ ಕೇವಲ ಕೇಸು ಹಾಕುವುದೆಂದು ಎಂದುಕೊಂಡಿದ್ದಾರೆಂದು ಆರೋಪಿಸಿದರು. ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಮಾತನಾಡಿ, ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ಎರಗುಡಿ ಮಲ್ಲಿ ಅವರನ್ನು ಪ್ರತಿಭಟನೆ ವೇಳೆ ಪೊಲೀಸರು ಟಾರ್ಗೆಟ್ ಮಾಡಿ ಎಳೆದಾಡಿ ಗಾಯಗೊಳಿಸಿದ್ದಾರೆ. ಪೊಲೀಸರು ತಮ್ಮ ವ್ಯಾಪಿಗೆ ಬರದಿದ್ದರೂ ರಾಜಕೀಯ ಒತ್ತಡದಿಂದ ಶಾಸಕರು ದೂರು ದಾಖಲಿಸಿದ್ದು ಸರಿಯಲ್ಲ. ಓರ್ವ ಎ ಎಸ್ಪಿ, ಇಬ್ಬರು ಸಿಪಿಐಗಳು ಇದರಲ್ಲಿ ಪಾಲ್ಗೊಂಡಿದ್ದಾರೆಂದರು.

ಪಾಲಿಕೆಯ ಆಯುಕ್ತ ಮಂಜುನಾಥ ಅವರು ಹೇಳಿದಂತೆ ಫಾರಂ 7 ಬಗ್ಗೆ ವಿವರ ನೀಡಿದೆ. ನಾವು ಪಾರಂ 7 ತುಂಬಿ ಕೊಟ್ಟಿಲ್ಲ, ವಿವರ ನೀಡಿದಷ್ಟೇ. ನಮಗೆ ತಪ್ಪು ಮಾಹಿತಿ ನೀಡಿದ ಆಯುಕ್ತರ ಮೇಲೂ ಕೇಸು ದಾಖಲಿಸಬೇಕಲ್ಲ ಎಂದರು.

ಈ ಎಲ್ಲಾ ವಿಷಯಗಳ ಮೇಲೆ ಚುನಾವಣಾ ಆಯೋಗಕ್ಕೆ ನಾವು ದೂರು ನೀಡಲಿದೆ. ಅದರ ಕಾಪಿಯನ್ನು ಠಾಣೆಗೂ ಸಲ್ಲಿಸಲಿದೆ. ಖಾಸಗಿ ಕೇಸು ದಾಖಲಿಸಲು ಚಿಂತನೆ ಮಾಡಿದೆಂದರು.

ಮಾಜಿ ಸಂಸದ ಸಣ್ಣ ಪಕ್ಕೀರಪ್ಪ ಮಾತನಾಡಿ, ಪೊಲೀಸರ ದೌರ್ಜನ್ಯಕ್ಕೆ ಕಾರಣ ಸಿಎಂ ಅವರೇ ಕಾರಣ, ಬಿಜೆಪಿಯವರಿಗೇನು ಮತದಾರರನ್ನು ಡಿಲೀಟ್ ಮಾಡುವ ಹಕ್ಕು ಇಲ್ಲ. 70 ರಿಂದ 80 ಜನ ಕಾಂಗ್ರೆಸ್ ಶಾಸಕರು ಸೋಲುತ್ತಾರೆಂಬ ವರದಿಯಿಂದ ಈ ರೀತಿ ಕಾಂಗ್ರೆಸ್ ಮಾಡುತ್ತಿದೆಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಸಂಸದ ಸಣ್ಣ ಪಕ್ಕೀರಪ್ಪ ಪಕ್ಷದ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ಮುಖಂಡರಾದ ಕೆ.ಎ.ರಾಮಲಿಂಗಪ್ಪ, ಸಾಧನಾ ಹಿರೇಮಠ, ಎಸ್.ಮಲ್ಲನಗೌಡ, ರವಿಕುಮಾರ್, ರಘು ಮೊದಲಾದವರು ಇದ್ದರು.

# ಶಿಕ್ಷಕರೇ ಸಮಾಜದ ನಿಜವಾದ ನಿರ್ಮಾಪಕರು: ಶಿವಪ್ರಭು ಪಾಟೀಲ್



**ಕಲಬುರಗಿ, ಅ. 6:** ಪ್ರಾಚೀನ ಕಾಲದಿಂದಲೂ ಭಾರತದಲ್ಲಿ ಗುರುವಿಗೆ ಅಪಾರ ಗೌರವವಿದೆ. ಭವ್ಯ ಭಾರತದ ಭಾವಿ ಪ್ರಜೆಗಳಾದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡುವ ಮೂಲಕ ಪ್ರಬುದ್ಧ ಭಾರತ ನಿರ್ಮಿಸುವ ಮಹತ್ತರ ಹೊಣೆ ಶಿಕ್ಷಕರ ಮೇಲಿದೆ. ಶಿಕ್ಷಕರೇ ಸಮಾಜದ ನಿಜವಾದ ನಿರ್ಮಾಪಕರು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಪ್ರಭು ಪಾಟೀಲ್ ಹೇಳಿದರು.

ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವಲ್ಲಿ ಶಿಕ್ಷಕರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಕೊಡುಗೆ ಅಪಾರವಾಗಿದೆ. ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ನಿರಂತರ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕಲಬುರಗಿ ಜಿಲ್ಲೆಯನ್ನು ಸಾಂಸ್ಕೃತಿಯಿಕ ಜಿಲ್ಲೆಯನ್ನಾಗಿಸಲು ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು.

ಕಮಲಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೈದ್ಯನಾಥ ತಡಕಲ್ ಮಾತನಾಡಿ, ಪ್ರಸ್ತುತ ಸಮಾಜದಲ್ಲಿ ಮೋಸ, ವಂಚನೆ, ದಾರಿದ್ರ್ಯ, ಭ್ರಷ್ಟಾಚಾರ ಹಾಗೂ ದೌರ್ಜನ್ಯಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ವಿದ್ಯಾರ್ಥಿಗಳನ್ನು ಇಂತಹ ದುಷ್ಪರಿಣಾಮಗಳಿಂದ ದೂರವಿಟ್ಟು ಸ್ವಸ್ಥ ಸಮಾಜ ನಿರ್ಮಾಣಕ್ಕೆ ಅವರನ್ನು ಸಜ್ಜುಗೊಳಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪಾಲಕರ ಮೇಲಿದೆ ಎಂದರು.

ಕಲಬುರಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ವಿಜಯ ಕುಮಾರ್ ಪಾಟೀಲ್ ತೇಗಲತಿಪ್ಪಿ ಮಾತನಾಡಿ, ಶಿಕ್ಷಕರನ್ನು ಗೌರವಿಸುವುದು ಪುಣ್ಯದ ಕಾರ್ಯವಾಗಿದ್ದು, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜಿಲ್ಲೆಯ ಪ್ರತಿಯೊಂದು ತಾಲೂಕುಗಳಲ್ಲಿಯೂ ಶಿಕ್ಷಕರನ್ನು ಗೌರವಿಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಕನ್ನಡ ಭಾಷೆಯ ಬಗ್ಗೆ ನಿರ್ಲಕ್ಷ್ಯದ ವಾತಾವರಣವಿರುವ ಇಂದಿನ ಸಂದರ್ಭದಲ್ಲಿ ಗಡಿ ಭಾಗಗಳಿಗೂ ತೆರಳಿ ಕನ್ನಡ ಜಾಗೃತಿ ಮೂಡಿಸುವ ಕಾರ್ಯವನ್ನು ಪರಿಷತ್ತು ಮಾಡುತ್ತಿದೆ. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದರು.

ಸಂಶೋಧಕ ಸಾಹಿತಿ ಮುಡುಬಿ ಗುಂಡೇರಾವ್ ಮಾತನಾಡಿ, ಅಮೋಘವರ್ಷ ನೃಪತುಂಗನ ನೆಲದಲ್ಲಿ ಜನಿಸಿರುವ ನಾವೆಲ್ಲರೂ ಪುಣ್ಯವಂತರು. ಕನ್ನಡ ಸಾಹಿತ್ಯದ ಪ್ರಾಚೀನ ಕೃತಿ ಕವಿರಾಜಮಾರ್ಗ ಹಾಗೂ ವಚನ ಸಾಹಿತ್ಯದ ಶ್ರೀಮಂತ ಪರಂಪರೆಗೆ ಕಲ್ಯಾಣ ಕರ್ನಾಟಕದ ಕೊಡುಗೆ ಅಪಾರವಾಗಿದೆ. ಮಹಾಗಾಂವ ಗ್ರಾಮವು ಸ್ವಾತಂತ್ರ್ಯ ಹೋರಾಟಗಾರರು, ಸಾಹಿತಿಗಳು, ಕವಿಗಳು, ಲೇಖಕರು ಹಾಗೂ ರಾಜಯಿಕೀಯ ಚಿಂತಕರನ್ನು ಸಮಾಜಕ್ಕೆ ನೀಡಿದೆ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಶಿವಶಕ್ತಿ ಪಾಟೀಲ್ ಮಾತನಾಡಿ, ಕಮಲಾಪುರ ತಾಲೂಕಿನಾದ್ಯಂತ ನಿರಂತರವಾಗಿ ಸಾಹಿತ್ಯಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿರುವುದರಿಂದ ಉತ್ತಮ ಸಾಹಿತ್ಯಿಕ ವಾತಾವರಣ ನಿರ್ಮಾಣವಾಗುತ್ತಿದೆ. ಕನ್ನಡ ಉಳಿಸಿ ಬೆಳೆಸುವ ಕಾರ್ಯಕ್ಕೆ ತಾವು ಸದಾ ಬೆಂಬಲವಾಗಿ ನಿಲ್ಲುವುದಾಗಿ ತಿಳಿಸಿದರು.

# ಬಾಕಿ ವೇತನ ಪಾವತಿಗೆ ಒತ್ತಾಯ

## ಹಾಸ್ಟೆಲ್ ಹೊರಗುತ್ತಿಗೆ ನೌಕರರ ಧರಣಿ

**ಕಲಬುರಗಿ, ಅ. 6:** ಬಾಕಿ ವೇತನ ಪಾವತಿಸಬೇಕು, ಕನಿಷ್ಠ ವೇತನ ಕಾಯ್ದೆ ಜಾರಿಗೊಳಿಸಬೇಕು, ಕೆಲಸದಿಂದ ತೆಗೆದಿರುವ ನೌಕರರನ್ನು ಪುನಃ ನೇಮಕಾತಿ ಮಾಡಿಕೊಳ್ಳಬೇಕು ಎಂದು ಒತ್ತಾಯಿಸಿ, ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿಶಾಲಾ ಹೊರಗುತ್ತಿಗೆ ನೌಕರರ ಸಂಘ ನೇತೃತ್ವದಲ್ಲಿ ಸಾವಿರಕ್ಕೂ ಅಧಿಕ ನೌಕರರು ಇಲ್ಲಿನ ಸಮಾಜ ಕಲ್ಯಾಣ ಇಲಾಖೆ ಕಚೇರಿ ಎದುರಿನ ರಸ್ತೆ ಬಂದ್ ಮಾಡಿ ಶನಿವಾರ ಪ್ರತಿಭಟನೆ ನಡೆಸಿದರು.



ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಬಂದಿದ್ದ ಪ್ರತಿಭಟನಾಕಾರರು ಬೆಳಿಗ್ಗೆ ಯಿಂದಲೇ ಪ್ರತಿಭಟನೆಗೆ ಕುಳಿತಿದ್ದರು. ಮನವಿ ಆಲಿಸಲು ಅಧಿಕಾರಿಗಳು ಬಾರದ್ದರಿಂದ ಕಚೇರಿ ಮುಂಭಾಗದ ಗೇಟ್‌ನ ಕೀಲಿ ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಇಲಾಖೆಯ ಜಂಟಿ ನಿರ್ದೇಶಕರು ಸ್ಥಳಕ್ಕೆ ಬಂದು ಮನವಿ ಸ್ವೀಕರಿಸುತ್ತಾರೆ ಎಂಬ ನಿರೀಕ್ಷೆಯಲ್ಲಿ ಪ್ರತಿಭಟನಾಕಾರ ರಿದ್ದರು. ಆದರೆ, ಎಷ್ಟು ಹೊತ್ತಾದರೂ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ ಅವರು ಬರಲಿಲ್ಲ. ಇದರಿಂದ ಆಕ್ರೋಶಗೊಂಡ ಪ್ರತಿಭಟನಾಕಾರರು ಮಿನಿ ವಿಧಾನಸೌಧದ ಮುಂಭಾಗದ ರಸ್ತೆಗೆ ಬಂದು ಕುಳಿತರು. ಇದರಿಂದಾಗಿ ಒಂದು ಗಂಟೆಗೂ ಅಧಿಕ ಸಂಚಾರದಲ್ಲಿ ವ್ಯತ್ಯಯವಾಯಿತು. ನಂತರ ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಮನವಿ ಸ್ವೀಕರಿಸಿ ಬೇಡಿಕೆಗಳ ಇತ್ಯರ್ಥ ಕುರಿತು ಇದೇ 6ರಂದು ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಸಂಜೆ 6 ಗಂಟೆಗೆ ಪ್ರತಿಭಟನೆಯನ್ನು ಕೈಬಿಡಲಾಯಿತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಸಂಘದ ರಾಜ್ಯ ಘಟಕದ ಅಧ್ಯಕ್ಷ ಭೀಮಶೆಟ್ಟಿ ಯಂಪಳ್ಳಿ, 'ಕಳೆದ ಒಂಬತ್ತು ವರ್ಷಗಳಿಂದ ಕನಿಷ್ಠ ವೇತನ ಹೆಚ್ಚಳವಾಗಿಲ್ಲ. ಈ ಬಗ್ಗೆ ರಾಜ್ಯದಾದ್ಯಂತ ಪ್ರತಿಭಟನೆ ನಡೆಸಿದರೂ ಪ್ರಯೋಜನವಾಗಿಲ್ಲ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಆಗಸ್ಟ್‌ನಲ್ಲಿ ಪ್ರತಿಭಟನೆ ನಡೆಸಿದ್ದ ವೇಳೆ ಮನವಿ ಸ್ವೀಕರಿಸಿದ ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೆ.15ರಂದು ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದರು. ಅದು ಈಡೇರಿಲ್ಲ.

ಸಮಾಜ ಕಲ್ಯಾಣ ಇಲಾಖೆ, ಕಿತ್ತೂರು ರಾಣಿ ಚನ್ನಮ್ಮ, ಮೊರಾರ್ಜಿ ದೇಸಾಯಿ, ಇಂದಿರಾಗಾಂಧಿ ವಸತಿನಿಲಯಗಳ ನೌಕರರಿಗೆ ಮೂರ್ನಾಲ್ಕು ತಿಂಗಳ ವೇತನ ಬಾಕಿ ಇದೆ. ಅದನ್ನು ಶೀಘ್ರವೇ ಪಾವತಿ ಮಾಡಬೇಕು. ದಸರಾ, ದೀಪಾವಳಿ ಹಬ್ಬ ಸಮೀಪಿಸಿದ್ದು ನೌಕರರು ಹಬ್ಬ ಮಾಡಲೂ ಪರದಾಡಬೇಕಿದೆ ಎಂದು ಟೀಕಿಸಿದರು.

## ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ್ ಪರವಾಗಿ ಭರ್ಜರಿ ಮತಯಾಚನೆ

**ಬಳ್ಳಾರಿ, ಅ.06:** ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ್ ಅವರ ಪರವಾಗಿ ಬಳ್ಳಾರಿ ನಗರದ ವಿವಿಧ ಶಾಲೆಗಳಿಗೆ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಪಕ್ಷದ ಮುಖಂಡರು ತೆರಳಿ ಮತ ಯಾಚನೆ ಮಾಡಿದರು.

ನಗರದಸೇಂಟ್ ಪೀಟರ್ಸ್ ಹೈಸ್ಕೂಲ್ ಪಾರ್ವತಿ ನಗರ, ಬಾಲ ನಾಗಪ್ಪ ಹೈಸ್ಕೂಲ್, ವಿದ್ಯಾನಿಕೇತನ್ ಹೈಸ್ಕೂಲ್, ನೊಬೆಲ್ ಹೈ ಸ್ಕೂಲ್, ಗಂಗೋತ್ರಿ ಹೈ ಸ್ಕೂಲ್ ಗೆ ತೆರಳಿದ ಮುಖಂಡರು ಶಿಕ್ಷಕರನ್ನು ಭೇಟಿಯಾಗಿ ಕರ ಪತ್ರ ನೀಡಿ. ಶರಣಪ್ಪ ಮಟ್ಟೂರು ಅವರಿಗೆ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಜೆ.ಎಸ್. ಆಂಜನೇಯುಲು, ಡಿ.ಸಿ.ಸಿ. ಕಾರ್ಯಾಧ್ಯಕ್ಷ ಬೋಯಪಾಟಿ ವಿಷ್ಣುವರ್ಧನ, ಉಪಾಧ್ಯಕ್ಷರು ಕೆ. ಶ್ರೀನಿವಾಸಲು, ಕಾಂಗ್ರೆಸ್ ಮುಖಂಡರಾದ ವೀರೇಂದ್ರ ಕುಮಾರ್, ಸತೀಶ್ ಕಾಂಡ್ರಾ, ಡಿ.ಸಿ.ಸಿ. ಕಾರ್ಯದರ್ಶಿ



ಶೋಭ ಕಾಳಿಂಗ, ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಶಿಕ್ಷಕರ ವಿಭಾಗದ ಅಧ್ಯಕ್ಷ ಅಖೀಲ್ ಅಹಮ್ಮದ್, ಸೇವದಾಳ ಜಿಲ್ಲಾಧ್ಯಕ್ಷ ಅತಾವುಲ್ಲಾ, ಕೊಟ್ಟಾಲ್ ರಘು, ಮಲ್ಲಿಶ್ವರಿ, ಸಂತೋಷ್ ಸ್ವಾಮಿ, ಅಖಿಲ್, ಹಾಗು ಪಕ್ಷದ ಇನ್ನಿತರ ಕಾರ್ಯಕರ್ತರಿದ್ದರು.

# ಸಿಂಧನೂರಿನಲ್ಲಿ ಸಂಭ್ರಮದ ಬುತ್ತಿ ಜಾತ್ರೆ: ಸಾಮೂಹಿಕ ಭೋಜನ, ಕಂಗೊಳಿಸಿದ ಗ್ರಾಮೀಣ ಸೊಗಡು

**ರಾಯಚೂರು, ಅ. 6:** ಜಿಲ್ಲೆಯ ಸಿಂಧನೂರು ಪಟ್ಟಣದಲ್ಲಿ ವೀರಶೈವ ಸಮಾಜದ ವತಿಯಿಂದ ಶ್ರೀ ಕುಮಾರಶಿವಯೋಗಿ 159ನೇ ಜಯಂತಿ ಅದ್ದೂರಿಯಾಗಿ ಆಚರಿಸಲಾಯ್ತು. ಈ ಜಯಂತಿ ಪ್ರಯುಕ್ತ ಮಹಿಳೆಯರಿಗಾಗಿ ಬಸವ ಬುತ್ತಿ ಜಾತ್ರೆ ಆಯೋಜಿಸಲಾಗಿತ್ತು.



**ರಾಯಚೂರು ಜಿಲ್ಲೆಯ ಸಿಂಧನೂರಲ್ಲಿ ಈಗಿನ ಪೀಳಿಗೆಗೆ ಭಾರತದ ಸಂಸ್ಕೃತಿ, ಗ್ರಾಮೀಣ ಭಾಗದ ಸೊಗಡಿನ ಮಹತ್ವ ಸಾರಲು ನಿಟ್ಟಿನಲ್ಲಿ ಅದ್ದೂರಿ ಬುತ್ತಿ ಜಾತ್ರೆ ನಡೆಯಿತು. ಸಾವಿರಾರು ಮಹಿಳೆಯರು ತಲೆ ಮೇಲೆ ಬುತ್ತಿ ಹೊತ್ತು ತಂದು, ಪರಸ್ಪರ ಹಂಚಿಕೊಂಡು ಸಾಮೂಹಿಕ ಭೋಜನ ಸವಿದರು.**

ಈ ಬುತ್ತಿ ಜಾತ್ರೆಯಲ್ಲಿ ಭಾಗವಹಿಸಲು ಮಹಿಳೆಯರು ಅಂದವಾಗಿ ಸೀರೆಯುಟ್ಟು, ಸಿಂಗಾರಗೊಂಡು ಮಹಾಲಕ್ಷ್ಮೀ ಅಂತೆ ಮಿಂಚಿದರು. ಶೇಂಗಾ ಹೋಳಿಗೆ, ಕರ್ಜಿಕಾಯಿ, ಸಜ್ಜೆರೊಟ್ಟಿ, ಜೋಳದ ರೊಟ್ಟಿ ಬುತ್ತಿ ಕಟ್ಟಿಕೊಂಡು ಸಿಂಧನೂರಿನ ಎಪಿಎಂಸಿಗೆ ಬಂದಿದ್ದರು. ನೂರಾರು ಮಹಿಳೆಯರು ತಲೆ ಮೇಲೆ ಬುತ್ತಿ ಹೊತ್ತು ಮೆರವಣಿಗೆಯಲ್ಲಿ ಸಾಗಿದರು.

ಇದು ಕಲ್ಯಾಣ ಕರ್ನಾಟಕದಲ್ಲಿ ಆಯೋಜಿಸಲಾಗಿದ್ದ ಮೊದಲ ಬುತ್ತಿ ಜಾತ್ರೆಯಾಗಿದೆ. ಅತ್ಯಂತ ಸಡಗರ, ಉತ್ಸಾಹದಿಂದ ಮಹಿಳೆಯರು ಮೆರವಣಿಗೆಯಲ್ಲಿ ಭಾಗಿಯಾಗಿದ್ದರು. ಬಸವವೃತ್ತ, ಹಳೇಬಜಾರ್, ಕಿತ್ತೂರುರಾಣಿ ಚನ್ನಮ್ಮ ವೃತ್ತದ ಮಾರ್ಗವಾಗಿ ಆರ್ ಜಿಎಂ ಶಾಲಾ ಮೈದಾನಕ್ಕೆ ಮೆರವಣಿಗೆ ತಲುಪಿತು.

ಈ ವೇಳೆ ವಿರಕ್ತಮಠದ ಸ್ವಾಮೀಜಿಗಳು ಬುತ್ತಿಗೆ ಸಂಕಲ್ಪ ಮಾಡಿಸಿದರು.

ಬಂಡಿಗಳ ಸದ್ದು, ಭಜನೆ ಮಂಡಳಿ, ನಾನಾ ವಾದ್ಯಗಳು ಮತ್ತು ಕಲಾತಂಡಗಳು ಬುತ್ತಿ ಜಾತ್ರೆಗೆ ಮತ್ತಷ್ಟು ಮೆರೆಗು ತಂದವು. ಒಟ್ಟಾರೆ ಬುತ್ತಿ ಜಾತ್ರೆ ಜನರಲ್ಲಿ ಭಕ್ತಿ ಜೊತೆಗೆ ನಾವು, ನಮ್ಮವರು ಎನ್ನುವ ಭಾವನೆ ಮೂಡಿಸಿದ್ದು ಸುಳ್ಳಲ್ಲ.

# ಹ್ಯಾಲಿಸ್‌ಬ್ಲೂ ಸ್ಟೀಲ್ಸ್ ಪ್ರೈವೇಟ್ ಸಂಸ್ಥೆಯಲ್ಲಿ ಮಾಸ್ಟರ್ ಸಿ.ವಿ.ವಿ. 25ನೇ ಬೆಳ್ಳಿ ಮಹೋತ್ಸವದ ಲೋಟಸ್ ಕಾಂಗ್ರಿಗೇಶನ್

**ಡಿ.ಹಿರೇಹಾಳ ಅ 06.** ನಗರದ ಹೊರವಲಯದ ಹ್ಯಾಲಿಸ್‌ಬ್ಲೂ ಸ್ಟೀಲ್ಸ್ ಪ್ರೈವೇಟ್ ಲಿಮಿಟೆಡ್‌ನ ಆವರಣದಲ್ಲಿ ಮಾಸ್ಟರ್ ಸಿ.ವಿ.ವಿ. ಅವರ 25ನೇ ಬೆಳ್ಳಿ ಮಹೋತ್ಸವದ ಅಂಗವಾಗಿ ಮೂರು ದಿನಗಳ ಲೋಟಸ್ ಕಾಂಗ್ರಿಗೇಶನ್ ಕಾರ್ಯಕ್ರಮವನ್ನು ಭಕ್ತಿಭಾವ ಹಾಗೂ ಶ್ರದ್ಧೆಯಿಂದ ಆಯೋಜಿಸಲಾಯಿತು.




ಕ್ಟೋಬರ್ 2ರಿಂದ 4ರವರೆಗೆ ನಡೆದ ಈ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳು ಸೇರಿದಂತೆ ದೇಶದ ವಿವಿಧ ಪ್ರದೇಶಗಳಿಂದ 1,300ಕ್ಕೂ ಹೆಚ್ಚು ಮಾಸ್ಟರ್ ಸಿ.ವಿ.ವಿ. ಯೋಗ ಸಾಧಕರು ಆಗಮಿಸಿ ಭಾಗವಹಿಸಿದರು. ಕಾರ್ಯಕ್ರಮದಲ್ಲಿ ಸಾಮೂಹಿಕ ಪ್ರಾರ್ಥನೆ, ಧ್ಯಾನ, ಯೋಗಾಭ್ಯಾಸ ಹಾಗೂ ಸಾಧನೆಗೆ ಸಂಬಂಧಿಸಿದ ವಿವಿಧ ಆಧ್ಯಾತ್ಮಿಕ ಚಟುವಟಿಕೆಗಳು ನಡೆದವು.

ಮೂರು ದಿನಗಳ ಕಾರ್ಯಕ್ರಮದಲ್ಲಿ ಸಾಧಕರು ಏಕಾಗ್ರತೆ ಹಾಗೂ ಭಕ್ತಿಭಾವದಿಂದ ಧ್ಯಾನ ಮತ್ತು ಯೋಗ ಸಾಧನೆಯಲ್ಲಿ ತೊಡಗಿಸಿಕೊಂಡರು. ಯೋಗ ಸಾಧನೆಯ ಮಹತ್ವ, ಆಧ್ಯಾತ್ಮಿಕ ಜೀವನದಲ್ಲಿ ಅದರ ಪಾತ್ರ ಹಾಗೂ ಮಾಸ್ಟರ್ ಸಿ.ವಿ.ವಿ. ಅವರ ಮಾರ್ಗದರ್ಶನದ ಕುರಿತು ವಿವಿಧ ಚಟುವಟಿಕೆಗಳ ಮೂಲಕ ಅರಿವು ಮೂಡಿಸಲಾಯಿತು.

ಸಾವಿರಕ್ಕೂ ಹೆಚ್ಚು ಸಾಧಕರು ಭಾಗವಹಿಸಿದ್ದ ಹಿನ್ನೆಲೆಯಲ್ಲಿ ಅವರ ವಸತಿ, ಊಟ, ಕುಡಿಯುವ ನೀರು, ಸ್ವಚ್ಛತೆ, ವಿಶ್ರಾಂತಿ ಹಾಗೂ ಇತರೆ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವ ವ್ಯವಸ್ಥೆಯನ್ನು ಹ್ಯಾಲಿಸ್‌ಬ್ಲೂ ಸ್ಟೀಲ್ಸ್ ವತಿಯಿಂದ ಮಾಡಲಾಗಿತ್ತು.

ಈ ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಶಾಸಕ ಕಾಲ್ವ ಶ್ರೀನಿವಾಸುಲು ಆಗಮಿಸಿದ್ದರು.

ಸಾಧಕರಿಗೆ ಯಾವುದೇ ತೊಂದರೆಯಾಗದಂತೆ ಹ್ಯಾಲಿಸ್‌ಬ್ಲೂ ಸ್ಟೀಲ್ಸ್‌ನ ಉದ್ಯೋಗಿಗಳು ಹಾಗೂ ಕಾರ್ಮಿಕರು* ವಿವಿಧ ತಂಡಗಳಾಗಿ ಕಾರ್ಯನಿರ್ವಹಿಸಿ, ಹಗಲು–ರಾತ್ರಿ ಸೇವಾ ಮನೋಭಾವದಿಂದ ಎಲ್ಲ ವ್ಯವಸ್ಥೆಗಳನ್ನು ನೋಡಿಕೊಂಡರು. ಸಾಧಕರ ಅಗತ್ಯಗಳಿಗೆ ತಕ್ಷಣ ಸ್ಪಂದಿಸುವುದು, ಸ್ಥಳದ ಸ್ವಚ್ಛತೆ ಕಾಪಾಡುವುದು, ಆಹಾರ ಮತ್ತು ನೀರಿನ ವ್ಯವಸ್ಥೆ, ಸಂಚಾರ ಹಾಗೂ ಇತರೆ ಸೌಲಭ್ಯಗಳನ್ನು ನಿರ್ವಹಿಸುವಲ್ಲಿ ಸಿಬ್ಬಂದಿ ಪ್ರಮುಖ ಪಾತ್ರ ವಹಿಸಿದರು.

ಸಾಧಕರ ಸೇವೆಯೇ ಮಾಸ್ಟರ್ ಸಿ.ವಿ.ವಿ. ಅವರ ಸೇವೆ ಎಂಬ ಭಾವನೆಯೊಂದಿಗೆ ಹ್ಯಾಲಿಸ್‌ಬ್ಲೂ ಕುಟುಂಬದ ಸದಸ್ಯರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

1,000ಕ್ಕೂ ಹೆಚ್ಚು ಸಾಧಕರಿಗೆ ಆತ್ಮೀಯ ಹಾಗೂ ಅನುಕೂಲಕರ ವಾತಾವರಣ ಕಲ್ಪಿಸುವಲ್ಲಿ ಉದ್ಯೋಗಿಗಳು ಮತ್ತು ಕಾರ್ಮಿಕರ ನಿಸ್ವಾರ್ಥ ಸೇವೆ ವಿಶೇಷವಾಗಿ ಗಮನ ಸೆಳೆಯಿತು.

ಮಾಸ್ಟರ್ ಸಿ.ವಿ.ವಿ. ಜಯ ಕುಮಾರ್ ಅವರ ಆಶೀರ್ವಾದದಿಂದ ಎಲ್ಲರ ಆರೋಗ್ಯ, ನೆಮ್ಮದಿ, ಆಧ್ಯಾತ್ಮಿಕ ಪ್ರಗತಿ ಹಾಗೂ ಸಂಸ್ಥೆಯ ಸಮಗ್ರ ಅಭಿವೃದ್ಧಿಗಾಗಿ ಈ ಮಹತ್ವದ ಕಾರ್ಯಕ್ರಮವನ್ನು ಶ್ರದ್ಧೆಯಿಂದ ಆಚರಿಸಲಾಯಿತು.




# ತಾರಕಕ್ಕೇರಿದ ಸೌದಿ ಅರೇಬಿಯಾ-ಹೌತಿ ಸಂಘರ್ಷ

## ಮೆಕ್ಕಾ ರಕ್ಷಣೆಗೆ ಪಾಕ್-ತುರ್ಕಿ, ಸೇನೆ ನಿಯೋಜನೆಗೆ ತೀರ್ಮಾನ

**ರಿಯಾದ್, ಅ. 6:** ಪಶ್ಚಿಮ ಏಷ್ಯಾದಲ್ಲಿ ಯುದ್ಧದ ಕಾರ್ಮೋಡ ಮತ್ತಷ್ಟು ದಟ್ಟವಾಗಿದ್ದು, ಸೌದಿ ಅರೇಬಿಯಾ ಮತ್ತು ಯೆಮೆನ್‌ನ ಹೌತಿ ಬಂಡುಕೋರರ ನಡುವಿನ ಸಂಘರ್ಷ ತಾರಕಕ್ಕೇರಿದೆ. ಸೌದಿ ಅರೇಬಿಯಾ ಮೇಲೆ ಹೆಚ್ಚುತ್ತಿರುವ ಕ್ಷಿಪಣಿ ಹಾಗೂ ಡ್ರೋನ್ ದಾಳಿ ಬೆನ್ನಲ್ಲೇ, ಸೌದಿಯ ಬೆನ್ನಿಗೆ ಪ್ರಬಲ ಮಿತ್ರರಾಷ್ಟ್ರಗಳಾದ ಪಾಕಿಸ್ತಾನ ಮತ್ತು ತುರ್ಕಿ ಬಂದು ನಿಂತಿವೆ.

ಸೌದಿ ಅರೇಬಿಯಾದಲ್ಲಿ ತನ್ನ ಸೇನಾ ಪಡೆಗಳನ್ನು ತಕ್ಷಣವೇ ನಿಯೋಜಿಸಲು ಮೂರೂ ದೇಶಗಳು ಐತಿಹಾಸಿಕ ತೀರ್ಮಾನ ಕೈಗೊಂಡಿದ್ದು, ಈ ಬೆಳವಣಿಗೆ ಇಡೀ ಮಧ್ಯಪ್ರಾಚ್ಯದಲ್ಲಿ ಭಾರೀ ಸಂಚಲನ ಸೃಷ್ಟಿಸಿದೆ. ಪಾಕಿಸ್ತಾನದ ಮಾಧ್ಯಮ ಸಂಸ್ಥೆ ವರದಿಯ ಪ್ರಕಾರ, ಮೂರೂ ರಾಷ್ಟ್ರಗಳನ್ನೊಳಗೊಂಡ ಮೆಕ್ಕಾ ರಕ್ಷಣಾ ಮೈತ್ರಿಕೂಟದ ಕಾರ್ಯತಂತ್ರದ ರಾಜಕೀಯ ಮತ್ತು ರಕ್ಷಣಾ ಸಮಿತಿ ರಿಯಾದ್‌ನಲ್ಲಿ ತುರ್ತು ಸಭೆ ನಡೆಸಿದೆ.

ಸೌದಿ ಅರೇಬಿಯಾ ಎದುರಿಸುತ್ತಿರುವ ಭದ್ರತಾ ಸವಾಲುಗಳು ಮತ್ತು ಪವಿತ್ರ ಮೆಕ್ಕಾ ಮೇಲಿನ ದಾಳಿಗಳನ್ನು ಹಿಮ್ಮೆಟ್ಟಿಸುವ ಕುರಿತು ಸಭೆಯಲ್ಲಿ ಗಂಭೀರ ಚರ್ಚೆ ನಡೆದಿದೆ. ಈ ಸಭೆಯಲ್ಲಿ ಪಾಕಿಸ್ತಾನದ ಪರವಾಗಿ ಉಪ ಪ್ರಧಾನಿ ಇಶಾಕ್ ದರ್, ರಕ್ಷಣಾ ಸಚಿವ ಖವಾಜಾ ಆಸಿಫ್ ಮತ್ತು ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಭಾಗವಹಿಸಿದ್ದರು ಎಂದು ತಿಳಿದು ಬಂದಿದೆ.

ಕಳೆದ ಆಗಸ್ಟ್ ತಿಂಗಳಿನಲ್ಲಿ ಪಾಕಿಸ್ತಾನ, ಸೌದಿ ಅರೇಬಿಯಾ ಮತ್ತು ತುರ್ಕಿ ಮಹತ್ವದ ತ್ರಿಪಕ್ಷೀಯ ರಕ್ಷಣಾ ಒಪ್ಪಂದಕ್ಕೆ ಸಹಿ ಹಾಕಿದ್ದವು. ನ್ಯಾಟೋ ಮಾದರಿಯಲ್ಲೇ ರೂಪಿಸಲಾದ ಈ ಒಪ್ಪಂದದ ಮುಖ್ಯ ನಿಯಮವೆಂದರೆ, ಮೂರು ದೇಶಗಳಲ್ಲಿ ಯಾವುದೇ ಒಂದು ದೇಶದ ಮೇಲೆ ಸಶಸ್ತ್ರ ದಾಳಿ ನಡೆದರೂ, ಅದನ್ನು ಎಲ್ಲ ಮೂರೂ ದೇಶಗಳ ಮೇಲಿನ ದಾಳಿ ಎಂದೇ ಪರಿಗಣಿಸಲಾಗುತ್ತದೆ ಎಂಬ ಒಪ್ಪಂದಕ್ಕೆ ಬಂದಿದ್ದವು.

ಈಗ ಸೌದಿ ಅರೇಬಿಯಾದ ಮೇಲೆ ಹೌತಿ ಬಂಡುಕೋರರ ಉಪಟಳ ಹೆಚ್ಚಾಗುತ್ತಿದ್ದಂತೆ, ಈ ಒಪ್ಪಂದವನ್ನು ಕಾಗದದಿಂದ ನೇರವಾಗಿ ಯುದ್ಧಭೂಮಿಗೆ ತರಲು ಮೆಕ್ಕಾ ರಕ್ಷಣಾ ಮೈತ್ರಿಕೂಟ ನಿರ್ಧರಿಸಿದೆ. ಸಭೆಯ ನಂತರ ಹೊರಬಿದ್ದ ಜಂಟಿ ಹೇಳಿಕೆಯ ಪ್ರಕಾರ, ಸೌದಿ ನೆಲದಲ್ಲಿ ಮಿಲಿಟರಿ ಪಡೆಗಳನ್ನು ತಕ್ಷಣವೇ ನಿಯೋಜಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎನ್ನಲಾಗಿದೆ.

ಈ ನಿರ್ಧಾರದ ಕುರಿತು ಟಿವಿ ಸಂದರ್ಶನವೊಂದರಲ್ಲಿ ಮಾತನಾಡಿದ ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಮಹತ್ವದ ಸುಳಿವು ನೀಡಿದ್ದಾರೆ. ಸೌದಿ ಪಡೆಗಳು ನೇರ ಯುದ್ಧ ಕಾರ್ಯಾಚರಣೆ ನಡೆಸುತ್ತಿದ್ದರೆ, ಪಾಕಿಸ್ತಾನ ಮತ್ತು ಟರ್ಕಿ ಪಡೆಗಳು ರಕ್ಷಣಾತ್ಮಕ ಹಾಗೂ ಯುದ್ಧ ಬೆಂಬಲದ ಪಾತ್ರವನ್ನು ವಹಿಸಲಿವೆ ಎಂದಿದ್ದಾರೆ.

ಪಾಕಿಸ್ತಾನದ ಪಡೆಗಳು ಶತ್ರುಗಳ ಚಲನವಲನದ ಮೇಲೆ ಕಣ್ಣಿಡುವ ಅತ್ಯಾಧುನಿಕ ಕಣ್ಗಾವಲು ಮತ್ತು ಕಾರ್ಯಾಚರಣೆಯಲ್ಲಿ ಈಗಾಗಲೇ ಸಕ್ರಿಯವಾಗಿವೆ. ಸೌದಿ ಅರೇಬಿಯಾ ಕೋರಿದ ಎಲ್ಲಾ ಮಿಲಿಟರಿ ಸಹಾಯವನ್ನು ಯಾವುದೇ ಹಿಂಜರಿಕೆಯಿಲ್ಲದೆ ನೀಡಲಾಗುತ್ತಿದೆ ಎಂದು ಹೇಳಿವೆ.

ಇತ್ತೀಚಿನ ದಿನಗಳಲ್ಲಿ ಸೌದಿಯ ನಗರಗಳು, ಆರ್ಥಿಕ ಕೇಂದ್ರಗಳು ಹಾಗೂ ತೈಲ ಸಂಸ್ಕರಣಾಗಾರಗಳನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ದಾಳಿಗಳನ್ನು ಮೈತ್ರಿಕೂಟ ಕಟುವಾಗಿ ಖಂಡಿಸಿದೆ. ಅದರಲ್ಲೂ ಮುಸ್ಲಿಮರ ಪವಿತ್ರ ಕ್ಷೇತ್ರಗಳಾದ ಮೆಕ್ಕಾ ಮತ್ತು ಮದೀನಾಗಳನ್ನು ಗುರಿಯಾಗಿಸುವ ಯಾವುದೇ ದುಸ್ಸಾಹಸವನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ರವಾನಿಸಲಾಗಿದೆ. ಯೆಮೆನ್‌ನಲ್ಲಿ ಹೌತಿಗಳು ವಶಪಡಿಸಿಕೊಂಡಿದ್ದ ಪ್ರಮುಖ ಪ್ರದೇಶಗಳನ್ನು ಮರುವಶಕ್ಕೆ ಪಡೆಯಲು ಸೌದಿ ನೇತೃತ್ವದ ಪಡೆಗಳು ಮಿಲಿಟರಿ ಆಪರೇಷನ್ ಪ್ರಾರಂಭಿಸಿವೆ. ಇದಕ್ಕೆ ಪ್ರತಿಯಾಗಿ ಹೌತಿಗಳು ಸೌದಿ ಮೇಲೆ ದಾಳಿ ತೀವ್ರಗೊಳಿಸುವ ಸಾಧ್ಯತೆ ದಟ್ಟವಾಗಿದೆ. ಈ ದಾಳಿ-ಪ್ರತಿದಾಳಿಯ ಉದ್ವಿಗ್ನತೆಯ ನಡುವೆಯೇ ಈ ತುರ್ತು ಸಭೆ ನಡೆದಿದ್ದು, ಇಡೀ ಅರಬ್ ಜಗತ್ತು ಈಗ ಸೌದಿ-ಪಾಕ್-ತುರ್ಕಿ ಮೈತ್ರಿಕೂಟದ ಮುಂದಿನ ನಡೆಯನ್ನು ಕುತೂಹಲದಿಂದ ಗಮನಿಸುತ್ತಿದೆ.




**ನವದೆಹಲಿ, ಅ. 6:** ಭಾರತೀಯ ಮಹಿಳಾ ಕ್ರಿಕೆಟ್ ತಂಡದ ದಿಗ್ಗಜೆ ಹಾಗೂ ಸಾರ್ವಕಾಲಿಕ ಶ್ರೇಷ್ಠ ನಾಯಕಿಯರಲ್ಲಿ ಒಬ್ಬರಾದ ಹರ್ಮನ್‌ಪ್ರೀತ್ ಕೌರ್ ಮಂಗಳವಾರ ಅಚ್ಚರಿಯ ನಿರ್ಧಾರ ಪ್ರಕಟಿಸಿದ್ದಾರೆ. ತಂಡವನ್ನು ದೀರ್ಘಕಾಲ ಯಶಸ್ವಿಯಾಗಿ ಮುನ್ನಡೆಸಿಕೊಂಡು ಬಂದಿರುವ ಅವರು ಮುಂದೆ ಯಾವುದೇ ಮಾದರಿಯಲ್ಲಿ (ಟೆಸ್ಟ್, ಏಕದಿನ ಹಾಗೂ ಟಿ20) ನಾಯಕಿಯಾಗಿ ಮುಂದುವರಿಯುವುದಿಲ್ಲ ಎಂದು ಅಧಿಕೃತವಾಗಿ ತಿಳಿಸಿದ್ದಾರೆ.

ಈ ಮೂಲಕ ಉಪನಾಯಕಿ ಸ್ಮೃತಿ ಮಂದನಾ ಅವರ ಕೈಗೆ ಮುಂದಿನ ನಾಯಕತ್ವದ ಅಧಿಕಾರ ಹಸ್ತಾಂತರಾಗಲು ದಾರಿ ಸುಗಮಗೊಂಡಿದೆ.

ಆದರೆ ಹರ್ಮನ್ ಅವರು ದಿಢೀರನೇ ನಾಯಕತ್ವ ತ್ಯಜಿಸಿದ್ದೇಕೆ ಅನ್ನೋ ಪ್ರಶ್ನೆ ಇದೀಗ ಎಲ್ಲರಲ್ಲೂ ಮೂಡಿದೆ. ತಂಡದ ಪ್ರದರ್ಶನಗಳ ಅವಲೋಕನ ಹಾಗೂ ಮುಂದಿನ ಭವಿಷ್ಯದ ರೂಪುರೇಷೆಗಳನ್ನು ಸಿದ್ಧಪಡಿಸುವ ಸಲುವಾಗಿ ಅಸ್ಸಾಂನ ಗುವಾಹಟಿಯಲ್ಲಿ ಇತ್ತೀಚೆಗಷ್ಟೇ ಬಿಸಿಸಿಐ ವಿಶೇಷ ಪರಾಮರ್ಶೆ ಸಭೆಯನ್ನು ನಡೆಸಿತ್ತು. ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಮಹತ್ವದ ಸಭೆಯಲ್ಲಿ ಸ್ವತಃ ಹರ್ಮನ್ಪ್ರೀತ್ ಕೌರ್, ಉಪನಾಯಕಿ ಸ್ಮೃತಿ ಮಂದನಾ ಹಾಗೂ ಮುಖ್ಯ ಕೋಚ್ ಅಮೋಲ್ ಮುಜುಮ್ದಾರ್ ಉಪಸ್ಥಿತರಿದ್ದರು.

ಈ ಸಭೆ ನಡೆದ ಕೆಲವೇ ದಿನಗಳಲ್ಲಿ ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ತೊರೆದಿರುವುದು ಕ್ರಿಕೆಟ್ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಸಭೆಯಲ್ಲಿ ಹರ್ಮನ್‌ಪ್ರೀತ್ ಅವರನ್ನು ನಾಯಕತ್ವದಿಂದ ಕೆಳಗಿಳಿಯುವಂತೆ ಬಿಸಿಸಿಐ ಒತ್ತಡ ಹೇರಿತ್ತೇ ಅಥವಾ ಅವರೇ ಸ್ವಯಂಪ್ರೇರಿತರಾಗಿ ಈ ನಿರ್ಧಾರ ಕೈಗೊಂಡರೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲವಾಗಿಲ್ಲ.

# ನೈಜೀರಿಯಾದಲ್ಲಿ ಸೇನಾ ವಿಮಾನ ಪತನ: 32 ಮಂದಿ ಸಾವು

ಲಾಗೋಸ್, ಅ.6: ನೈಜೀರಿಯಾ ವಾಯುಪಡೆಗೆ ಸೇರಿದ್ದ ಲಘು ವಿಮಾನ ಪತನಗೊಂಡಿದ್ದು 32 ಜನರು ಮೃತಪಟ್ಟಿದ್ದಾರೆ ಎಂದು ಸರ್ಕಾರದ ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ದುರಂತದಲ್ಲಿ ಯಾರೊಬ್ಬರೂ ಬದುಕುಳಿದಿಲ್ಲ ಎಂದು ಖಚಿತಪಡಿಸಿದ್ದಾರೆ. ಅಪಘಾತದ ನಿಖರ ಕಾರಣ ತಿಳಿಯಲು ತಕ್ಷಣವೇ ಸಮಗ್ರ ತನಿಖೆ ನಡೆಸುವಂತೆ ವಾಯುಪಡೆಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ವಿಮಾನ ಬೆನಿನ್ ನಗರದಿಂದ ಲಾಗೋಸ್‌ಗೆ ತೆರಳುತ್ತಿತ್ತು. ಮೃತಪಟ್ಟ 32 ಜನರಲ್ಲಿ 25 ಪ್ರಯಾಣಿಕರು ಹಾಗೂ ಏಳು ಸಿಬ್ಬಂದಿ ಸೇರಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ದಕ್ಷಿಣ ನೈಜೀರಿಯಾದ ಕರಾವಳಿ ತೈಲ ಸಂಸ್ಕರಣ ಪ್ರದೇಶವಾದ ಒಂಡೋ ರಾಜ್ಯದ ಇಗ್ಬೊಕೊಡಾ ಬಳಿ ಈ ಅವಘಡ ಸಂಭವಿಸಿದೆ.

ವಿಮಾನವು ಸಮೀಪದ ನೌಕಾ ನೆಲೆಯ ಬಳಿಯ ಜೌಗು ಪ್ರದೇಶಕ್ಕೆ ಅಪ್ಪಳಿಸಿದೆ. ವಿಮಾನವು ಬೆನಿನ್ ನಗರದಿಂದ ದೇಶದ ಪ್ರಮುಖ ಆರ್ಥಿಕ ಕೇಂದ್ರವಾದ ಲಾಗೋಸ್‌ಗೆ ವಾಡಿಕೆಯ ಕಾರ್ಯಾಚರಣೆಯಲ್ಲಿದ್ದಾಗ ಬೆಳಗ್ಗೆ ಸುಮಾರು 9 ಗಂಟೆಗೆ ಪತನಗೊಂಡಿದೆ.

ಪತನಗೊಂಡ ವಿಮಾನವನ್ನು ಅವಳಿ-ಎಂಜಿನ್‌ನ ಟರ್ಬೊಪ್ರೊಪ್ ಎಟಿಆರ್-42 ಎಂದು ಗುರುತಿಸಲಾಗಿದೆ. ಇದು ಸಾಮಾನ್ಯವಾಗಿ 30 ರಿಂದ 50 ಪ್ರಯಾಣಿಕರನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ.ಅಪಘಾತದ ವೇಳೆ ಭಾರೀ ಗುಡುಗಿನಂತಹ ಶಬ್ದ ಕೇಳಿಬಂತು ಎಂದು ಸ್ಥಳೀಯರು ತಿಳಿಸಿದ್ದಾರೆ.

ಜೌಗು ಪ್ರದೇಶದಲ್ಲಿ ಮೀನುಗಾರಿಕೆ ನಡೆಸುತ್ತಿದ್ದವರು ಸ್ಥಳೀಯ ನೌಕಾ ನೆಲೆಗೆ ಮಾಹಿತಿ ನೀಡಿದ ಬಳಿಕ ದೋಣಿಗಳ ಮೂಲಕ ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಿದವು. ದುರಂತ ಸ್ಥಳದ ಪರಿಸ್ಥಿತಿಯನ್ನು ವಿವರಿಸಿದ ಸ್ಥಳೀಯರು, ವಿಮಾನವು ನದಿಯ ಬಳಿ ಪತನಗೊಂಡಿದ್ದು, ಅದರ ಕೆಲವು ಅವಶೇಷಗಳು ನೀರಿನಲ್ಲಿ ಮುಳುಗಿವೆ, ನದಿಯ ದಂಡೆಯ ಮೇಲೆ ಶೂ, ಚಪ್ಪಲಿಗಳು, ಬಟ್ಟೆಗಳು ಹಾಗೂ ಮೃತದೇಹಗಳ ಭಾಗಗಳು ಪತ್ತೆಯಾಗಿವೆ ಎಂದು ಅವರು ತಿಳಿಸಿದ್ದಾರೆ.

# ಕರ್ನಾಟಕ ಪಿಕಲ್‌ಬಾಲ್ ಪ್ರೀಮಿಯರ್ ಲೀಗ್: ಜೆರ್ಸಿ ಅನಾವರಣ

**ಬೆಂಗಳೂರು, ಅ.6:** ಕರ್ನಾಟಕ ಸ್ಟೇಟ್ ಪಿಕಲ್‌ಬಾಲ್ ಅಸೋಸಿಯೇಷನ್ ಮತ್ತು ಎಂಟ್ರೋಪಿ ಸ್ಪೋರ್ಟ್ಸ್ ಅಂಡ್ ಇವೆಂಟ್ಸ್ ಸಹಯೋಗದಲ್ಲಿ ನಡೆಯುತ್ತಿರುವ ಪ್ರಥಮ ಆವೃತ್ತಿಯ 'ಕರ್ನಾಟಕ ಪಿಕಲ್‌ಬಾಲ್ ಪ್ರೀಮಿಯರ್ ಲೀಗ್' ಟೂರ್ನಿಯ ಅಧಿಕೃತ ಜೆರ್ಸಿ ಬಿಡುಗಡೆ ಸಮಾರಂಭವು ಬೆಂಗಳೂರಿನ ಫೀನಿಕ್ಸ್ ಮಾರ್ಕೆಟ್‌ಸಿಟಿಯಲ್ಲಿ ವಿಜೃಂಭಣೆಯಿಂದ ಜರುಗಿತು.ಈ ವರ್ಣರಂಜಿತ ಕಾರ್ಯಕ್ರಮದಲ್ಲಿ ಟೂರ್ನಿಯಲ್ಲಿ ಪಾಲ್ಗೊಳ್ಳಲಿರುವ ಎಲ್ಲಾ ಏಳು ಫ್ರಾಂಚೈಸಿಗಳಾದ ಬಳ್ಳಾರಿ ಟೈಗರ್ಸ್, ಬೆಂಗಳೂರು ಚಾರ್ಜರ್ಸ್, ಮಂಗಳೂರು ರೋರರ್ಸ್, ಕೂರ್ಗ್ ಒರಿಜಿನಲ್ಸ್, ಬೆಳಗಾವಿ ಬ್ಯಾರನ್ಸ್, ತುಮಕೂರು ಟೈಟನ್ಸ್ ಮತ್ತು ಮೈಸೂರು ರಾಯಲ್ಸ್ ತಂಡಗಳ ಆಟಗಾರರು ತಮ್ಮ ತಂಡದ ಜೆರ್ಸಿಗಳನ್ನು ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ಕೆಪಿಪಿಎಲ್ ನಾಯಕರೊಂದಿಗೆ, ತಂಡಗಳ ಮಾಲೀಕರು, ತರಬೇತುದಾರರು ಹಾಗೂ ಕ್ರೀಡಾಭಿಮಾನಿಗಳು ಭಾಗವಹಿಸಿದ್ದರು. ಈ ಕೂಟದ ಪ್ರಮುಖ ಆಕರ್ಷಣೆಯಾಗಿ ಕನ್ನಡ ಚಿತ್ರರಂಗದ ಖ್ಯಾತ ನಟ ಹಾಗೂ ಕೆಪಿಪಿಎಲ್ ಬ್ರ್ಯಾಂಡ್ ಅಂಬಾಸಿಡರ್ ಶ್ರೀಮುರಳಿ ಅವರು ಆಗಮಿಸಿ ಜೆರ್ಸಿ ಅನಾವರಣಗೊಳಿಸಿ ಶುಭ ಹಾರೈಸಿದರು. ತಂಡಗಳ ಹರಾಜು ಮತ್ತು ಆಟಗಾರರ ಆಯ್ಕೆ ಪ್ರಕ್ರಿಯೆಯ ನಂತರ ನಡೆದ ಈ ಜೆರ್ಸಿ ಬಿಡುಗಡೆ ಕಾರ್ಯಕ್ರಮವು, ರಾಜ್ಯದಲ್ಲಿ ಪಿಕಲ್‌ಬಾಲ್ ಕ್ರೀಡೆಯ ಜಾಗೃತಿಯನ್ನು ಹೆಚ್ಚಿಸುವ ಜೊತೆಗೆ ಮೊದಲ ಆವೃತ್ತಿಯ ಪಂದ್ಯಾವಳಿಗೆ ಬಿರುಸಿನ ಚಾಲನೆ ನೀಡಿದೆ.

# ಅರಬ್ಬರ ನಾಡಲ್ಲಿ ಸಂಭ್ರಮದ ಕರ್ನಾಟಕ ರಾಜ್ಯೋತ್ಸವ, ದುಬೈ ಕರ್ನಾಟಕ ರಾಜ್ಯೋತ್ಸವ

**ಮುಂಬಯಿ, ಅ.6:** ಜಗತ್ತಿನಾದ್ಯಂತ ಹೆಸರಾಂತ ಸಮಾಜಸೇವಕ ಡಾ.ರೊನಾಲ್ಡ್ ಕೊಲಾಸೊ ಅವರ ದುಬೈ ಕನ್ನಡ ಪರ ಸಂಘಗಳ ಐಕ್ಯತೆ ಮೂಡಿಸುವ ನಿರಂತರ ಪ್ರಯತ್ನದ ಫಲವಾಗಿ, ಕರ್ನಾಟಕ ಸಂಘ ದುಬಾಯಿ ಮತ್ತು ಕನ್ನಡಿಗರ ಕೂಟ ದುಬಾಯಿ ಸಹಯೋಗದಲ್ಲಿ ಏಕತೆಯ ರಾಜ್ಯೋತ್ಸವದ ಮಹಾಸಂಭ್ರಮ ಕರ್ನಾಟಕ ರಾಜ್ಯೋತ್ಸವ 2026 ನ್ನು ಭಾನುವಾರ, 22 ನವೆಂಬರ್ 2026ರಂದು ದುಬಾಯಿಯ ಅಲ್ ಖುಸೈಸ್‌ನ ನ್ಯೂ ಡಾನ್ ಪ್ರೈವೇಟ್ ಸ್ಕೂಲ್‌ನಲ್ಲಿ ಅದ್ದೂರಿಯಾಗಿ ಆಯೋಜಿಸಲು ತೀರ್ಮಾನಿಸಲಾಯಿತು.

ಯುಎಇಯ ಕನ್ನಡಿಗರನ್ನು ಒಂದೇ ವೇದಿಕೆಯಡಿ ಒಗ್ಗೂಡಿಸಿ ಕರ್ನಾಟಕದ ಭಾಷೆ, ಕಲೆ, ಸಂಸ್ಕೃತಿ, ಪರಂಪರೆ ಹಾಗೂ ಕನ್ನಡಿಗರ ಏಕತೆಯನ್ನು ಸಂಭ್ರಮಿಸುವ ಉದ್ದೇಶದಿಂದ ಈ ಬೃಹತ್ ರಾಜ್ಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ದುಬಾಯಿಯ ವಿವಿಧ ಕನ್ನಡ ಸಂಘ-ಸಂಸ್ಥೆಗಳನ್ನು ಒಂದೇ ವೇದಿಕೆಯಡಿ ಕರೆತಂದು "ಏಕತೆಯಲ್ಲಿ ಕರ್ನಾಟಕ" ಎಂಬ ಅನಿವಾಸಿ ಕನ್ನಡಿಗರ ಐಕ್ಯದ ಆಶಯವನ್ನು ಮತ್ತಷ್ಟು ಬಲಪಡಿಸುವ ಪ್ರಯತ್ನವಾಗಿ ಈ ಬಾರಿಯ ರಾಜ್ಯೋತ್ಸವವನ್ನು ವಿಶೇಷವಾಗಿ ರೂಪಿಸಲಾಗಿದೆ. ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮೇಲಿನ ಅಭಿಮಾನವನ್ನು ಮುಂದಿನ ಪೀಳಿಗೆಗೂ ತಲುಪಿಸುವುದರ ಜೊತೆಗೆ ಯುಎಇಯ ಕನ್ನಡಿಗರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವುದು ಕಾರ್ಯಕ್ರಮದ ಆಶಯವಾಗಿದೆ ಎಂದು ಕರ್ನಾಟಕ ಸಂಘ ದುಬಾಯಿ ಅಧ್ಯಕ್ಷ ಶಶಿಧರ್ ನಾಗರಾಜಪ್ಪ ಮತ್ತು ಕನ್ನಡಿಗರ ಕೂಟ ದುಬಾಯಿ ಅಧ್ಯಕ್ಷ ಅರುಣ್‌ಕುಮಾರ್ ಒಮ್ಮತ ಸೂಚಿಸಿದರು.

ಖ್ಯಾತ ಉದ್ಯಮಿ ಹಾಗೂ ಸಮಾಜಸೇವಕರಾದ ಡಾ। ರೊನಾಲ್ಡ್ ಕೊಲಾಸೊ ಅವರು ಈ ಎರಡು ಸಂಘಗಳ ಸಮನ್ವಯದ ಉಸ್ತುವಾರಿಯಾಗಿ ಯಶಸ್ಸಿ ಯಾಗಿದ್ದು ಸಂಪೂರ್ಣ ಸಹಕಾರ ಮತ್ತು ಸಹಾಯ ಘೋಷಿಸಿದರು ಹಾಗು ಎರಡು ಸಂಘದ ಅಧ್ಯಕ್ಷರಿಗೆ ಮತ್ತು ಕಾರ್ಯಕಾರಿ ಸಮಿತಿಗಳ ಈ ಒಪ್ಪಂದಕ್ಕೆ ಅಭಿನಂದನೆ ಸೂಚಿಸಿದರು.

ಕೆಎನ್‌ಆರ್‌ಐ ಅಧ್ಯಕ್ಷ ಹಾಗೂ ಖ್ಯಾತ ಉದ್ಯಮಿ ಪ್ರವೀಣ್ ಕುಮಾರ್ ಶೆಟ್ಟಿ ಅವರು ತಮ್ಮ ಸಹಯೋಗ ಮತ್ತು ಸಹಕಾರ ವ್ಯಕ್ತ ಪಡಿಸಿದರು.

ಈ ವರ್ಷದಿಂದ ದುಬಾಯಿನಲ್ಲಿ ಐಕ್ಯತೆಯ ಕರ್ನಾಟಕ ರಾಜ್ಯೋತ್ಸವ ನಡೆಯಲಿದ್ದು, ಆಯೋಜಕ ಸಂಸ್ಥೆಯಾದ ಕರ್ನಾಟಕ ಸಂಘ ದುಬಾಯಿ ಅಧ್ಯಕ್ಷ ಶಶಿಧರ್ ನಾಗರಾಜಪ್ಪ ಮತ್ತು ಕಾರ್ಯಕಾರಿ




ಸಮಿತಿಯ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದ್ದು ಸಹಯೋಗಿ ಸಂಸ್ಥೆಯಾದ ಕನ್ನಡಿಗರ ಕೂಟ ದುಬಾಯಿ ಅಧ್ಯಕ್ಷ ಅರುಣ್ ಕುಮಾರ್ ಮತ್ತು ತಂಡ ಸಕಲ ಸಹಕಾರ ಮತ್ತು ಸಂಘಟನಾತ್ಮಕ ಸಹಭಾಗಿತ್ವ ಘೋಷಿಸದರು.

> **ಒಗ್ಗಟ್ಟಿನ ಒಲವಿನಿಂದ ಒಮ್ಮೂಡಿದ ಒಮ್ಮತದ ಉತ್ಸವ**

ಮುಂದಿನ ವರ್ಷದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ ಮುಖ್ಯ ಆಯೋಜನೆಯನ್ನು ಕನ್ನಡಿಗರ ಕೂಟ ದುಬಾಯಿಯು ಕರ್ನಾಟಕ ಸಂಘ ದುಬಾಯಿನ ಸಹಯೋಗದಿಂದ ನಿರ್ವಹಿಸುವುದಾಗಿ ಘೋಷಿಸಲಾಯಿತು.

ಸಮಾರಂಭದಲ್ಲಿ ಹಲವು ಗಣ್ಯ ಅತಿಥಿಗಳು, ಪ್ರಮುಖ ಭಾಷಣಕಾರರು ಹಾಗೂ ವಿವಿಧ ಕ್ಷೇತ್ರಗಳ ಸಾಧಕರು ಭಾಗವಹಿಸಲಿದ್ದಾರೆ. ಕರ್ನಾಟಕದ ವೈವಿಧ್ಯಮಯ ಕಲೆ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಹಲವು ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಕರ್ನಾಟಕ ಮತ್ತು ಯುಎಇಯ ಪ್ರತಿಭಾವಂತ ಕಲಾವಿದರು ತಮ್ಮ ಕಲಾ ಪ್ರದರ್ಶನಗಳ ಮೂಲಕ ರಾಜ್ಯೋತ್ಸವದ ಸಂಭ್ರಮಕ್ಕೆ ಮೆರುಗು ನೀಡಲಿದ್ದಾರೆ.

ಇದೇ ಸಂದರ್ಭದಲ್ಲಿ ಕರ್ನಾಟಕ ಸಂಘ ದುಬಾಯಿ ನೀಡುವ ಪ್ರತಿಷ್ಠಿತ ದುಬಾಯಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಹಾಗೂ ವಿವಿಧ ರಂಗಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ ಸಾಧಕರಿಗೆ "ಸೇವಾ ರತ್ನ" ಪ್ರಶಸ್ತಿ ಪ್ರಧಾನ ಮಾಡಲಾಗುವುದು.

ಅದೇ ರೀತಿ ಕನ್ನಡಿಗರ ಕೂಟ ದುಬಾಯಿಯು ಹಲವು ವರ್ಷಗಳಿಂದ ಕರ್ನಾಟಕದ ಸಾಧಕರಿಗೆ ನೀಡುವ " ಅಂತಾರಾಷ್ಟ್ರೀಯ ಕನ್ನಡ ರತ್ನ" ಪ್ರಶಸ್ತಿ ಮತ್ತು ಮಧ್ಯ ಪ್ರಾಚ್ಯಾದ ಸಾಧಕರಿಗೆ ನೀಡಿ ಗೌರವಿಸುವ ಡಾ। ಪುನೀತ್ ರಾಜ್ ಕುಮಾರ್ ಪ್ರಮುಖ ಪ್ರಶಸ್ತಿಯನ್ನು ಸಹ ನೀಡಲಾಗುವುದು ಎಂದು ಅಧ್ಯಕ್ಷ ಅರುಣ್ ಕುಮಾರ್ ತಿಳಿಸಿದರು.

ಪ್ರತೀತಿಯಂತೆ ದುಬಾಯಿ ಕರ್ನಾಟಕ ರಾಜ್ಯೋತ್ಸವದಲ್ಲಿ ಪ್ರತೀ ವರ್ಷವೂ ಕನ್ನಡ ಮಿತ್ರರು ಯು.ಎ.ಇ ಆಯೋಜನೆಯ ವಿಶ್ವದ ಅತೀ ದೊಡ್ಡ ಹೊರನಾಡ ಕನ್ನಡ ಪಾಠ ಶಾಲೆ ಯ 13 ನೇ ವರ್ಷದ ಉಚಿತ ತರಗತಿಗಳಿಗೆ ಔಪಚಾರಿಕ ಚಾಲನೆ ನೀಡಲಾಗುವುದು ಎಂದು ಅಧ್ಯಕ ಶಶಿಧರ್ ನಾಗರಾಜಪ್ಪ ತಿಳಿಸಿದರು.

ವೇದಿಕೆಯಲ್ಲಿ ಕರ್ನಾಟಕ ಸಂಘ ದುಬಾಯಿಯ ಉಪಾಧ್ಯಕ್ಷ ದಯಾ ಕಿರೋಡಿಯನ್ ಮತ್ತು ಕನ್ನಡಿಗರ ಕೂಟ ದುಬಾಯಿಯ ಉಪಾಧ್ಯಕ್ಷ ಮಲ್ಲಿಕಾರ್ಜುನ ಅಂಗಡಿ ಉಪಸ್ಥಿತರಿದ್ದರು ಸಹಮತ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಬಿಸಿಸಿಐ ಅಧ್ಯಕ್ಷ. ಹಿದಾಯತ್ ಅಡ್ಡೂರ್, ಕನ್ನಡಿಗರ ಕೂಟ ದುಬಾಯಿಯ ಮುಖ್ಯ ಸಲಹಾಗರರಾದ ಸಾದನ್ ದಾಸ್ ಮತ್ತು ಕರ್ನಾಟಕ ಸಂಘ ದುಬಾಯಿಯ ಸಲಹೆಗಾರರಾದ ರೊನಾಲ್ಡ್ ಮಾರ್ಟಿಸ್ ಅವರು ಈ ಐತಿಹಾಸಿಕ ಕ್ಷಣಕ್ಕೆ ಅಭಿನಂದನೆ ಸಲ್ಲಿಸಿದರು.

ಯುಎಇಯಾದ್ಯಂತ ನೆಲೆಸಿರುವ ಎಲ್ಲ ಕನ್ನಡಿಗರು ತಮ್ಮ ಕುಟುಂಬದವರು ಹಾಗೂ ಸ್ನೇಹಿತರೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕನ್ನಡಿಗರ ಏಕತೆ ಮತ್ತು ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಈ ಮಹಾಸಂಭ್ರಮಕ್ಕೆ ಸಾಕ್ಷಿಯಾಗಬೇಕೆಂದು ಆಯೋಜಕರು ಆತ್ಮೀಯವಾಗಿ ಆಹ್ವಾನಿಸಿದ್ದಾರೆ. ಒಟ್ಟಾಗಿ ಸೇರೋಣ, ಒಟ್ಟಾಗಿ ಸಂಭ್ರಮಿಸೋಣ. ಕನ್ನಡದ ಕಂಪು, ಕರ್ನಾಟಕದ ಸಂಸ್ಕೃತಿ ಮತ್ತು ಕನ್ನಡಿಗರ ಏಕತೆಯನ್ನು ದುಬೈನಲ್ಲಿ ಮೊಳಗಿಸೋಣ. ಜೈ ಕರ್ನಾಟಕ! ಜೈ ಕನ್ನಡ!